ಸಂಪುಟ: 04 ಸಂಚಿಕೆ: 324 ಪುಟಗಳು: 08 ಬುಧವಾರ 05 ಫೆಬ್ರವರಿ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಎಲ್ಲಾರ ಜೊತೆಯಲ್ಲಿ ಇರು, ಎಲ್ಲಾರಂತೆ ನಗುತ್ತಾ ಇರು, ಅಷ್ಟು ಬಿಟ್ಟರೆ ಎಲ್ಲಾರೂ ನಮ್ಮವರೆಂದು ಹೆಮ್ಮೆ ಪಡಬೇಡ, ನಟನೆಯಿಂದ ಕೂಡಿದ ಮನುಷ್ಯನ ಪ್ರೇಮ ವಿಷಕ್ಕಿಂತ ಅಪಾಯಕಾರಿ ಎಂದು ಮರೆಯಬೇಡ.

## ಮೈಕ್ರೋ ಫೈನಾನ್ಸ್ ಕಿರುಕುಳದ ಹಿಂದೆ ಕಾಣದ ಕೈಗಳು ಇರಬಹುದು

• **ಉದಯವಾಹಿನಿ, ಬೆಂಗಳೂರು**

ಮೈಕ್ರೋ ಫೈನಾನ್ಸ್ ಕಿರುಕುಳದ ಹಿಂದೆ ಕಾಣದ ಕೈಗಳು ಇರಬಹುದು ಎಂದು ಬಿಜೆಪಿ ನಾಯಕ ಸಿ.ಟಿ ರವಿ ಅನುಮಾನ ವ್ಯಕ್ತಪಡಿಸಿದ್ದಾರೆ. ಮೈಕ್ರೋ ಫೈನಾನ್ಸ್ ಕಿರುಕುಳ ಕಡಿವಾಣಕ್ಕೆ ರಾಜ್ಯ ಸರ್ಕಾರಕ್ಕಿಂತ ಕೇಂದ್ರ ಸರ್ಕಾರ ನಿಯಮ ತರಬೇಕು ಎಂಬ ಕಾಂಗ್ರೆಸ್ ನಾಯಕರ ಹೇಳಿಕೆಗೆ, ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಜನರ ಸಮಸ್ಯೆ ಪರಿಹಾರ ಮಾಡುತ್ತಿದೆ. ಹೀಗೆ ಅನೇಕ ಸಂಸ್ಥೆಗಳು ಒಳ್ಳೆಯ ಕೆಲಸ ಮಾಡುತ್ತಿವೆ. ನಾವು ಮೊದಲು ಕಿರುಕುಳ ಕೊಡುವ ಸಂಸ್ಥೆಗಳಿಗೆ ಕಡಿವಾಣ ಹಾಕಬೇಕು. ಕಡಿವಾಣ ಹಾಕಲು ರಾಜ್ಯದ ಕಾಯ್ದೆಯಲ್ಲಿ ಅವಕಾಶ ಇದೆ. ಆ ಕಾಯ್ದೆ ನಾವು ಬಳಸಿಕೊಳ್ಳೋಣ. ರಾಜ್ಯಪಾಲರು ಸುಗ್ರೀವಾಜ್ಞೆಗೆ ಸಹಿ ಹಾಕಿದ್ದಾರೆ. ಅದನ್ನ ಬಳಕೆ ಮಾಡಿಕೊಳ್ಳೋಣ. ಬಳಕೆ ಆಗುವ ಮುನ್ನ ಶಸ್ತ್ರತ್ಯಾಗ ಮಾತು ಯಾಕೆ ಎಂದು ತಿರುಗೇಟು ಕೊಟ್ಟಿದ್ದಾರೆ.

## ಕೆಲಸದ ಅವಧಿಯನ್ನು ವಾರದಲ್ಲಿ 70 ಅಥವಾ 90 ಗಂಟೆಗೆ ಏರಿಕೆ

• **ಉದಯವಾಹಿನಿ, ನವದೆಹಲಿ**

ದೇಶದಲ್ಲಿ ಕೆಲಸದ ಅವಧಿಯನ್ನು ವಾರಕ್ಕೆ 70 ಹಾಗೂ 90 ಗಂಟೆಗೆ ಹೆಚ್ಚಿಸುವಂತ ಯಾವ ಪ್ರಸ್ತಾವನೆಗಳೂ ಕೇಂದ್ರ ಸರ್ಕಾರದ ಮುಂದಿಲ್ಲ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭ ಕರಂದ್ಲಾಜೆ ಸ್ಪಷ್ಟಪಡಿಸಿದ್ದಾರೆ.ಕೆಲ ಉದಿಮೆಗಳ ಮಾಲೀಕರಿಂದ ವ್ಯಕ್ತವಾಗುತ್ತಿರುವ ಪರ–ವಿರೋಧ ಚರ್ಚೆ ನಡುವೆ ಕೇಂದ್ರ ಸರ್ಕಾರ ಈ ಮಾಹಿತಿ ನೀಡಿದೆ. ಲೋಕಸಭೆಗೆ ನೀಡಿದ ಲಿಖಿತ ಉತ್ತರದಲ್ಲಿ,ಕೆಲಸದ ಅವಧಿಯನ್ನು ವಾರದಲ್ಲಿ 70 ಅಥವಾ 90 ಗಂಟೆಗೆ ಏರಿಕೆ ಮಾಡುವ ಯಾವ ಪ್ರಸ್ತಾವನೆಯೂ ಸರ್ಕಾರದ ಮುಂದೆ ಇಲ್ಲ.

ನೌಕರರು ಸಮವರ್ತಿ ಪಟ್ಟಿಯ ಅಡಿ ಬರುವುದರಿಂದ ಕಾರ್ಮಿಕ ಕಾನೂನುಗಳಿಗೆ ಸಂಬಂಧಿಸಿದ ನಿರ್ಧಾರಗಳನ್ನು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ತಮ ವ್ಯಾಪ್ತಿಯಲ್ಲಿ ತೆಗೆದುಕೊಳ್ಳುತ್ತವೆ ಎಂದು ತಿಳಿಸಿದ್ದಾರೆ. ಕೇಂದ್ರ ಬಜೆಟ್ ಮಂಡನೆಗೂ ಮುನ್ನ ಸಲ್ಲಿಸಲಾದ ಆರ್ಥಿಕ ಸಮೀಕ್ಷೆಯಲ್ಲಿ, ವಾರದಲ್ಲಿ 60 ಗಂಟೆ ಕೆಲಸ ಮಾಡುವುದರಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. 12 ಗಂಟೆಗಿಂತಲೂ ಅಧಿಕ ಕುಳಿತು ಕೆಲಸ ಮಾಡುವವರು ಮಾನಸಿಕ ಅಸ್ವಸ್ಥತೆಯಿಂದ ಬಳಲುತ್ತಾರೆ. ಇದರಿಂದ ಆರ್ಥಿಕವಾಗಿಯೂ ನಷ್ಟವಾಗುತ್ತದೆ ಎಂದು ತಿಳಿಸಲಾಗಿದೆ. ಪ್ರಸ್ತುತ ಇರುವ ಕಾರ್ಮಿಕ ಕಾನೂನುಗಳ ಪ್ರಕಾರ ನೌಕರರ ದುಡಿಮೆ ಸಮಯ ಸೇರಿದಂತೆ ಹಲವು ವಿಷಯಗಳನ್ನು ಕಾರ್ಖಾನೆ ಕಾಯ್ದೆ 1948, ಅಂಗಡಿ ಮತ್ತು ಸಂಸ್ಥೆಗಳ ಕಾಯ್ದೆ ಅಡಿಯಲ್ಲಿ ನಿರ್ಧಾರಿತವಾಗುತ್ತಿವೆ.

## ಕಿರುಕುಳ ಕೊಡುವವರಿಗೆ ಬಿಸಿ ಮುಟ್ಟಿಸಲು ಶಿಕ್ಷೆ ಪ್ರಮಾಣ ಹೆಚ್ಚಳ

• **ಉದಯವಾಹಿನಿ, ಬೆಂಗಳೂರು**

ಮೈಕ್ರೋ ಫೈನಾನ್ಸ್ ಹೆಸರಿನಲ್ಲಿ ಕಿರುಕುಳ ಕೊಡುವವರಿಗೆ ಕಾನೂನಿನ ಬಿಸಿ ಮುಟ್ಟಿಸಲು ಶಿಕ್ಷೆ ಪ್ರಮಾಣವನ್ನು ಹೆಚ್ಚಿಸಿದ್ದೇವೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದರು. ಈ ಮೊದಲು ಬಿಲ್‌ನಲ್ಲಿ 3 ವರ್ಷ ಶಿಕ್ಷೆ ಇತ್ತು. ಈಗ ಅದನ್ನ 10 ವರ್ಷಕ್ಕೆ ಹೆಚ್ಚಳ ಮಾಡಿದ್ದೇವೆ. ದಂಡ ಕೂಡಾ 5 ಲಕ್ಷ ರೂ. ಮಾಡಿದ್ದೇವೆ. ಕಿರುಕುಳ ಕೊಡುವವರಿಗೆ ಕಾನೂನಿನ ಬಿಸಿ ತಟ್ಟಬೇಕು. ಕಾಟಾಚಾರಕ್ಕೆ ಕಾನೂನು ಮಾಡಿದ್ರೆ, ಇಂತಹ ಕಿರುಕುಳ ಪ್ರಕರಣ ನಿಲ್ಲೋದಿಲ್ಲ. ಇದಕ್ಕಾಗಿ ದಂಡ ಮತ್ತು ಶಿಕ್ಷೆ ಜಾಸ್ತಿ ಮಾಡಿದ್ದೇವೆ. ಇಂತಹ ಕಠಿಣ ಕಾನೂನಿಂದ ಮಾತ್ರ ಕಿರುಕುಳ ನಿಲ್ಲುತ್ತದೆ. ಆ ಉದ್ದೇಶದಿಂದ ಶಿಕ್ಷೆ ಪ್ರಮಾಣ ಜಾಸ್ತಿ ಮಾಡಿದ್ದೇವೆ ಎಂದು ತಿಳಿಸಿದರು.ರಾಜ್ಯಪಾಲರಿಗೆ ಬಿಲ್ ಕಳಿಸಿದ್ದೇವೆ. ಇವತ್ತು ಆಗುತ್ತಾ ಗೊತ್ತಿಲ್ಲ. ರಾಜ್ಯಪಾಲರು ಊರಿಗೆ ಹೋಗಿದ್ದಾರೆ ಎನ್ನುತ್ತಿದ್ದಾರೆ. ಅವರು ಬಂದು ನೋಡಿ ಸಹಿ ಆಗಿದೆ ಕೂಡಲೇ ಸುಗ್ರೀವಾಜ್ಞೆ ಜಾರಿ ಆಗಲಿದೆ ಎಂದರು.

## ಮಾರ್ಚ್ 7ಕ್ಕೆ ರಾಜ್ಯ ಬಜೆಟ್ ಸಿದ್ದರಾಮಯ್ಯ ಮಂಡನೆ

• **ಉದಯವಾಹಿನಿ, ಸೇಡಂ**

ಮಾರ್ಚ್ 7 ರಂದು ರಾಜ್ಯ ಬಜೆಟ್ ಮಂಡನೆಯಾಗುವ ಸಾಧ್ಯತೆ ಇದೆ.ಇದೇ ಗುರುವಾರದಿಂದ ಸಿಎಂ ಸಿದ್ದರಾಮಯ್ಯ ಬಜೆಟ್ ಸಿದ್ಧತೆ ಆರಂಭಿಸಲಿದ್ದಾರೆ. ಫೆಬ್ರವರಿ 6ರಿಂದ 14ರ ತನಕ ಬಜೆಟ್ ಪೂರ್ವಭಾವಿ ಚರ್ಚೆ ನಿಗದಿಯಾಗಿದ್ದು, ಶಕ್ತಿ ಭವನದಲ್ಲಿ ವಿವಿಧ ಇಲಾಖೆಗಳ ಬೇಡಿಕೆಗಳ ಕುರಿತ ಬಜೆಟ್ ಸಿದ್ಧತಾ ಸಭೆ ನಡೆಯಲಿದೆ. ಮಾರ್ಚ್ ಮೊದಲ ವಾರದಲ್ಲಿ ಜಂಟಿ ಅಧಿವೇಶನ ನಡೆಸಲು ಸರ್ಕಾರದ ಸಿದ್ಧತೆ ನಡೆಸಿದೆ. ಮಾರ್ಚ್ 3ರಂದು ರಾಜ್ಯಪಾಲರು ಜಂಟಿ ಅಧಿವೇಶನವನ್ನುದ್ದೇಶಿಸಿ ಭಾಷಣ ಸಾಧ್ಯತೆ ಇದೆ. ಮುಂದಿನ ಕ್ಯಾಬಿನೆಟ್ ನಲ್ಲಿ ಬಜೆಟ್ ದಿನಾಂಕ, ಜಂಟಿ ಅಧಿವೇಶನ ದಿನಾಂಕ ಅಂತಿಮಗೊಳಿಸಲಿರುವ ಸರ್ಕಾರ ಅಧಿಕೃತ ಘೋಷಣೆ ಮಾಡಲಿದೆ. ಎರಡು ದಿನಗಳ ಹಿಂದಷ್ಟೇ ಮಂಡಿ ನೋವಿನಿಂದ ಆಸ್ಪತ್ರೆಗೆ ದಾಖಲಾಗಿದ್ದರು. ಎರಡು ದಿನ ವಿಶ್ರಾಂತಿ ಪಡೆಯುವಂತೆ ವೈದ್ಯರು ಸಲಹೆ ನೀಡಿದ್ದರು. ಅದರಂತೆ ಎರಡು ದಿನ ಸಿಎಂ ಅವರ ಎಲ್ಲಾ ಕಾರ್ಯಕ್ರಮಗಳನ್ನು ರದ್ದು ಮಾಡಲಾಗಿತ್ತು. ಸದ್ಯ ಸಿಎಂ ವಿಶ್ರಾಂತಿಯಲ್ಲಿದ್ದಾರೆ.





# ರಾಗಾ ಲೇವಡಿ ನಮೋ ಕಿಡಿ

**ರಾಹುಲ್ ಗಾಂಧಿಗೆ ಪ್ರಧಾನಿ ಮೋದಿ ಕ್ಲಾಸ್...!**

**ನಮ್ಮ ಸರ್ಕಾರ ಸುಳ್ಳು ಭರವಸೆ ಕೊಟ್ಟಿಲ್ಲ**

**ವಿಪಕ್ಷಗಳಿಗೆ ಪ್ರಧಾನಿ ಮೋದಿ ತಿರುಗೇಟು**

1 **ಲೋಕಸಭೆಯಲ್ಲಿ ಪ್ರಧಾನಿ ಮೋದಿ ಸುದೀರ್ಘ ಭಾಷಣ**

2 **ವಿಪಕ್ಷಗಳನ್ನು ತರಾಟೆಗೆ ತೆಗೆದುಕೊಂಡ ಪ್ರಧಾನಿ ಮೋದಿ**

3 **ದೇಶದ ಅಭಿವೃದ್ಧಿ ಓಟ ತಡೆಯಬೇಡಿ.**

4 **ರಾಜಕೀಯಕ್ಕಾಗಿ ರಾಷ್ಟ್ರೀಯ ಹಿತ ಬಲಿಕೊಡಬೇಡಿ**


• **ಉದಯವಾಹಿನಿ, ನವದೆಹಲಿ**

ಕಳೆದ 10 ವರ್ಷದಲ್ಲಿ 25 ಕೋಟಿ ಜನರನ್ನು ಬಡತನ ರೇಖೆಯಿಂದ ಹೊರತರಲಾಗಿದೆ. ಈ ಹಿಂದೆ 40 ವರ್ಷಗಳ ಕಾಲ ಗರೀಬಿ ಹಟಾವೋ (ಬಡತನವನ್ನು ಹೊಡೆದೋಡಿಸಿ) ಎಂದು ಘೋಷಣೆ ಕೂಗಿದವರು ಬಡತನ ನಿರ್ಮೂಲನೆ ಮಾಡಲಿಲ್ಲ.

ನಾವು ಸುಳ್ಳಿನ ಘೋಷಣೆ ಮಾಡಿಲ್ಲ. 4 ದಶಕದಲ್ಲಿ ಮಾಡಲಾಗದ ಕೆಲಸವನ್ನು ಒಂದೇ ದಶಕದಲ್ಲಿ ನಾವು ಮಾಡಿದ್ದೇವೆ. ಬಡತನವನ್ನು ನಿವಾರಿಸುವ ಕೆಲಸ ಮಾಡಿದ್ದೇವೆ ಎಂದು ಪ್ರಧಾನಿ ಮೋದಿ ಲೋಕಸಭಾ ಅಧಿವೇಶನದ ಭಾಷಣದಲ್ಲಿ ಹೇಳಿದ್ದಾರೆ. ಬಡವರಿಗೆ 4 ಕೋಟಿ ಮನೆಗಳನ್ನು ನೀಡಲಾಗಿದೆ. ಕಷ್ಟದ ಜೀವನವನ್ನು ನಡೆಸಿದವರಿಗೆ ಮಾತ್ರ ಮನೆ ಪಡೆಯುವುದರ ಮೌಲ್ಯ ಏನೆಂದು ಅರ್ಥವಾಗುತ್ತದೆ. ಹಿಂದಿನ ಕಾಲದಲ್ಲಿ ಮಹಿಳೆಯರು ಶೌಚಾಲಯ ವ್ಯವಸ್ಥೆಯ ಕೊರತೆಯಿಂದ ಬಹಳಷ್ಟು ಸಮಸ್ಯೆ ಎದುರಿಸುತ್ತಿದ್ದರು. ಸೌಲಭ್ಯಗಳನ್ನು ಹೊಂದಿರುವವರು ವಂಚಿತರಾದವರ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ಸಂಸತ್ ಅಧಿವೇಶನದಲ್ಲಿ ರಾಷ್ಟ್ರಪತಿಗಳ ವಂದನಾ ನಿರ್ಣಯಕ್ಕೆ ಉತ್ತರವಾಗಿ ಮಾತನಾಡುತ್ತಿರುವ ಪ್ರಧಾನಿ ಮೋದಿ, ನಾವು 2025ನೇ ವರ್ಷದಲ್ಲಿದ್ದೇವೆ. 21ನೇ ಶತಮಾನದ 25% ಭಾಗ ಅಂತ್ಯವಾಗಿದೆ. ಸ್ವಾತಂತ್ರ್ಯದ ಬಳಿಕ ಏನು ಬದಲಾಗಿದೆ ಎಂಬುದನ್ನು ಸಮಯ ನಿರ್ಧಾರ ಮಾಡಲಿದೆ. ರಾಷ್ಟ್ರಪತಿಗಳು ತಮ್ಮ ಭಾಷಣದಲ್ಲಿ ಭವಿಷ್ಯದ 25 ವರ್ಷದ ವಿಕಸಿತ್ ಭಾರತದ ಕಲ್ಪನೆಯನ್ನು ತೆರೆದಿಟ್ಟಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣ ವಿಕಸಿತ್ ಭಾರತದ ಸಂಕಲ್ಪವನ್ನು ಗಟ್ಟಿಗೊಳಿಸಿದೆ. ನಮ್ಮ ದೇಶದ ಜನರು 10 ವರ್ಷದಿಂದ ಸೇವೆ ಮಾಡಲು ನನಗೆ ಅವಕಾಶ ನೀಡಿದ್ದಾರೆ. ಅವರಿಗೆ ಧನ್ಯವಾದ ಎಂದು ಹೇಳಿದ್ದಾರೆ. ತಮ್ಮ ಸರ್ಕಾರದ 'ಹರ್ ಘರ್ ಜಲ ಮಿಷನ್' ಬಗ್ಗೆ ಮಾತನಾಡಿದ ಪ್ರಧಾನಿ ಮೋದಿ ಈ ವೇಳೆ ವಿರೋಧ ಪಕ್ಷಗಳನ್ನು ಟೀಕಿಸಿದ್ದಾರೆ. ''ಕೆಲವರು ಜಕುಝಿ, ಐಷಾರಾಮಿ ಸ್ನಾನದ ಮೇಲೆ ತಮ್ಮ ಗಮನವನ್ನು ಕೇಂದ್ರೀಕರಿಸುತ್ತಾರೆ. ಆದರೆ ನಾವು ಹರ್ ಘರ್ ಜಲ ಅಭಿಯಾನದ ಮೂಲಕ ಪ್ರತಿ ಮನೆಗೆ ಶುದ್ಧ ನೀರು ತಲುಪಿಸುವತ್ತ ಗಮನ ಹರಿಸಿದ್ದೇವೆ ಎಂದು ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಕೇಜ್ರಿವಾಲ್ ಅವರ ಹೆಸರು ಹೇಳದೆಯೇ ಅವರ ವಿರುದ್ಧ ಪರೋಕ್ಷವಾಗಿ ಮೋದಿ ಚಾಟಿ ಬೀಸಿದ್ದಾರೆ. ರಾಷ್ಟ್ರಪತಿಗಳು ತಮ್ಮ ಭಾಷಣದಲ್ಲಿ ಭಾರತವು ಭವಿಷ್ಯದ 25 ವರ್ಷಗಳಲ್ಲಿ ಸಾಗಬೇಕಾದ ದಾರಿಯನ್ನು ತೋರಿಸಿಕೊಟ್ಟಿದ್ದಾರೆ. ವಿಕಸತಿ ಭಾರತದ ಉದ್ದೇಶದೊಂದಿಗೆ ನಾವು ಹೆಜ್ಜೆ ಹಾಕಬೇಕು ಎಂದು ರಾಷ್ಟ್ರಪತಿಗಳು ತಮ್ಮ ಭಾಷಣದಲ್ಲಿ ನಮಗೆ ಮಾರ್ಗದರ್ಶನ ಮಾಡಿದ್ದಾರೆ. ದೇಶದ ಬಡ ಜನರಿಗೆ ಮನೆ ಕಟ್ಟಿಕೊಡುವ ನಮ್ಮ ಉದ್ದೇಶವನ್ನು ಹಲವರು ಅಣಕಿಸುತ್ತಿದ್ದಾರೆ. ಆದರೆ ಪಕ್ಕಾ ಮನೆ, ಶೌಚಾಲಯ, ವಿದ್ಯುತ್ ಹೊಂದುವ ಬಡಜನರ ಕನಸಿನ ಮಹತ್ವ ಅರಮನೆಯಂತಹ ಮನೆಗಳಲ್ಲಿ ವಾಸಿಸುವ ಜನರಿಗೆ ತಿಳಿಯುವುದಿಲ್ಲ. ಇದೇ ವೇಳೆ ವಿಪಕ್ಷ ನಾಯಕರನ್ನು ತಿವಿದರು.



**ವಿಕಸಿತ ಭಾರತಕ್ಕೆ ಪ್ರೇರಣೆ...!**

ನಾವು 2025ರಲ್ಲಿದ್ದೇವೆ ಮತ್ತು 21ನೇ ಶತಮಾನದ ಕಾಲು ಭಾಗ ಈಗಾಗಲೇ ಕಳೆದಿದೆ. ರಾಷ್ಟ್ರಪತಿಗಳ ಭಾಷಣವನ್ನು ನಾವು ಸೂಕ್ಷ್ಮವಾಗಿ ಅಧ್ಯಯನ ಮಾಡಿದರೆ, ಅದು ನವ ಭಾರತಕ್ಕೆ ಆತ್ಮವಿಶ್ವಾಸವನ್ನು ಪ್ರೇರೇಪಿಸುತ್ತದೆ ಎಂಬುದು ಸ್ಪಷ್ಟವಾಗುತ್ತದೆ. ರಾಷ್ಟ್ರಪತಿಗಳ ಭಾಷಣವು ಅಭಿವೃದ್ಧಿ ಹೊಂದಿದ ಭಾರತದ ಉದ್ದೇಶವನ್ನು ಇನ್ನಷ್ಟು ಬಲಪಡಿಸುತ್ತದೆ. ಹೊಸ ವಿಶ್ವಾಸವನ್ನು ಹುಟ್ಟುಹಾಕುತ್ತದೆ ಮತ್ತು ಸಾರ್ವಜನಿಕರಿಗೆ ಇನ್ನಷ್ಟು ಸ್ಫೂರ್ತಿ ನೀಡುತ್ತದೆ.

**ರಾಜಕಾರಣಕ್ಕಾಗಿ ರಾಷ್ಟ್ರೀಯ ಹಿತಾಸಕ್ತಿ ಬಲಿ ಕೊಡುವುದನ್ನು ಸಹಿಸುವುದಿಲ್ಲ ;**


**ಮೇಕ್‌ಇನ್ ಇಂಡಿಯಾ ಒಳ್ಳೆ ಐಡಿಯಾ, ಆದರೆ ಮೋದಿ ಯಶಸ್ವಿ ಆಗಲಿಲ್ಲ ಎಂದ ರಾಹುಲ್ ಗಾಂಧಿ**

**ಕೆಲವರು ನಕ್ಸಲರ ಭಾಷೆಯಲ್ಲಿ ಮಾತಾಡುತ್ತಿದ್ದಾರೆ**

ಕೆಲವರು ನಗರ ನಕ್ಸಲರ ಭಾಷೆಯಲ್ಲಿ ಮಾತನಾಡುತ್ತಿದ್ದಾರೆ. ಭಾರತದ ಮೇಲೆ ಯುದ್ಧ ಸಾರುವವರಿಗೆ ದೇಶದ ಸಂವಿಧಾನವೂ ಅರ್ಥವಾಗುವುದಿಲ್ಲ, ದೇಶದ ಏಕತೆಯೂ ಅರ್ಥವಾಗುವುದಿಲ್ಲ. ರಾಹುಲ್ ಅವರು ಕಳೆದ ತಿಂಗಳು 'ನಾವು ಬಿಜೆಪಿ, ಆರ್‌ಎಸ್‌ಎಸ್ ಮತ್ತು ಭಾರತ ಸರ್ಕಾರದ ವಿರುದ್ಧ ಹೋರಾಟ ನಡೆಸುತ್ತಿದ್ದೇವೆ' ಎಂದು ಹೇಳಿದ್ದರು. ಹೀಗಾಗಿ, ಮೋದಿ ಅವರ ಮಾತುಗಳು ರಾಹುಲ್ ಅವರನ್ನು ಪರೋಕ್ಷವಾಗಿ ಗುರಿಯಾಗಿಸಿಕೊಂಡಿದ್ದವು ಎಂದು ವಿಶ್ಲೇಷಿಸಲಾಗಿದೆ.


**ದೇಶದ ಜನರ ಭಾವನೆಗೆ ಧಕ್ಕೆ**

ಬಡವರ ಮನೆ ಮುಂದೆ ಫೋಟೋ ಸೆಷನ್ ಮಾಡುವ ನಾಯಕರಿಗೆ, ಸದನದಲ್ಲಿ ನಡೆಯುವ ಬಡವರ ಬಗೆಗಿನ ಚರ್ಚೆ ಬೇಸರ ತರಿಸುತ್ತದೆ. ನಾವು ಸಮಸ್ಯೆಯ ಸಮಾಧಾನಕ್ಕಾಗಿ ನಿರಂತರವಾಗಿ ಪ್ರಯತ್ನ ಮಾಡುತ್ತೇವೆ. ಆದರೆ ಕೆಲವರು ಇದನ್ನು ಅಪಹಾಸ್ಯ ಮಾಡುತ್ತಾ ದೇಶದ ಜನರ ಭಾವನೆಗೆ ಧಕ್ಕೆ ತರುತ್ತಾರೆ ಎಂದು ಪ್ರಧಾನಿ ಮೋದಿ ವಿಪಕ್ಷ ನಾಯಕರನ್ನು ಪರೋಕ್ಷವಾಗಿ ತರಾಟೆಗೆ ತೆಗೆದುಕೊಂಡರು. ನೇರ ಹಣ ವರ್ಗಾವಣೆ ಮೂಲಕ ನಾವು ರೈತರ ಬ್ಯಾಂಕ್ ಅಕೌಂಟ್‌ಗೆ 40 ಸಾವಿರ ಕೋಟಿ ರೂಪಾಯಿ ವರ್ಗಾಯಿಸಲಾಗಿದೆ. ದೇಶದ ರೈತರ ಹಿತಾಸಕ್ತಿಯನ್ನು ಕಾಪಾಡುವ ವಾಗ್ದಾನ ಮಾಡುತ್ತಿದ್ದ ಹಿಂದಿನ ಸರ್ಕಾರಗಳಿಗೂ, ರೈತರ ಹಿತಾಸಕ್ತಿ ಕಾಪಾಡಲು ನಿರ್ಣಯ ಕೈಗೊಳ್ಳುವ ನಮ್ಮ ಸರ್ಕಾರಕ್ಕೂ ಇರುವ ಮುಖ್ಯ ವ್ಯತ್ಯಾಸ ಎಲ್ಲರ ಕಣ್ಣ ಮುಂದಿದೆ.. ಎಂದು ಪ್ರಧಾನಿ ಮೋದಿ ಸೂಚ್ಯವಾಗಿ ಹೇಳಿದರು.



**ಇಡೀ ಜಗತ್ತು ಆಶಾವಾದಿ**

ಇಂಡಿಯಾ ಎಐ ಮಿಷನ್ ಬಗ್ಗೆ ಇಡೀ ಜಗತ್ತು ಆಶಾವಾದಿಯಾಗಿದೆ. ಜಾಗತಿಕ ಎಐ ಕ್ಷೇತ್ರದಲ್ಲಿ ಭಾರತ ತನ್ನ ಅಸ್ತಿತ್ವವನ್ನು ದೃಢವಾಗಿ ದಾಖಲಿಸಿದೆ. ನಾವು ಭಾರತದ ಯುವ ಸಮುದಾಯದ ಉತ್ತಮ ಭವಿಷ್ಯಕ್ಕಾಗಿ ಕೆಲಸ ಮಾಡುತ್ತಿದ್ದು, ವಿಕಸಿತ ಭಾರತದ ನಮ್ಮ ಕನಸನ್ನು ಖಂಡಿತವಾಗಿಯೂ ನನಸು ಮಾಡುತ್ತೇವೆ.. ಎಂದು ಪ್ರಧಾನಿ ಮೋದಿ ಇದೇ ವೇಳೆ ಭರವಸೆ ನೀಡಿದರು. ವಿಪಕ್ಷ ನಾಯಕರು ಮಾತೆತ್ತಿದ್ದರೆ ಸಂವಿಧಾನದ ಬಗ್ಗೆ ಮಾತನಾಡುತ್ತಾರೆ. ಸಂವಿಧಾನ ಅಪಾಯದಲ್ಲಿದೆ ಎಂದು ಸುಳ್ಳು ನಿರೂಪಣೆ ನೀಡುತ್ತಾರೆ. ಆದರೆ ನಮ್ಮ ಕೇಂದ್ರ ಸರ್ಕಾರ ಸಂವಿಧಾನವನ್ನು ಜೀವಿಸುತ್ತದೆ. ಸಂವಿಧಾನದ ಆಶಯಗಳಿಗೆ ತಕ್ಕಂತೆ ನಾವು ಕೆಲಸ ಮಾಡುತ್ತೇವೆ. ಇದಕ್ಕೆ ನಾನು ಹಲವಾರು ಉದಾಹರಣೆ ಕೊಡಬಲ್ಲೆ ಎಂದು ಹೇಳಿದರು.



## ಜನಸಂಖ್ಯೆ 6.80 ಕೋಟಿ, ಸಾಲ 6.65 ಲಕ್ಷ ಕೋಟಿ ರೂ.

• **ಉದಯವಾಹಿನಿ, ಬೆಂಗಳೂರು**

**ಸಾಲದಲ್ಲೂ ಕರ್ನಾಟಕ ದಾಖಲೆ**

ರಾಜ್ಯ ಸರಕಾರದ ಒಟ್ಟು ಸಾಲ ಈಗಾಗಲೇ 6 ಲಕ್ಷ ಕೋಟಿ ರೂಪಾಯಿ ಮೀರಿದ್ದು, ಇದೇ ವರ್ಷದ ಮಾರ್ಚ್ 31ರ ಹೊತ್ತಿಗೆ ಒಟ್ಟು ಸಾಲದ ಪ್ರಮಾಣ 6.65 ಲಕ್ಷ ಕೋಟಿ ರೂಪಾಯಿಗೆ ತಲುಪುವ ನಿರೀಕ್ಷೆಯಿದೆ. ವರ್ಷದಿಂದ ವರ್ಷಕ್ಕೆ ಸಾಲದ ಪ್ರಮಾಣ ಹೆಚ್ಚಾಗುವ ಜತೆಗೆ ಅಸಲು ಪಾವತಿಗಿಂತ ಕೇವಲ ಬಡ್ಡಿ ಪಾವತಿಯೇ ಹೆಚ್ಚಾಗಿರುವುದು ಆರ್ಥಿಕ ಹೊರೆ ಹೆಚ್ಚಳಕ್ಕೆ ಕಾರಣವಾದಂತಾಗಿದೆ. ಪ್ರತಿ ವರ್ಷ ದಾಖಲೆ ಗಾತ್ರದ ಬಜೆಟ್ ಮಂಡನೆಯಾಗುವಂತೆ ಸರಕಾರದ ಒಟ್ಟು ಸಾಲ ಪ್ರಮಾಣವು ದಾಖಲೆ ಗಾತ್ರದಲ್ಲೇ ಏರಿಕೆಯಾಗುತ್ತಿದೆ. ಪ್ರಸಕ್ತ 2024–25ನೇ ಸಾಲಿನಲ್ಲಿ 1.05 ಲಕ್ಷ ಕೋಟಿ ರೂಪಾಯಿ ಸಾಲ ಪಡೆಯಲು ಅವಕಾಶ ಮಾಡಿಕೊಂಡಿರುವ ಸರಕಾರವು 2025–26ನೇ ಸಾಲಿಗೆ ಅದಕ್ಕಿಂತಲೂ ಹೆಚ್ಚು ಸಾಲ ಪಡೆಯಲು ಅವಕಾಶ ಮಾಡಿಕೊಳ್ಳುವುದು ಖಚಿತವಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2024–25ನೇ ಆರ್ಥಿಕ ವರ್ಷಕ್ಕೆ 3.71 ಲಕ್ಷ ಕೋಟಿ ರೂ. ಗಾತ್ರದ ಬಜೆಟ್ ಮಂಡಿಸಿದ್ದಾರೆ. ಹಾಗೆಯೇ ಜಿಎಸ್‌ಡಿಪಿ ಅಂದಾಜು ಮೊತ್ತ ಆಧರಿಸಿ 1.05 ಲಕ್ಷ ಕೋಟಿ ರೂ. ಸಾಲ ಪಡೆಯಲು ಅವಕಾಶ ಕಲ್ಪಿಸಿಕೊಂಡಿದ್ದಾರೆ. ಇಷ್ಟು ಬೃಹತ್ ಮೊತ್ತದ ಹಣವನ್ನು ಅಭಿವೃದ್ಧಿ ಕಾರ್ಯಗಳಿಗೆ, ಬಂಡವಾಳ ವೆಚ್ಚಕ್ಕೆ ವಿನಿಯೋಗಿಸಿದರೆ ಅರ್ಥಪೂರ್ಣವೆನಿಸಬಹುದು. ಆದರೆ, ಶೇ.59ರಷ್ಟು ಅಂದರೆ 62,552 ಕೋಟಿ ರೂ. ಬಡ್ಡಿ ಸಹಿತ ಸಾಲ ಮರು ಪಾವತಿಗೆ ವಿನಿಯೋಗವಾಗುವ ಸಾಧ್ಯತೆ ಇರುವುದು ಗಮನಾರ್ಹ. ಕಳೆದ 2023–24ನೇ ಸಾಲಿಗೆ ರಾಜ್ಯ ಸರಕಾರದ ಒಟ್ಟು ಸಾಲ ಪ್ರಮಾಣ 5.80 ಲಕ್ಷ ಕೋಟಿ ರೂ.ಗೆ ಏರಿಕೆಯಾಗಿತ್ತು. ಜತೆಗೆ ಪ್ರಸಕ್ತ ವರ್ಷವೂ 1.05 ಲಕ್ಷ ಕೋಟಿ ರೂ. ಸಾಲ ಪಡೆಯಲಾಗುತ್ತಿದೆ. ಈ ಮೂಲಕ ರಾಜ್ಯ ಸರಕಾರದ ಒಟ್ಟು ಸಾಲ 6.65 ಲಕ್ಷ ಕೋಟಿ ರೂ.ಗೆ ಏರಿಕೆಯಾಗುವ ಸಾಧ್ಯತೆಯಿದ್ದು, ಅದಕ್ಕೆ ವಾರ್ಷಿಕ ಬಡ್ಡಿ ರೂಪದಲ್ಲಿ ಸರಕಾರ 37,324 ಕೋಟಿ ರೂ. ಪಾವತಿಸಬೇಕಿದೆ. ಅಂದರೆ ಸರಕಾರ 2024–25ನೇ ಸಾಲಿನಲ್ಲಿ ಪಡೆಯುತ್ತಿರುವ ಸಾಲದ ಶೇ.35ರಷ್ಟು ಹಣವನ್ನು ಬಡ್ಡಿ ಪಾವತಿಗೆ ಬಳಸಬೇಕಾದ ಸ್ಥಿತಿ ನಿರ್ಮಾಣವಾಗಿರುವುದು ಮೇಲ್ನೋಟಕ್ಕೆ ಕಾಣುತ್ತದೆ.




**ಬೆಂಗಳೂರು ದೆಹಲಿ ಆಗೋದು ಬೇಡ**

## ಸಾರಿಗೆ ಸಚಿವರಿಗೆ ಗುಂಡೂರಾವ್ ಪತ್ರ

• **ಉದಯವಾಹಿನಿ, ಬೆಂಗಳೂರು**

ದೆಹಲಿ ಮಾದರಿಯಲ್ಲಿ ಬೆಂಗಳೂರು ವಾಯುಮಾಲಿನ್ಯ ಹದಗೆಡುವುದು ಬೇಡ. ಮುಂಜಾಗ್ರತೆಯ ಸಲುವಾಗಿ ಇವಿಗಳಿಗೆ ಮೊರೆ ಹೋಗುವಂತೆ ಸಾರಿಗೆ ಸಚಿವರಿಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಪತ್ರ ಬರೆದಿದ್ದಾರೆ. ವಾಯುಮಾಲಿನ್ಯ ನಿಯಂತ್ರಣಕ್ಕೆ ಇವಿ ಬಳಕೆ ನಿಯಮ ಜಾರಿಗೆ ಕ್ರಮವಹಿಸಿ. ದಿನೇ ದಿನೇ ವಾಯುಮಾಲಿನ್ಯ ಹೆಚ್ಚಾಗುತ್ತಿದ್ದು, ನಿಯಂತ್ರಣದ ಕ್ರಮಗಳ ಬಗ್ಗೆ ಚಿಂತನೆ ನಡೆಸುವಂತೆ ಸಚಿವ ರಾಮಲಿಂಗಾರೆಡ್ಡಿಗೆ ಪತ್ರದಲ್ಲಿ ತಿಳಿಸಲಾಗಿದೆ. ಭವಿಷ್ಯದಲ್ಲಿ ಸಂಚರಿಸುವ ವಾಹನಗಳಿಗೆ ಅನುಮತಿ ನೀಡುವ ಮುನ್ನ, ಇವಿಗಳಾಗಿದ್ದರೆ ಮಾತ್ರ ಅನುಮತಿ ನೀಡಬೇಕು. ಸಾರಿಗೆ ಇಲಾಖೆಯಿಂದ ವಾಹನಗಳ ಖರೀದಿ ಮಾಡುವುದಿದ್ದರೆ ಇವಿಗಳನ್ನೇ ಖರೀದಿ ಮಾಡುವಂತೆ ಸಾರಿಗೆ ಸಚಿವರಿಗೆ ದಿನೇಶ್ ಗುಂಡೂರಾವ್ ಪತ್ರದ ಮೂಲಕ ಮನವಿ ಮಾಡಿದ್ದಾರೆ.



# ತಾರಕಕ್ಕೇರಿದ ಬಿಜೆಪಿ ಅಧ್ಯಕ್ಷ ಗಾದಿ ಕದನ, ಮುಂದುವರೆಯುವರೇ ವಿಜಯೇಂದ್ರ..

**• ಭಿನ್ನಮತೀಯರ ಪಟ್ಟಿನಂತೆ ಬದಲಾಗಲಿದ್ದಾರೆಯೇ, ಮುಂದುವರೆಯಲಿದ್ದಾರೆಯೇ ಎಂಬ ತೀವ್ರ ಕುತೂಹಲಕ್ಕೆ ಎಡೆ**

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಬಿಜೆಪಿ ಅಧ್ಯಕ್ಷ ಸ್ಥಾನದ ಬದಲಾವಣೆ ವಿಚಾರ ನಿರ್ಣಾಯಕ ಹಂತ ತಲುಪಿದ್ದು, ಹಾಲಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಮುಂದುವರೆಯಲಿದ್ದಾರೆಯೇ ಇಲ್ಲವೆ ಭಿನ್ನಮತೀಯರ ಪಟ್ಟಿನಂತೆ ಬದಲಾಗಲಿದ್ದಾರೆಯೇ ಎಂಬುದು ತೀವ್ರ ಕುತೂಹಲಕ್ಕೆ ಎಡೆ ಮಾಡಿಕೊಟ್ಟಿದೆ. ಶತಾಯ ಗತಾಯ ವಿಜಯೇಂದ್ರ ಅವರ ಬದಲಾವಣೆಗೆ ಪಟ್ಟು ಹಿಡಿದು ದೆಹಲಿಯಲ್ಲಿ ಬೀಡು ಬಿಟ್ಟಿರುವ ಭಿನ್ನಮತೀಯರು ಪಕ್ಷದ ರಾಷ್ಟ್ರೀಯ ನಾಯಕರನ್ನು ಭೇಟಿಯಾಗುವ ಧಾವಂತದಲ್ಲಿದ್ದಾರೆ.

ಕಳೆದ ರಾತ್ರಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರನ್ನು ಭೇಟಿಯಾಗಿ ರಾಜ್ಯದ ವಸ್ತು ಸ್ಥಿತಿಯನ್ನು ವಿವರಿಸಿದ್ದೇನೆ ಎಂದು ಮಾಜಿ ಸಚಿವ ರಮೇಶ್ ಜಾರಕಿಹೊಳಿ ಹೇಳಿದ್ದಾರೆ. ಆದರೆ, ಅವರು ರಾಷ್ಟ್ರೀಯ ಅಧ್ಯಕ್ಷರನ್ನು ಭೇಟಿಯಾಗಿರುವುದಕ್ಕೆ ನಿದರ್ಶನವಾಗಿ ಫೋಟೋಗಳು ಲಭ್ಯವಿಲ್ಲದಿರುವುದು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ. ಮಂಗಳವಾರ ಬೆಳಿಗ್ಗೆ ಸಂಸತ್ತಿನಲ್ಲಿ ನಾಗರಿಕ ವಿಮಾನಯಾನ ಸಚಿವ ಜ್ಯೋತಿರಾದಿತ್ಯ ಸಿಂಧ್ಯಾ ಅವರನ್ನು ಮಾಜಿ ಸಚಿವರಾದ ರಮೇಶ್ ಜಾರಕಿಹೊಳಿ , ಕುಮಾರ್ ಬಂಗಾರಪ್ಪ, ಶ್ರೀಮಂತಪಾಟೀಲ್ ಸೇರಿದಂತೆ ಕೆಲವರು ಭೇಟಿಯಾಗಿದ್ದರು. ಉಳಿದಂತೆ ಭಿನ್ನಮತೀಯರು,ರಾಜ್ಯ ಚುನಾವಣಾ ಉಸ್ತುವಾರಿ ಶಿವರಾಜ್‌ಸಿಂಗ್ ಚೌವ್ಹಾಣ್ ಅವರನ್ನು ಭೇಟಿ ಮಾಡಲು ಸಮಯಾವಕಾಶ ಕೇಳಿದ್ದರಾದರೂ ಭೇಟಿಗೆ ಅವಕಾಶ ನೀಡಿಲ್ಲ. ರಾತ್ರಿ ವೇಳೆಗೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತ್ತಿತರರು ಭಿನ್ನಮತೀಯರನ್ನು ಸೇರಿಕೊಂಡಿದ್ದು, ವರಿಷ್ಠರ ಭೇಟಿಗೆ ಚಾತಕ ಪಕ್ಷಿಯಂತೆ ಎದುರು ನೋಡುತ್ತಿದ್ದಾರೆ. ಈಗಾಗಲೇ ಪಕ್ಷದ ಹೈಕಮಾಂಡ್ ಮುಂದೆ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರ ಬಣ ಹಲವು ಬೇಡಿಕೆಯನ್ನು ಇಟ್ಟಿದ್ದಾರೆ. ಇದರ ಜೊತೆಗೆ 23 ಜಿಲ್ಲಾಧ್ಯಕ್ಷರ ಆಯ್ಕೆ ಘೋಷಣೆಯನ್ನು ರದ್ದು ಮಾಡಬೇಕು, ರಾಜ್ಯಾಧ್ಯಕ್ಷರ ಚುನಾವಣೆ ನಡೆಸಬೇಕೆಂಬ ಒತ್ತಡ ಹಾಗೂ ವಿಜಯೇಂದ್ರರನ್ನ ಪಟ್ಟದಿಂದ ಇಳಿಸಬೇಕು ಎಂಬ ಬೇಡಿಕೆಯನ್ನ ಹೈಕಮಾಂಡ್ ಮುಂದೆ ಇಡಲಿದ್ದಾರೆ. ರಾಜ್ಯಾಧ್ಯಕ್ಷ ಸ್ಥಾನದ ವಿಚಾರದಲ್ಲಿ ಚುನಾವಣೆ ನಡೆಯುವ ಬಗ್ಗೆ ಸ್ಪಷ್ಟತೆ ಇಲ್ಲ. ಹೀಗಾಗಿ ಬಸನಗೌಡ ಪಾಟೀಲ್ ಯತ್ನಾಳ್ ಅವರ ಬಣ ಹೈಕಮಾಂಡ್ ನಾಯಕರ ಭೇಟಿಗೆ ತೆರಳಿದ್ದು, ಎರಡು ಮೂರು ದಿನ ದೆಹಲಿಯಲ್ಲೇ ಠಿಕಾಣಿ ಹೂಡಲಿದ್ದಾರೆ. ದೆಹಲಿಗೆ ತೆರಳಿರುವ ತಂಡದಲ್ಲಿ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ, ಕುಮಾರ್ ಬಂಗಾರಪ್ಪ, ಬಿ.ಪಿ .ಹರೀಶ್, ಜಿ.ಎಂ.ಸಿದ್ಧೇಶ್ವರ ಸೇರಿ ಪ್ರಮುಖ ನಾಯಕರು ಸದ್ಯ ರಾಷ್ಟ್ರ ರಾಜಧಾನಿಯಲ್ಲಿ ಬೀಡು ಬಿಟ್ಟಿದ್ದಾರೆ. ಈ ತಂಡ ಪಕ್ಷದ ವರಿಷ್ಠರನ್ನು ಭೇಟಿ ಮಾಡಿ ರಾಜ್ಯದ ವಸ್ತು ಸ್ಥಿತಿಯನ್ನು ವಿವರಿಸಲಿದೆ. ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನೇತೃತ್ವದ ರೆಬೆಲ್ ಟೀಂಗೆ ಇನ್ನೂ ವರಿಷ್ಠರ ಭೇಟಿಗೆ ಅವಕಾಶ ಸಿಕ್ಕಿಲ್ಲ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡುವುದು ಈ ತಂಡದ ಉದ್ದೇಶವಾಗಿದೆ. ಈ ವೇಳೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧ ವರಿಷ್ಠರಿಗೆ ದೂರು ನೀಡುವ ಸಾಧ್ಯತೆಯೂ ಇದೆ.



**ವಿಶ್ವಾಸಕ್ಕೆ ತೆಗೆದುಕೊಳ್ಳುವ ವ್ಯಕ್ತಿಯನ್ನು ನಾಯಕರನ್ನಾಗಿ ಆಯ್ಕೆ ಮಾಡಬೇಕು**

ರಾಜ್ಯ ಬಿಜೆಪಿಯಲ್ಲಿ ಹೊಂದಾಣಿಕೆ ರಾಜಕಾರಣ ನಡೆಯುತ್ತಿದೆ. ಆಡಳಿತ ಪಕ್ಷ ಕಾಂಗ್ರೆಸ್ ಜೊತೆಗೆ ರಾಜ್ಯದ ಕೆಲವು ನಾಯಕರು ಹೊಂದಾಣಿಕೆ ಮಾಡಿಕೊಂಡಿದ್ದಾರೆ. ಹೀಗಾಗಿ ಸರ್ಕಾರದ ವಿರುದ್ಧ ನಿರೀಕ್ಷಿತ ಪ್ರಮಾಣದಲ್ಲಿ ಹೋರಾಟ ನಡೆಯುತ್ತಿಲ್ಲ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಎಲ್ಲಾರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿಲ್ಲ. ತಮ್ಮ ಆಪ್ತರನ್ನಷ್ಟೇ ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷವನ್ನು ನಡೆಸುತ್ತಿದ್ದಾರೆ. ಇದರಿಂದ ಹಲವು ಹಿರಿಯ ನಾಯಕರಿಗೆ ಬೇಸರ ಉಂಟಾಗಿದೆ. ಇದರ ಪರಿಣಾಮ ಪಕ್ಷದ ಮೇಲೂ ಆಗುತ್ತಿದೆ. ಉಪ ಚುನಾವಣೆಯಲ್ಲಿ ಸೋಲು, ಕಳೆದ ಲೋಕಸಭೆ ಚುನಾವಣೆಯಲ್ಲಿ ಆದ ಹಿನ್ನಡೆಗೆ ಬಿಜೆಪಿಯ ಕೆಲವು ನಾಯಕರ ಹೊಂದಾಣಿಕೆ ರಾಜಕಾರಣವೇ ಕಾರಣ. ಹೀಗಾಗಿ ಇದಕ್ಕೆ ಅವಕಾಶ ಕೊಡದಂತೆ ತಡೆ ಹಾಕಬೇಕು. ವಿಜಯೇಂದ್ರ ಬದಲಾಗಿ ಎಲ್ಲಾರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ವ್ಯಕ್ತಿಯನ್ನು ನಾಯಕರನ್ನಾಗಿ ಆಯ್ಕೆ ಮಾಡಬೇಕು. ಪಕ್ಷದಲ್ಲೂ ಅನೇಕ ಸಮರ್ಥರಿದ್ದಾರೆ. ಅವರಿಗೆ ಅವಕಾಶ ನೀಡಬೇಕು ಎನ್ನುವುದು ಭಿನ್ನಮತೀಯರ ಒತ್ತಾಯವಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹8,520 /Gram24ct ₹7,810/Gram22ct | ಬೆಳ್ಳಿ: ₹99.50/Gram



ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ


## ಈಶ್ವರಃ ಸರ್ವಭೂತಾನಾಂ

**ಹೃದ್ದೇಶೇರ್ಜುನ ತಿಷ್ಠತಿ.
ಭ್ರಾಮಯನ್ ಸರ್ವಭೂತಾನಿ
ಯಂತ್ರಾರೂಢಾನಿ ಮಾಯಯಾ.**

ಭಗವದ್ಗೀತೆಯ ಹದಿನೆಂಟನೆಯ ಅಧ್ಯಾಯದ ಅರವತ್ತೊಂದನೆಯ ಶ್ಲೋಕ. ಕೃಷ್ಣ ಅರ್ಜುನನಿಗೆ ಹೇಳಿದ ಮಾತು. ಎಲ್ಲೆಡೆ ವ್ಯಾಪಿಸಿರುವ ಏಕ ಪರಮಾತ್ಮನು ಎಲ್ಲ ಜೀವರಾಶಿಗಳ ಹೃದಯದಲ್ಲಿ ನೆಲೆಸಿದ್ದಾನೆ. ಹಣತೆ ಬಂಗಾರದ್ದಿರಲಿ ಬೆಳ್ಳಿಯದ್ದಿರಲಿ ಕಂಚು ತಾಮ್ರ ಮಣ್ಣು ಮಂತೊಂದರದಿರಲಿ ಹಣತೆ ಒಂದೋ ಲಕ್ಷವೋ ಆ ಹಣತೆಯ ದೀಪ ಬೆಳಕು ಮಾತ್ರ ಒಂದೇ, ಬೇರೆಯಲ್ಲ. ಹಾಗೆ ಜೀವರಾಶಿಗಳು ಬಗೆ ಬಗೆಯಾದರೂ ಅವುಗಳಲ್ಲಡಗಿದ ಪರಮಾತ್ಮ ಒಬ್ಬನೇ. ಯಂತ್ರದಲ್ಲಿನ ಗೊಂಬೆಗಳನ್ನೆಲ್ಲಾ ಯಂತ್ರವು ಕುಣಿಸುವಂತೆ ಆಡಿಸುವಂತೆ, ಅಂತರ್ಗತ ಜೀವ ಪರಮಾತ್ಮನು ಎಲ್ಲ ಜೀವರಾಶಿಗಳನ್ನು ಆಡಿಸುತ್ತಾನೆ ಕುಣಿಸುತ್ತಾನೆ ಸುತ್ತಿಸುತ್ತಾನೆ. ಅಲ್ಲಿಯವರೆಗೆ ನಮ್ಮಾಟ. ಆಟ ಮುಗಿದರೆ ಇನ್ನಿಲ್ಲ ನಾವು ನಮ್ಮಾಟ. ಆಟ ಮುಗಿಯುವುದರೊಳಗಾಗಿ ಇದು ಆಟ ಎಂದು ಅರಿತರೆ ಜೀವನಾನಂದ. ಇದೇ ನಿಜ ಎಂದಿದ್ದರೆ ಏನು ಎಷ್ಟಿದ್ದರೂ ಸಾಲದು, ಜೀವನ ದುಃಖ.


## ಹರಿದಾಸ ವಾಣಿ ಗಾಯನ

• ಉದಯವಾಹಿನಿ ಬೆಂಗಳೂರು



ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಮಧ್ವನವಮಿ ಪ್ರಯುಕ್ತ ಫೆಬ್ರವರಿ 6, ಗುರುವಾರ ಸಂಜೆ 6-30ಕ್ಕೆ ಶ್ರೀಮತಿ ಅನುಕೃಪ ರೌಡೂರ್ ಬಳ್ಳಾರಿ ಇವರಿಂದ ಹರಿದಾಸ ವಾಣಿ. ಗಾಯನ ಕಾರ್ಯಕ್ರಮ. ಕೀ-ಬೋರ್ಡ್ : ವಿದ್ವಾನ್ ಶ್ರೀ ಹೆಚ್. ಬಿ. ಜಯರಾಮಾಚಾರ್, ತಬಲಾ : ವಿದ್ವಾನ್ ಶ್ರೀ ಸತ್ಯಪ್ರಮೋದ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 3ನೇ ಮುಖ್ಯರಸ್ತೆ, ಕಾರ್ಪೊರೇಷನ್ ಬ್ಯಾಂಕ್ ಹತ್ತಿರ, ಕೆಂಗೇರಿ ಉಪನಗರ, ಬೆಂಗಳೂರು-560060

## ಏರೋ ಇಂಡಿಯಾ 2025: ಬೆಂಗಳೂರು ವಿಮಾನಯಾನದಲ್ಲಿ ವ್ಯತ್ಯಯ



• ಉದಯವಾಹಿನಿ ಬೆಂಗಳೂರು

ಯಲಹಂಕದ ವಾಯುನೆಲೆಯಲ್ಲಿ ನಡೆಯಲಿರುವ ಏರೋ ಇಂಡಿಯಾ 2025ರ ಹಿನ್ನೆಲೆ ಫೆ.5ರಿಂದ ಫೆ.14ರವರೆಗೆ ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಪ್ರತಿದಿನ ಕೆಲವು ಗಂಟೆಗಳ ಕಾಲ ವಿಮಾನ ಹಾರಾಟ ಬಂದ್ ಆಗಲಿದೆ.ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ವಾಯುಯಾನ ಪ್ರದೇಶ ಮುಚ್ಚಲ್ಪಡಲಿದ್ದು, ಪ್ರಯಾಣಿಕರು ವಿಮಾನ ವೇಳಾಪಟ್ಟಿಗಳ ಪರಿಷ್ಕೃತ ಅಥವಾ ನವೀಕರಿಸಿದ ವಿವರಗಳಿಗಾಗಿ ಆಯಾ ವಿಮಾನಯಾನ ಸಂಸ್ಥೆಗಳನ್ನು ಸಂಪರ್ಕಿಸಲು ಸೂಚಿಸಲಾಗಿದೆ. ವಿಮಾನ ವೇಳಾಪಟ್ಟಿಯ ನವೀಕೃತ ಮಾಹಿತಿಗೆ ಅನುಸಾರವಾಗಿ ತಮ್ಮ ಆಗಮನ ಮತ್ತು ನಿರ್ಗಮನವನ್ನು ಯೋಜಿಸಲು ನಾವು ವಿನಂತಿ ಮಾಡುತ್ತೇವೆ. ನಿಮ್ಮ ತಾಳ್ಮೆ ಮತ್ತು ಸಹಕಾರಕ್ಕಾಗಿ ಧನ್ಯವಾದಗಳು ಎಂದು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಬೆಂಗಳೂರು ಪ್ರಕಟಣೆ ಹೊರಡಿಸಿದೆ. ಬೆಂಗಳೂರು ಏರ್‌ಪೋರ್ಟ್ ಕಾರ್ಯಾಚರಣೆಯು ಫೆ.5ರಿಂದ ಫೆ.15ರವರೆಗೆ 10 ದಿನಗಳಲ್ಲಿ ಬೇರೆಬೇರೆ ಸಮಯದಲ್ಲಿ ಬಂದ್ ಆಗಿರಲಿದೆ.

## ಮಸ್ತಿಗೆ ಮನೆಗಳ್ಳತನ; ಪ್ರೇಯಸಿಗೆ 3 ಕೋಟಿ ಬೆಲೆಯ ಮನೆ ಗಿಫ್ಟ್


• ಉದಯವಾಹಿನಿ ಬೆಂಗಳೂರು

ದೇಶದ್ಯಾಂತ ಐಷಾರಾಮಿ ಮನೆಗಳನ್ನು ಟಾರ್ಗೆಟ್ ಮಾಡಿ, ಕಳ್ಳತನ ಮಾಡುತ್ತಿದ್ದ ಕುಖ್ಯಾತ ಮನೆಗಳ್ಳನನ್ನು ಬೆಂಗಳೂರಿನ ಮಡಿವಾಳ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಯನ್ನು ಸೊಲ್ಲಾಪುರ ಮೂಲದ ಪಂಚಾಕ್ಷರಿ ಸ್ವಾಮಿ (37) ಎಂದು ಗುರುತಿಸಲಾಗಿದೆ. ಪೊಲೀಸರ ವಿಚಾರಣೆ ವೇಳೆ, ಮನೆಗಳ್ಳತನದಿಂದ ಕೋಲ್ಕತ್ತಾದಲ್ಲಿ ಪ್ರೇಯಸಿಗೆ 3 ಕೋಟಿ ರೂ. ಬೆಲೆಬಾಳುವ ಮನೆ ಖರೀದಿಸಿ ಕೊಟ್ಟಿದ್ದ. ಅಷ್ಟೇ ಅಲ್ಲದೇ ಬಾಲಿವುಡ್ ಸೇರಿದಂತೆ ಪ್ರಖ್ಯಾತ ಸಿನಿಮಾ ನಟಿಯರ ಬಗ್ಗೆ ಮೋಹ ಬೆಳೆಸಿಕೊಂಡಿದ್ದ. ಅವರಿಗಾಗಿ ಕೋಟ್ಯಂತರ ರೂ. ಖರ್ಚು ಮಾಡಿ ಮೋಜು-ಮಸ್ತಿ ಮಾಡುತ್ತಿದ್ದ ಎಂದು ಹಲವು ಕುತೂಹಲಕಾರಿ ವಿಷಯಗಳು ಬೆಳಕಿಗೆ ಬಂದಿವೆ.ಗುಜರಾತ್, ಮಹಾರಾಷ್ಟ್ರ ಸೇರಿದಂತೆ ಹಲವು ರಾಜ್ಯಗಳಲ್ಲಿ ಆರೋಪಿ ವಿರುದ್ಧ ಪ್ರಕರಣಗಳು ದಾಖಲಾಗಿವೆ. ಕಳೆದ ತಿಂಗಳ 9 ರಂದು ಬೆಂಗಳೂರಿನ ಮಡಿವಾಳದಲ್ಲಿ ಮನೆಗಳ್ಳತನ ಮಾಡಿ ಎಸ್ಕೇಪ್ ಆಗಿದ್ದ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ.

# ಮೈಕ್ರೋ ಫೈನಾನ್ಸ್ ಕಾಟಕ್ಕೆ ಗೃಹಲಕ್ಷ್ಮಿ ಹಣ ಬರದಿರುವುದೇ ಕಾರಣ!

### ಕಾಂಗ್ರೆಸ್ ಸರ್ಕಾರದ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿ ಹಾಗೂ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರೇ ಹೊಣೆ ಎಂದು ಹೇಳಿದೆ

• ಉದಯವಾಹಿನಿ ಬೆಂಗಳೂರು



ಕರ್ನಾಟಕದಲ್ಲಿ ಮೈಕ್ರೋ ಫೈನಾನ್ಸ್ ಕಾಟಕ್ಕೆ 3 ಮಂದಿ ಹಾಗೂ ಕಳೆದ 6 ತಿಂಗಳಿಂದ ಗೃಹಲಕ್ಷ್ಮಿ ಯೋಜನೆಯ ಹಣ ಬಾರದಿರುವುದೇ ಪ್ರಮುಖ ಕಾರಣ ಎಂದು ಜೆಡಿಎಸ್ ಕಿಡಿಕಾರಿದೆ.

ಈ ಬಗ್ಗೆ ಟ್ವೀಟ್ ಮಾಡಿರುವ ಜೆಡಿಎಸ್, ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳ ಕಾಟದಿಂದ ಅಮಾಯಕ ಜನರು ಬಲಿಯಾಗುತ್ತಿರುವುದಕ್ಕೆ ನೇರವಾಗಿ ಕಾಂಗ್ರೆಸ್ ಸರ್ಕಾರದ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಹಾಗೂ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರೇ ಹೊಣೆ ಎಂದು ಹೇಳಿದೆ.

**6 ತಿಂಗಳಿಂದ ಬಂದಿಲ್ಲ ಗೃಹಲಕ್ಷ್ಮಿ ಹಣ:** ಕಾಂಗ್ರೆಸ್ ಕರ್ನಾಟಕದಲ್ಲಿ ಅಧಿಕಾರ ಹಿಡಿಯಲು ರಾಜ್ಯದ ಮಹಿಳೆಯರ ಖಾತೆಗೆ ಪ್ರತಿ ತಿಂಗಳು ರೂ.2 ಸಾವಿರ ಗೃಹಲಕ್ಷ್ಮಿ ಹಣ ಹಾಕುವುದಾಗಿ ಆಸೆ ತೋರಿಸಿ, ಈಗ ಸಮಯಕ್ಕೆ ಸರಿಯಾಗಿ ಕೊಡದೆ ಸತಾಯಿಸುತ್ತಿದೆ. ಕಳೆದ 6 ತಿಂಗಳಿಂದ ಗೃಹಲಕ್ಷ್ಮಿ ಹಣ ಮಹಿಳೆಯರಿಗೆ ಅಕೌಂಟ್‌ಗೆ ಬಂದಿಲ್ಲ. ಪ್ರತಿ ತಿಂಗಳು ನೆಟ್ಟಗೆ ಹಣವನ್ನು ಹಾಕಲು ಸಿದ್ದರಾಮಯ್ಯ ಸರ್ಕಾರ ವಿಫಲವಾಗಿದೆ. ಇದರಿಂದ ಗೃಹಲಕ್ಷ್ಮಿ ಹಣವನ್ನೇ ನಂಬಿಕೊಂಡು, ಪ್ರತಿ ತಿಂಗಳು ಸಾಲದ ಕಂತು ಕಟ್ಟಬಹುದು ಎಂದು ನಂಬಿದ್ದ ಜನರೇ ಈಗ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕಾಟಕ್ಕೆ ಬಲಿಯಾಗುತ್ತಿದ್ದಾರೆ ಎಂದು ಕಿಡಿಕಾರಿದೆ.

ಸಾಲರಾಮಯ್ಯ ಎಂದು ಜೆಡಿಎಸ್ ವಾಗ್ದಾಳಿ

**ಗ್ಯಾರಂಟಿ ನೆಚ್ಚಿಕೊಂಡು ಸಾಲ**

**ಗೃಹಲಕ್ಷ್ಮಿ ಗ್ಯಾರಂಟಿ ನೆಚ್ಚಿಕೊಂಡು, ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಸಾಲದ ಆಸೆಗೆ ಬೀಳುವ ಬಹುತೇಕ ಜನರು ಈಗ ಕಂತು, ಬಡ್ಡಿ ಕಟ್ಟಲಾಗದೇ ಕಿರುಕುಳ ಹಾಗೂ ಬೆದರಿಕೆಗಳಿಗೆ ಮನನೊಂದು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ ಎಂದು ಜೆಡಿಎಸ್ ಆರೋಪ ಮಾಡಿದೆ.**

**ಕರ್ನಾಟಕದಲ್ಲಿ ಮೈಕ್ರೋ ಫೈನಾನ್ಸ್ ಕಾಟಕ್ಕೆ 3 ಮಂದಿ ಕಾರಣ ಎಂದು ಜೆಡಿಎಸ್ ಆರೋಪ. ಮಹಿಳೆಯರು ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಒಳಗಾಗಲು ಗೃಹಲಕ್ಷ್ಮಿ ಯೋಜನೆಯ ಹಣ ಬಾರದಿರುವುದೇ ಪ್ರಮುಖ ಕಾರಣ ಎಂದ ಜೆಡಿಎಸ್.ಗ್ಯಾರಂಟಿ ಯೋಜನೆಗಳನ್ನು ನೆಚ್ಚಿಕೊಂಡ ಸಾಲ ಮಾಡಿದ ಮಹಿಳೆಯರಿಗೆ ಸಂಕಷ್ಟ ಎಂದು ಜೆಡಿಎಸ್ ಟ್ವೀಟ್.**

ಸ್ವಯಂ ಘೋಷಿತ ಆರ್ಥಿಕ ತಜ್ಞ ಸಾಲರಾಮಯ್ಯ ಅವರೇ ಸಾಲ ಮಾಡುವುದೇ ಸಾಧನೆಯೇ ರಾಜ್ಯವನ್ನು ಆರ್ಥಿಕ ತುರ್ತು

**ಕರ್ನಾಟಕದಲ್ಲಿ ಮೈಕ್ರೋ ಫೈನಾನ್ಸ್ ಕಾಟಕ್ಕೆ ಗ್ಯಾರಂಟಿ ಯೋಜನೆ ಗೃಹಲಕ್ಷ್ಮಿ ಹಣ ಬಾರದಿರುವುದೇ ಕಾರಣ ಎಂದು ಜೆಡಿಎಸ್ ಆರೋಪ ಮಾಡಿದೆ. ಜತೆಗೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಹಾಗೂ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕಾರಣ ಎಂದು ಹೇಳಿದೆ.**

**ಸಾಲ ಮಾಡಿದ ಮಹಿಳೆಯರಿಗೆ ಸಂಕಷ್ಟ**

ಪರಿಸ್ಥಿತಿಗೆ ತಳ್ಳಿರುವ ಕಾಂಗ್ರೆಸ್ ಸರ್ಕಾರ, ಅದಕ್ಷ ಹಾಗೂ ಅಸಮರ್ಪಕ ಆಡಳಿತದಿಂದ ಕರ್ನಾಟಕವನ್ನು ದೊಡ್ಡ ಪ್ರಮಾಣದ ಸಾಲದ ಕೂಪಕ್ಕೆ ಸಿಲುಕಿಸಿದೆ. ರಾಜ್ಯದ ಆದಾಯ ಹೆಚ್ಚಿಸುವಲ್ಲಿ ಸಂಪೂರ್ಣ ಎಡವಿರುವ ಸಿಎಂ ಸಿದ್ದರಾಮಯ್ಯ ಅವರೇ, ಗ್ಯಾರಂಟಿ ಯೋಜನೆಗಳಿಂದ ಬೊಕ್ಕಸವನ್ನು ಬರಿದು ಮಾಡಿದ್ದಾರೆ.

ವರ್ಷದಿಂದ ವರ್ಷಕ್ಕೆ ಸಾಲದ ಪ್ರಮಾಣ ಏರಿಕೆಯಾಗುತ್ತಿದ್ದು, ಅಸಲು ಪಾವತಿಗಿಂತ ಬಡ್ಡಿ ಪಾವತಿಯೇ ಜಾಸ್ತಿಯಾಗಿರುವುದು ಆರ್ಥಿಕ ಹೊರೆಯನ್ನು ಮತ್ತಷ್ಟು ಹೆಚ್ಚಿಸಿದೆ.

ಕಾಂಗ್ರೆಸ್ ದುರಾಡಳಿತ ಹೀಗೆ ಮುಂದುವರಿದರೆ, ಅಧಿಕಾರದಿಂದ ಕೆಳಗಿಳಿಯುವಷ್ಟರಲ್ಲಿ ರಾಜ್ಯವನ್ನು ದಿವಾಳಿ ಮಾಡಿಯೇ ಹೋಗುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದು ಜೆಡಿಎಸ್ ಟ್ವೀಟ್ ಮಾಡಿದೆ.

## ಸುಗ್ರೀವಾಜ್ಞೆ ಜಾರಿಗೆ ರಾಜ್ಯಪಾಲರು ಅಂಕಿತ ಹಾಕುವ ಸಾಧ್ಯತೆ

• ಉದಯವಾಹಿನಿ ಬೆಂಗಳೂರು



☛ ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಮೈಕ್ರೋಫೈನಾನ್ಸ್ ದೌರ್ಜನ್ಯಕ್ಕೆ ಸರಣಿ ಆತ್ಮಹತ್ಯೆ ಪ್ರಕರಣಗಳು ನಡೆಯುತ್ತಿವೆ. ಇದರ ಮಧ್ಯ ನೆನ್ನೆ ರಾಜ್ಯಪಾಲರಿಗೆ ಮೈಕ್ರೋ ಫೈನಾನ್ಸ್ ದೌರ್ಜನ್ಯ ತಡೆ ಕುರಿತು ಕರಡು ಪ್ರತಿಯನ್ನು ಕಳುಹಿಸಲಾಗಿದ್ದು.

ರಾಜ್ಯಪಾಲರು ಕರಡು ಪ್ರತಿಯನ್ನು ಪರಿಶೀಲಿಸಿ ಅಂಕಿತ ಹಾಕುವ ಸಾಧ್ಯತೆ ಇದೆ ಎಂದು ಗೃಹ ಸಚಿವ ಜಿ.ಪರಮೇಶ್ವರ ತಿಳಿಸಿದರು.ಮೈಕ್ರೋ ಫೈನಾನ್ಸ್ ಕಿರುಕುಳ ತಪ್ಪಿಸಲು ಸುಗ್ರೀವಾಜ್ಞೆ ಜಾರಿ ವಿಚಾರವಾಗಿ ಈ ಹಿಂದೆ ಶಿಕ್ಷೆ ಮೂರು ವರ್ಷ ಬಿಟ್ಟು ಈಗ 10 ವರ್ಷ ಮಾಡಿದ್ದೇವೆ.ದಂಡದ ಮತವನ್ನು 5 ಲಕ್ಷ ರೂಪಾಯಿಗೆ ಹೆಚ್ಚಿಸಿದ್ದೇವೆ. ಬಿಲ್ ಅನ್ನು ರಾಜ್ಯಪಾಲರಿಗೆ ಕಳುಹಿಸಿದ್ದೇವೆ.

ಇವತ್ತು ಪರಿಶೀಲಿಸಿ ರಾಜಪಾಲರು ಅಂಕಿತ ಹಾಕಬಹುದು. ಕಾನೂನಿನ ತೊಡಕುಗಳನ್ನು ಸರಿಪಡಿಸಿದ್ದೇವೆ. ಕಾನೂನಿನ ತೊಂದರೆ ಬರುವುದಿಲ್ಲ ಅಂತ ಅಂದುಕೊಂಡಿದ್ದೇವೆ ಎಂದು ತಿಳಿಸಿದರು. ಗೋ ಹತ್ಯೆ ಮಾಡುವವರನ್ನು ಗುಂಡಿಕ್ಕಿ ಕೊಲ್ಲುತ್ತೇನೆ ಎಂದು ಶಾಸಕ ಮಂಕಾಳು ವೈದ್ಯ ಹೇಳಿಕೆ ಕುರಿತಾಗಿ ಮಂಕಾಳು ವೈದ್ಯ ವಯಕ್ತಿಕವಾಗಿ ಹೇಳಿರುತ್ತಾರೆ.

**ಕ್ಯೂ ಆರ್ ಕೋಡ್ ಮೂಲಕ ಮತಾಂತರ ಮಾಡುತ್ತಿರುವ ವಿಚಾರವಾಗಿ ಆ ಬಗ್ಗೆ ನನಗೆ ಗೊತ್ತಿಲ್ಲ ಏನಾದರೂ ದೂರು ಬಂದರೆ ಕಾನೂನು ಚೌಕಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತದೆ ಮತಾಂತರ ನಿಷೇಧ ಕಾಯ್ದೆ ಹಿಂಪಡೆಯಲು ಕ್ರಮವಾಗುತ್ತಿದೆ ಅಷ್ಟೇ ಎಂದು ತಿಳಿಸಿದರು ಇನ್ನು ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಹಿಜಾಬ್ ಗೆ ಅವಕಾಶ ನೀಡುವ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು ಈ ಕುರಿತು ಸುಧೀರ್ಘವಾಗಿ ಚರ್ಚೆ ಮಾಡುತ್ತೇವೆ. ಇನ್ನು ಒಂದು ತಿಂಗಳು ಸಮಯವಿದೆ ನೋಡೋಣ ಚರ್ಚೆ ಮಾಡುತ್ತೇವೆ ಎಂದು ಬೆಂಗಳೂರಿನಲ್ಲಿ ಗೃಹ ಇಲಾಖೆ ಸಚಿವ ಡಾ.ಜಿ ಪರಮೇಶ್ವರ್ ತಿಳಿಸಿದರು.**

## ಫೆ.13ರಂದು ಕ್ವಿನ್‌ಸಿಟಿ ಕುರಿತು ರೌಂಡ್ ಟೇಬಲ್ ಚರ್ಚೆ

• ಉದಯವಾಹಿನಿ ಬೆಂಗಳೂರು



☛ ಉದಯವಾಹಿನಿ ಚಿತ್ರ

ಈ ಬಾರಿಯ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ದೇಶ - ವಿದೇಶಗಳ ಪ್ರತಿಷ್ಠಿತ ವಿಶ್ವವಿದ್ಯಾಲಯಗಳು ಮತ್ತು ಹೆಸರಾಂತ ಉದ್ಯಮಗಳ ಪ್ರತಿಷ್ಠಾನಗಳೊಂದಿಗೆ ಉದ್ದೇಶಿತ ಕ್ವಿನ್ ಸಿಟಿ'ಯಲ್ಲಿ ಅತ್ಯುತ್ಕೃಷ್ಟ ಶಿಕ್ಷಣ, ಸಂಶೋಧನೆ ಮತ್ತು ನಾವೀನ್ಯತೆಗಳ ಕ್ಷೇತ್ರದಲ್ಲಿ ಸಹಭಾಗಿತ್ವದ ಮೂಲಕ ದಕ್ಷ ಕಾರ್ಯ ಪರಿಸರ ಸೃಷ್ಟಿಸುವ ಕುರಿತು ಪ್ರತ್ಯೇಕ ರೌಂಡ್ ಟೇಬಲ್ ಗೋಷ್ಠಿಯನ್ನು ಏರ್ಪಡಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ತಿಳಿಸಿದ್ದಾರೆ.

ಮಂಗಳವಾರ ಈ ಬಗ್ಗೆ ಮಾಹಿತಿ ನೀಡಿರುವ ಅವರು, ಸಮಾವೇಶದ ಎರಡನೆಯ ದಿನವಾದ ಫೆ.13ರಂದು ಈ ಗೋಷ್ಠಿ ನಡೆಯಲಿದೆ. ಈ ಸಂದರ್ಭದಲ್ಲಿ ವಿದೇಶಗಳ 5-6 ಮತ್ತು ಭಾರತದ 7-8 ವಿಶ್ವವಿದ್ಯಾಲಯಗಳೊಂದಿಗೆ ಒಡಂಬಡಿಕೆಗೆ ಸಹಿ ಹಾಕುವ ಸಾಧ್ಯತೆ ಕೂಡ ಇದೆ. ಈ ಸಂಬಂಧ ಮಾತುಕತೆ ಪ್ರಗತಿಯಲ್ಲಿದ್ದು, ಯಾವ ವಿ.ವಿ.ಗಳೊಂದಿಗೆ ಒಡಂಬಡಿಕೆ ಆಗಲಿದೆ ಎನ್ನುವುದನ್ನು ನಂತರದ ದಿನಗಳಲ್ಲಿ ಅಂತಿಮವಾಗಲಿದೆ. ಯುಜಿಸಿ ನಿಯಮಗಳ ಪ್ರಕಾರ, ಜಗತ್ತಿನ ಮೊದಲ 500 ಸ್ಥಾನಗಳಲ್ಲಿರುವ ವಿ.ವಿ.ಗಳು ಭಾರತದಲ್ಲಿ ತಮ್ಮ ಕ್ಯಾಂಪಸ್ಸನ್ನು ತೆರೆಯಲು ಅವಕಾಶವಿದ್ದು ಇದನ್ನು ಸದ್ಬಳಕೆ ಮಾಡಿಕೊಳ್ಳಲಾಗುವುದು' ಎಂದಿದ್ದಾರೆ.

ಒಂದೂವರೆ ಗಂಟೆ ಕಾಲದ ಈ ಗೋಷ್ಠಿಯಲ್ಲಿ ರಾಜ್ಯದ ಉನ್ನತ ಶಿಕ್ಷಣ ಸಚಿವ ಡಾ.ಎಂ ಸಿ ಸುಧಾಕರ್, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಸೇರಿದಂತೆ ಇತರ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಅವರು ಹೇಳಿದ್ದಾರೆ.

**ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಕೈಗಾರಿಕೋದ್ಯಮಗಳಲ್ಲಿನ ಹೂಡಿಕೆ ಬಗ್ಗೆ ಮಾತ್ರ ಗಮನವಿರುವುದಿಲ್ಲ. ಕೌಶಲ್ಯಪೂರ್ಣ ಮಾನವ ಸಂಪನ್ಮೂಲ ಸೃಷ್ಟಿಯೂ ಸೇರಿದಂತೆ ಸಂಶೋಧನೆ ಮತ್ತು ಅದಕ್ಕೆ ಪೂರಕವಾಗಿರುವ ವಲಯಗಳಿಗೂ ಆದ್ಯತೆ ಇರಲಿದೆ. ಏಕೆಂದರೆ, ಕ್ವಿನ್ ಸಿಟಿ ಯೋಜನೆಯು ಭವಿಷ್ಯದ ನಗರಾಭಿವೃದ್ಧಿಯ ಪರಿಕಲ್ಪನೆ ಮತ್ತು ಜಾಗತಿಕ ಗುಣಮಟ್ಟದ ಉದ್ಯಮಶೀಲತೆ, ಕೌಶಲ ಮುಂತಾದವನ್ನು ಒಳಗೊಂಡಿದೆ ಎಂದು ಅವರು ಹೇಳಿದ್ದಾರೆ.**

## ಮಹಾ ಕುಂಭ ಮೇಳಕ್ಕೆ ಡಿಕೆಶಿ: ಪಾಪ-ಪುಣ್ಯದ ಪ್ರಶ್ನೆ ಕೇಳಿದ ಆರ್.ಅಶೋಕ್

• ಉದಯವಾಹಿನಿ ಬೆಂಗಳೂರು

ದೇಶದ ಜನತೆಯ ಚಿತ್ತ ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭ ಮೇಳದತ್ತ ನೆಟ್ಟಿದೆ.ಈ ಕುಂಭ ಮೇಳಕ್ಕೆ ಎರಡು ದಿನಗಳ ಕಾಲ ಕರ್ನಾಟಕದ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಕುಟುಂಬ ಸಮೇತರವಾಗಿ ತೆರಳುತ್ತಿದ್ದಾರೆ.ಇದಕ್ಕೆ ಪ್ರತಿಕ್ರಿಸಿದ ವಿಪಕ್ಷ ನಾಯಕ ಆರ್.ಅಶೋಕ್ ಅವರು ಪಾಪ-ಪುಣ್ಯದ ಪ್ರಶ್ನೆ ಎತ್ತಿದ್ದಾರೆ.

ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಇದೇ ಫೆಬ್ರವರಿ 9, 10ರಂದು ಪ್ರಯಾಗ್‌ರಾಜ್‌ನಲ್ಲಿನ ಮಹಾ ಕುಂಭಮೇದಲ್ಲಿ ಪಾಲ್ಗೊಳ್ಳಲಿದ್ದಾರೆ. ಇದಕ್ಕೆ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿದ ಆರ್.ಅಶೋಕ್, ಗಂಗೆಯಲ್ಲಿ ಮಿಂದ ತಕ್ಷಣ ಡಿಸಿಎಂ ಡಿಕೆ ಶಿವಕುಮಾರ್ ಅವರ ಪಾಪಗಳೆಲ್ಲ ಕಳೆದುಹೋಗುತ್ತಾ? ಕುಂಭ ಮೇಳದಲ್ಲಿ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು ಪುಣ್ಯಸ್ನಾನ ಮಾಡಿದ ತಕ್ಷಣ ಕರ್ನಾಟಕದಲ್ಲಿ ಬಡತನ ನಿರ್ಮೂಲನೆ ಆಗುತ್ತಾ?. ಹೀಗಂತ ಈಗ ಎಐಸಿಸಿ ಮಲ್ಲಿಕಾರ್ಜುನ್ ಖರ್ಗೆ ಸಾಹೇಬರು ಪ್ರಶ್ನೆ ಮಾಡಲ್ವಾ? ಎಂದು ಅವರು ಪ್ರಶ್ನೆ ಮಾಡಿದ್ದಾರೆ. ಕುಂಭ ಮೇಳಕ್ಕೆ ಭೇಟಿ ನೀಡುತ್ತಿರುವ ಡಿಕೆ ಶಿವಕುಮಾರ್ ಅವರಿಗೆ ಹೀಗೆ ಪಾಪ-ಪುಣ್ಯಗಳ ಪ್ರಶ್ನೆ ಕೇಳುವ ಮೂಲಕ ಲೇವಡಿ ಮಾಡಿದ್ದಾರೆ. ಡಿಕೆಶಿಅವರು ಫೆಬ್ರವರಿ 09ರಂದು ಬೆಳಗ್ಗೆ, ಪ್ರಯಾಗ್ ರಾಜ್‌ಗೆ ತೆರಳಲಿದ್ದಾರೆ. ಅಲ್ಲಿ ಪೂಜೆ, ಯಮುನಾ, ಸರಸ್ವತಿ ಮತ್ತು ಗಂಗಾ ನದಿಗಳು ಕೂಡಿರುವ ತ್ರಿವೇಣಿ ಸಂಗಮದಲ್ಲಿ ಪುಣ್ಯಸ್ನಾನ ಮಾಡಲಿದ್ದಾರೆ. ಈ ಕುರಿತು ಸ್ವತಃ ಉಪ ಮುಖ್ಯಮಂತ್ರಿಗಳೇ ಮಾತನಾಡಿದ್ದಾರೆ.

**ಉತ್ತರ ಪ್ರದೇಶದ ಮಂತ್ರಿಗಳು ನಮಗೆ ಆತ್ಮೀಯರಾಗಿದ್ದು, ಅವರು ನನ್ನನ್ನು ಆಹ್ವಾನಿಸಿದ್ದಾರೆ. ಈ ಕಾರಣದಿಂದ ನಾನು ಮತ್ತು ನನ್ನ ಕುಟುಂಬ ಪರಿವಾರ ಸಮೇತವಾಗಿ ಮಹಾಕುಂಭ ಮೇಳದಲ್ಲಿ ಪಾಲ್ಗೊಳ್ಳಲು ಉತ್ತರ ಪ್ರದೇಶಕ್ಕೆ ಮುಂದಿನ ವಾರ ತೆರಳಲಿದ್ದೇನೆ ಎಂದು ಅವರು ಮಾಹಿತಿ ನೀಡಿದ್ದಾರೆ.**



## ಸವಾರನಿಗೆ 1.61 ಲಕ್ಷ ರೂ. ದಂಡ ವಿಧಿಸಿದ ಪೊಲೀಸರು

• ಉದಯವಾಹಿನಿ ಬೆಂಗಳೂರು



2023ರ ಫೆಬ್ರವರಿಯಿಂದ ಬಾಕಿ ಇರುವ 311 ಸಂಚಾರ ನಿಯಮಗಳಿಗೆ ಬೆಂಗಳೂರು ಸಂಚಾರ ಪೊಲೀಸರು 50,000 ರೂ.ಗಿಂತ ಹೆಚ್ಚು ಮೌಲ್ಯದ ದ್ವಿಚಕ್ರ ವಾಹನಕ್ಕೆ 1.61 ಲಕ್ಷ ರೂ.ಗಳ ದಂಡ ವಿಧಿಸಿದ್ದಾರೆ. ಕೆಎ 05 ಜೆಎಕ್ಸ್ 1344 ನೋಂದಣಿ ಸಂಖ್ಯೆಯ ಸ್ಕೂಟರ್ ಅನ್ನು ಸಿಟಿ ಮಾರ್ಕೆಟ್ ಸಂಚಾರ ಪೊಲೀಸರು ವಶಪಡಿಸಿಕೊಂಡಿದ್ದು, 300 ಕ್ಕೂ ಹೆಚ್ಚು ಸಂಚಾರ ನಿಯಮಗಳನ್ನು ಉಲ್ಲಂಘಿಸಿ ದಂಡ ಪಾವತಿಸದೆ ತಪ್ಪಿಸಿಕೊಂಡಿದ್ದ ಚಾಲಕನನ್ನು ಬಂಧಿಸಿದ್ದಾರೆ. ಸುದೀಪ್ ವಾಹನದ ಚಾಲಕರಾಗಿದ್ದು, ವಾಹನದ ಮಾಲೀಕ ಪರಿಯ ಸ್ವಾಮಿ ಅವರಿಗೆ ನೋಟಿಸ್ ನೀಡಲಾಗಿದೆ.ಸಾಮಾಜಿಕ ಮಾಧ್ಯಮ ಪ್ಲಾಟ್ಫಾರ್ಮ್ ಎಕ್ಸ್‌ನಲ್ಲಿ ಎತ್ತಿದ ದೂರಿನ ಮೇರೆಗೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ.ಬಾಕಿ ಇರುವ ಕೆಲವು ಉಲ್ಲಂಘನೆಗಳಲ್ಲಿ ಹೆಲ್ಮೆಟ್ ಧರಿಸದಿರುವುದು ಮತ್ತು ಸಿಗ್ನಲ್ ಜಂಪ್ ಮಾಡುವುದು ಸೇರಿವೆ. 2023 ರಿಂದ ಒಂದೇ ವಾಹನದ ವಿರುದ್ಧ ಕನಿಷ್ಠ ಮೂರು ದೂರುಗಳು ಬಂದಿವೆ


## ಬೆಂಗಳೂರು ಕಾಟನ್ ಸಿಟಿ ಯೋಜನೆ, ಮಹತ್ವದ ಅಪ್ಡೇಟ್ ಕೊಟ್ಟ ಕೈಗಾರಿಕೆ ಸಚಿವರು

• ಉದಯವಾಹಿನಿ ಬೆಂಗಳೂರು

ಫೆಬ್ರವರಿ ಎರಡನೇ ವಾರ ಜಾಗತಿಕ ಹೂಡಿಕೆದಾರರ ಸಮಾವೇಶ 2025 ನಡೆಯಲಿದೆ. ದೇಶ- ವಿದೇಶಗಳ ಪ್ರತಿಷ್ಠಿತ ವಿಶ್ವವಿದ್ಯಾಲಯಗಳು ಮತ್ತು ಹೆಸರಾಂತ ಉದ್ಯಮಗಳ ಪ್ರತಿಷ್ಠಾನಗಳು ಪಾಲ್ಗೊಳ್ಳಲಿವೆ. ಈ ವೇಳೆ ಬೆಂಗಳೂರು ಹೊರ ವಲಯದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿರುವ ಜ್ಞಾನ, ಆರೋಗ್ಯ ಮತ್ತು ಸಂಶೋಧನೆ ನಗರ ನಿರ್ಮಿಸುವ ಬಗ್ಗೆ ಮಹತ್ವದ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

ಹೂಡಿಕೆದಾರರ ಸಮಾವೇಶದಲ್ಲಿ ಪಾಲ್ಗೊಳ್ಳುವ ಹೆಸರಾಂತ ವಿವಿಗಲು, ಉದ್ಯಮ ಪ್ರತಿಷ್ಠಾನಗಳ ಜೊತೆಗೆ ಕರ್ನಾಟಕ ಸರ್ಕಾರದ ಉದ್ದೇಶಿತ 'ಕ್ವಿನ್ ಸಿಟಿ'ಯಲ್ಲಿ ಅತ್ಯುತ್ಕೃಷ್ಟ ಶಿಕ್ಷಣ, ಸಂಶೋಧನೆ ಮತ್ತು ನಾವೀನ್ಯತೆಗಳ ಕ್ಷೇತ್ರದಲ್ಲಿ ಸಹಭಾಗಿತ್ವದ ಮೂಲಕ ದಕ್ಷ ಕಾರ್ಯ ಪರಿಸರ ಸೃಷ್ಟಿಸುವ ಕುರಿತು ಪ್ರತ್ಯೇಕ ರೌಂಡ್ ಟೇಬಲ್ ಗೋಷ್ಠಿ ನಡೆಸಲಾಗುತ್ತಿದೆ.

ಕೈಗಾರಿಕೆ ಸಚಿವ ಎಂಬಿ ಪಾಟೀಲ್ ಅವರು ಮಂಗಳವಾರ ಅಧಿಕೃತ ಮಾಹಿತಿ ನೀಡಿದರು. ಸಮಾವೇಶದ ಎರಡನೆಯ ದಿನವಾದ ಫೆ.13ರಂದು ಈ ಗೋಷ್ಠಿ ನಡೆಯಲಿದೆ. ಈ ಸಂದರ್ಭದಲ್ಲಿ ವಿದೇಶಗಳ 5-6 ಮತ್ತು ಭಾರತದ 7-8 ವಿಶ್ವವಿದ್ಯಾಲಯಗಳೊಂದಿಗೆ ಒಡಂಬಡಿಕೆಗೆ ಸಹಿ ಹಾಕುವ ಸಾಧ್ಯತೆ ಇದೆ. ಈ ಸಂಬಂಧ ಮಾತುಕತೆ ಪ್ರಗತಿಯಲ್ಲಿದ್ದು, ಯಾವ ವಿ.ವಿ.ಗಳೊಂದಿಗೆ ಒಡಂಬಡಿಕೆ ಆಗಲಿದೆ ಎನ್ನುವುದನ್ನು ನಂತರದ ದಿನಗಳಲ್ಲಿ ಅಂತಿಮವಾಗಲಿದೆ.ಯುಜಿಸಿ ನಿಯಮಗಳ ಪ್ರಕಾರ, ಜಗತ್ತಿನ ಮೊದಲ 500 ಸ್ಥಾನಗಳಲ್ಲಿರುವ ವಿಶ್ವವಿದ್ಯಾಲಯಗಳು ಭಾರತದಲ್ಲಿ ತಮ್ಮ ಕ್ಯಾಂಪಸ್ಸನ್ನು ತೆರೆಯಲು ಅವಕಾಶವಿದೆ. ಇದನ್ನು ಸದ್ಬಳಕೆ ಮಾಡಿಕೊಳ್ಳಲಾಗುವುದು ಎಂದರು.



☛ ಉದಯವಾಹಿನಿ ಚಿತ್ರ

**ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಕೈಗಾರಿಕೋದ್ಯಮಗಳಲ್ಲಿನ ಹೂಡಿಕೆ ಬಗ್ಗೆ ಮಾತ್ರ ಗಮನವಿರುವುದಿಲ್ಲ. ಕೌಶಲ್ಯಪೂರ್ಣ ಮಾನವ ಸಂಪನ್ಮೂಲ ಸೃಷ್ಟಿಯೂ ಸೇರಿದಂತೆ ಸಂಶೋಧನೆ ಮತ್ತು ಅದಕ್ಕೆ ಪೂರಕವಾಗಿ ರುವ ವಲಯಗಳಿಗೂ ಆದ್ಯತೆ ಇರಲಿದೆ. ಏಕೆಂದರೆ, ಕ್ವಿನ್ ಸಿಟಿ ಯೋಜನೆಯು ಭವಿಷ್ಯದ ನಗರಾಭಿವೃದ್ಧಿಯ ಪರಿಕಲ್ಪನೆ ಮತ್ತು ಜಾಗತಿಕ ಗುಣಮಟ್ಟದ ಉದ್ಯಮಶೀಲತೆ, ಕೌಶಲ ಮುಂತಾದವನ್ನು ಒಳಗೊಂಡಿದೆ ಎಂದು ಹೇಳಿದರು.**

ಒಂದೂವರೆ ಗಂಟೆ ಕಾಲದ ಈ ಗೋಷ್ಠಿಯಲ್ಲಿ ರಾಜ್ಯದ ಉನ್ನತ ಶಿಕ್ಷಣ ಸಚಿವ ಡಾ.ಎಂ ಸಿ ಸುಧಾಕರ್, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಸೇರಿದಂತೆ ಇತರ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ.

# ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕರ್ನಾಟಕ ಕಾಂಗ್ರೆಸ್ ನಾಯಕರಿಗೆ ಎಚ್ಚರಿಕೆ

### ಪುತ್ರಿಯನ್ನು ಜಾರಕಿಹೊಳಿ, ಪುತ್ರನನ್ನು ಮಹದೇವಪ್ಪ ಗೆಲ್ಲಿಸಿಕೊಂಡು ಬಂದಿಲ್ಲವೇ: ಎಷ್ಟು ಕಾಂಗ್ರೆಸ್ಸಿಗರಿಗೆ ಇದು ಸಾಧ್ಯವಾಗಿದೆ?

• ಉದಯವಾಹಿನಿ ಬೆಂಗಳೂರು

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕರ್ನಾಟಕ ಕಾಂಗ್ರೆಸ್ ನಾಯಕರಿಗೆ ಎಚ್ಚರಿಕೆಯನ್ನು ಕೊಟ್ಟಿದ್ದರೂ, ಒಳಗೊಳಗಿನ ಬೇಗುದಿ ಹಾಗೇ ಮುಂದುವರಿದಿದೆ. ಪೂರ್ಣಾವಧಿಗೆ, ಸಿದ್ದರಾಮಯ್ಯನವರೇ ಸಿಎಂ ಎಂದು ಅವರ ಪುತ್ರ ಡಾ.ಯತೀಂದ್ರ ಹೇಳಿದ್ದರೆ, ಹೈಕಮಾಂಡ್ ನಿರ್ಧಾರವೇ ಅಂತಿಮ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಕೆಲವು ದಿನಗಳ ಹಿಂದೆ ರಾಜ್ಯ ಗೃಹ ಸಚಿವ ಡಾ.ಪರಮೇಶ್ವರ್ ಕೊಠಡಿಯಲ್ಲಿ ಸಚಿವರಾದ ಸತೀಶ್ ಜಾರಕಿಹೊಳಿ, ಕೆ.ಎನ್.ರಾಜಣ್ಣ ಮತ್ತು ಡಾ.ಮಹದೇವಪ್ಪ ಸೇರಿದ್ದರು. ಸ್ವಾಮೀಜಿಯೊಬ್ಬರು ಜಾತ್ರೆಗೆ ಕರೆಯಲು ಬಂದಿದ್ದರು, ಅವರ ಆಶೀರ್ವಾದವನ್ನು ಪಡೆಯಲು ಇತರ ಮೂವರು ಸಚಿವರು ಬಂದಿದ್ದರು ಎಂದು ಪರಮೇಶ್ವರ್ ಹೇಳಿದ್ದರು. ಕರ್ನಾಟಕ ಕಾಂಗ್ರೆಸ್ಸಿನ ಫೋರ್ ಮ್ಯಾನ್ ಆರ್ಮಿ, ಆವಾಗಾವಗ ಸಭೆ ಸೇರುವುದು ಹೊಸದೇನಲ್ಲ. ಈ ರೀತಿ ಸಭೆ ನಡೆದರೆ, ಒಂದು ಕಡೆ ಕೂತು ಡಿನ್ನರ್ ಮಾಡಿದರೆ ತಪ್ಪೇನು ಎನ್ನುವ ಧಾಟಿಯಲ್ಲಿ ಸಿದ್ದರಾಮಯ್ಯ ಕೂಡಾ ಮಾತನಾಡಿದ್ದರು. ಹೈಕಮಾಂಡ್ ಸೂಚನೆಯ ನಂತರವೂ ಈ ರೀತಿಯ ವಿದ್ಯಮಾನಗಳು ನಡೆಯುತ್ತಿವೆ. ಈ ನಾಲ್ಕು ಜನ ಪ್ರಭಾವೀ ಸಚಿವರು ಸ್ಪಷ್ಟವಾದ ಗುರಿಯನ್ನು ಇಟ್ಟುಕೊಂಡು ಕೆಲಸ ಮಾಡುತ್ತಿದ್ದಾರೆ. ಮೂಲಗಳ ಪ್ರಕಾರ, 2028ರ ಚುನಾವಣೆಗೆ ವರೆಗೂ, ಸಿದ್ದರಾಮಯ್ಯನವರನ್ನೇ ಮುಖ್ಯಮಂತ್ರಿಯಾಗಿ ಮುಂದುವರಿಸಿದರೆ, ಈ ನಾಲ್ವರು ಸಚಿವರಿಗೆ ಯಾವುದೇ ತಕಾರಾರು ಇಲ್ಲ. ಆದರೆ, ಹೈಕಮಾಂಡ್ ತಲೆಯಲ್ಲಿ ಬೇರೆ ಏನಾದರೂ ಲೆಕ್ಕಾಚಾರವಿದ್ದರೆ?



☛ ಉದಯವಾಹಿನಿ ಚಿತ್ರ

**ಹೈಕಮಾಂಡ್ ಸೂಚನೆ**

ಮುಖ್ಯಮಂತ್ರಿ ಒಡಂಬಡಿಕೆಯ ಬಗ್ಗೆ ಈ ವರ್ಷಾಂತ್ಯದಲ್ಲಿ ಕಾಂಗ್ರೆಸ್ ಹೈಕಮಾಂಡ್ ಏನಾದರೂ ನಿರ್ಧಾರ ತೆಗೆದುಕೊಳ್ಳುವ ಯೋಜನೆಯನ್ನು ಹಾಕಿಕೊಂಡಿದ್ದರೆ, ಅದಕ್ಕೆ ಈಗಲೇ ಪೂರ್ವ ತಯಾರಿ ಮಾಡಿಕೊಳ್ಳುವಂತೆ, ನಾಲ್ವರು ಸಚಿವರು ಆಗಾಗ ಭೇಟಿಯಾಗುತ್ತಿದ್ದಾರೆ ಎಂದು ವಿಶ್ಲೇಷಿಸಲಾಗುತ್ತಿದೆ.

ಕಾಂಗ್ರೆಸ್ ಅಧಿಕಾರಕ್ಕೆ ಬರಲು ಎಲ್ಲರ ಪರಿಶ್ರಮವಿದೆ, ಇದು ಒಬ್ಬರಿಂದ ಬಂದಂತಹ ಅಭೂತಪೂರ್ವ ಗೆಲುವಲ್ಲ. ಕಾಂಗ್ರೆಸ್ 136 ಸ್ಥಾನವನ್ನು ಗೆದ್ದಿದ್ದಕ್ಕೆ ಒಬ್ಬರೇ ಕ್ರೆಡಿಟ್ ತೆಗೆದು ಕೊಳ್ಳುವುದಕ್ಕೆ ನಮ್ಮ ಆಕ್ಷೇಪವಿದೆ ಎನ್ನುವ ಮೂಲಕ, ಪರೋಕ್ಷವಾಗಿ ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಟಾಂಗ್ ಕೊಡುವ ಕೆಲಸ ನಡೆಯುತ್ತಲೇ ಬರುತ್ತಿದೆ. ಮುಖ್ಯಮಂತ್ರಿ ಬದಲಾವಣೆಯ ವಿಚಾರವನ್ನು ಏನಾದರೂ, ಹೈಕಮಾಂಡ್ ಕೈಗೆತ್ತಿಕೊಂಡರೆ, ಡಾ. ಪರಮೇಶ್ವರ್ ಅವರ ಹೆಸರನ್ನು ಮುನ್ನಲೆಗೆ ತರಲು ಈಗಿಂದಲೇ ಯೋಜನಾಬದ್ದವಾಗಿ, ಈ ನಾಲ್ವರು ತಂತ್ರಗಾರಿಕೆ ರೂಪಿಸುತ್ತಿದ್ದಾರೆ ಎಂದು ಹೇಳಲಾಗುತ್ತಿದೆ. ಡಾ.ಪರಮೇಶ್ವರ್ ಅವರು ಎಂಟು ವರ್ಷಗಳ ಕಾಲ ಕೆಪಿಸಿಸಿ ಅಧ್ಯಕ್ಷರಾಗಿ ಮತ್ತು ನಾಲ್ಕು ದಶಕಗಳಿಂದ ಪಕ್ಷಕ್ಕಾಗಿ ದುಡಿದಿದ್ದಾರೆ. ಇವರ ಪಕ್ಷದ ನಿಯತ್ತನ್ನು ಗುರುತಿಸುವ ಕೆಲಸ ನಡೆಯಬೇಕಿದೆ ಎಂದು, ಆಗಿಂದಾಗ್ಯೆ ಸಂದೇಶವನ್ನು ಹೈಕಮಾಂಡಿಗೆ ಈ ತಂಡ ಕಳುಹಿಸುತ್ತಿದೆ. ಚಿಕ್ಕೋಡಿಯಲ್ಲಿ ಬಿಜೆಪಿಯ ಪ್ರಬಲ ಪೈಪೋಟಿಯ ನಡುವೆಯೂ ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಾಂಕ, ಬಿಜೆಪಿಯ ಅಣ್ಣಾಸಾಹೇಬ ಜೊಲ್ಲೆಯವರನ್ನು 90,834, ಚಾಮರಾಜನಗರದಲ್ಲಿ ಡಾ.ಮಹದೇವಪ್ಪ ಪುತ್ರ ಸುನೀಲ್ ಭೋಸ್ 1,88,706, ಹಾಸನದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶ್ರೇಯಸ್ ಪಟೇಲ್ 42,649 ಮತಗಳ ಅಂತರದಿಂದ ಗೆಲುವನ್ನು ಸಾಧಿಸಿದ್ದರು. ಇನ್ನೊಂದು ಕಡೆ, ಬೆಂಗಳೂರು ಗ್ರಾಮಾಂತರದಲ್ಲಿ ಡಿಕೆಶಿ ಸಹೋದರ ಡಿ.ಕೆ.ಸುರೇಶ್, 2,69,647 ಮತಗಳ ಅಂತರದಿಂದ ಸೋಲುಂಡಿದ್ದರು.

**ಕಳೆದ ಲೋಕಸಭಾ ಚುನಾವಣೆಯಲ್ಲಿ ಸತೀಶ್ ಜಾರಕಿಹೊಳಿ ತಮ್ಮ ಪುತ್ರಿಯನ್ನು, ಡಾ.ಮಹದೇವಪ್ಪ ತಮ್ಮ ಪುತ್ರನನ್ನು ಮತ್ತು ಹಾಸನದ ಉಸ್ತುವಾರಿ ಕೆ.ಎನ್.ರಾಜಣ್ಣ, ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಿಕೊಂಡು ಬಂದಿದ್ದರು. ಅದೇ, ಬೆಂಗಳೂರು ಗ್ರಾಮಾಂತರದಲ್ಲಿ ಯಾಕೆ ಕಾಂಗ್ರೆಸ್ ಗೆಲ್ಲಲು ಸಾಧ್ಯವಾಗಿಲ್ಲ ಎನ್ನುವ ವಿಚಾರವೂ ಆವಾಗಾವಾಗ ಪ್ರಸ್ತಾವನೆಗೆ ಬರುತ್ತಿದೆ ಎಂದು ಹೇಳಲಾಗುತ್ತಿದೆ.**

**ಕಾಂಗ್ರೆಸ್ ಪಾರ್ಟಿಗೆ 136 ಸ್ಥಾನ ಸಿಗಲು ಒಬ್ಬರ ಕಾರಣವಲ್ಲ, ಹಲವಾರು ನಾಯಕರ ಪರಿಶ್ರಮ ಇದರ ಹಿಂದೆ ಇದೆ. ಒಬ್ಬರೇ ಇದರ ಕ್ರೆಡಿಟ್ ತೆಗೆದುಕೊಳ್ಳಬಾರದು ಎಂದು ಡಾ.ಪರಮೇಶ್ವರ್ ಅವರ ವಾದ ಎಂದು ಹೇಳಲಾಗುತ್ತಿದೆ. ಸತೀಶ್ ಜಾರಕಿಹೊಳಿ ತಮ್ಮ ಪುತ್ರಿಯನ್ನು ಮತ್ತು ಡಾ.ಮಹದೇವಪ್ಪ ತಮ್ಮ ಪುತ್ರನನ್ನು ಗೆಲ್ಲಿಸಿಕೊಂಡು ಬಂದಿಲ್ಲವೇ ಎನ್ನುವ ಪ್ರಶ್ನೆಯನ್ನು ಇಡಲಾಗುತ್ತಿದೆ ಎಂದು ಹೇಳಲಾಗುತ್ತಿದೆ.**

## ಫೆ.9, 10 ಕ್ಕೆ ಕುಂಭಮೇಳದಲ್ಲಿ ಡಿಕೆಶಿ ಭಾಗಿ

• ಉದಯವಾಹಿನಿ ಬೆಂಗಳೂರು

ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳದಲ್ಲಿ ಇದೇ ಫೆ.9, 10 ರಂದು ಡಿಸಿಎಂ ಡಿಕೆಶಿ ಪಾಲ್ಗೊಳ್ಳಲಿದ್ದಾರೆ.ಫೆ.9ರ ಬೆಳಗ್ಗೆ ಡಿಕೆಶಿ ಪ್ರಯಾಗ್ ರಾಜ್ ತಲುಪಲಿದ್ದಾರೆ. ಫೆ.10ರ ಮಧ್ಯಾನ 1 ಗಂಟೆ ನಂತರ ಪ್ರಯಾಗ್‌ರಾಜ್‌ನಿಂದ ವಾಪಾಸ್ ಆಗಲಿದ್ದಾರೆ.ವಿಶ್ವದ ಅತಿ ದೊಡ್ಡ ಧಾರ್ಮಿಕ ಉತ್ಸವ ಮಹಾ ಕುಂಭಮೇಳಕ್ಕೆ ದಿನದಿಂದ ದಿನಕ್ಕೆ ಭಕ್ತಸಾಗರ ಹರಿದು ಬರುತ್ತಿದೆ. ದೇಶದ ವಿವಿಧ ಕಡೆಯಿಂದ ಭಕ್ತರು ಆಗಮಿಸುತ್ತಿದ್ದು, ಇದೀಗ ಡಿಸಿಎಂ ಕೂಡ ಕುಂಭಮೇಳದಲ್ಲಿ ಭಾಗಿಯಾಗಲಿದ್ದಾರೆ. ಡಿಕೆಶಿ ಕುಟುಂಬ ಸಮೇತರಾಗಿ ಕುಂಭಮೇಳದಲ್ಲಿ ಭಾಗಿಯಾಗಲಿದ್ದಾರೆ. ಈ ಬಗ್ಗೆ ಹಿಂದೆಯೇ ಡಿಕೆಶಿ ತಿಳಿಸಿದ್ದರು. ಉತ್ತರ ಪ್ರದೇಶದ ಮಂತ್ರಿಗಳು ನನಗೆ ಬಹಳಷ್ಟು ಆತ್ಮೀಯರಿದ್ದು, ಆಮಂತ್ರಣ ನೀಡಿದ್ದಾರೆ.

## ಕರ್ನಾಟಕ ರಾಜ್ಯ ಕಾನೂನು ವಿವಿ ಪ್ರಶ್ನೆ ಪತ್ರಿಕೆ ಸೋರಿಕೆ ಆರೋಪ

• ಉದಯವಾಹಿನಿ ಬೆಂಗಳೂರು

ಕರ್ನಾಟಕ ರಾಜ್ಯ ಕಾನೂನು ವಿವಿಯ ಪ್ರಶ್ನೆ ಪತ್ರಿಕೆ ಸೋರಿಕೆ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಬೆಂಗಳೂರಿನ ಸೈಬರ್ ಕ್ರೈಂ ಠಾಣೆಯಲ್ಲಿ ದೂರು ದಾಖಲಾಗಿದೆ.ಹೌದು, ಕರ್ನಾಟಕ ರಾಜ್ಯ ಕಾನೂನು ವಿವಿ ಪ್ರಶ್ನೆ ಪತ್ರಿಕೆ ಸೋರಿಕೆ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಚೇರ್ಮನ್ ಡಾ.ವಿಶ್ವನಾಥ್ ನೀಡಿದ ದೂರಿನ ಮೇರೆಗೆ ಬೆಂಗಳೂರಿನ ಸೈಬರ್ ಕ್ರೈಂ ಠಾಣೆಯಲ್ಲಿ ಎಫ್ ಐ ಆರ್ ದಾಖಲಾಗಿದ್ದು, ಆರೋಪಿಗಳ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.ಜನವರಿ 23 ರಂದು ನಡೆದ ಕರ್ನಾಟಕ ರಾಜ್ಯ ಕಾನೂನು ವಿವಿಯ ಪ್ರಶ್ನೆ ಪತ್ರಿಕೆ ಸೋರಿಕೆ ಆರೋಪ ಕೇಳಿಬಂದಿದ್ದು, ಪರೀಕ್ಷೆಗೂ ಮೊದಲೇ ವಾಟ್ಸಾಪ್ ನಲ್ಲಿ ಪ್ರಶ್ನೆ ಪತ್ರಿಕೆಗಳು ಹರಿದಾಡಿತ್ತು ಎನ್ನಲಾಗಿದೆ. ಈ ಸಂಬಂಧ ಚೇರ್ಮನ್ ಡಾ.ವಿಶ್ವನಾಥ್ ಬೆಂಗಳೂರು ಸೈಬರ್ ಕ್ರೈಂ ಠಾಣೆಗೆ ದೂರು ನೀಡಿದ್ದಾರೆ.

ಅಂತರಾಳದಿಂದ..

EDITORIAL

# ಯುವ ವಿಶ್ವಕಪ್ ಜಯ

## ಮಹಿಳಾ ಕ್ರಿಕೆಟ್‌ಗೆ ಮತ್ತಷ್ಟು ಹುರುಪು



ಭಾರತದ ಮಹಿಳಾ ಕ್ರಿಕೆಟ್ ವಲಯಕ್ಕೆ ಕರ್ನಾಟಕದ ಕೊಡುಗೆ ಗಮನಾರ್ಹ. ದೇಶದ ಮಹಿಳಾ ತಂಡದ ಮೊದಲ ನಾಯಕಿ ಶಾಂತಾ ರಂಗಸ್ವಾಮಿ ಅವರಿಂದ ಆರಂಭವಾಗಿ ಹಲವು ಆಟಗಾರ್ತಿಯರು ಬೆಳಗಿದ್ದಾರೆ. ಇದೀಗ ಈ ದಿಸೆಯಲ್ಲಿ ಬೆಂಗಳೂರಿನ ನಿಕಿ ಪ್ರಸಾದ್ ಹೆಜ್ಜೆ ಇರಿಸಿದ್ದಾರೆ. ಈಗಿನ ಗೆಲುವು ಭಾರತದ ಮಹಿಳಾ ಕ್ರಿಕೆಟ್ ಬೆಂಚ್ ಶಕ್ತಿ ಏನು ಎಂಬುದನ್ನು ತೋರಿಸಿದೆ. ಏಕೆಂದರೆ ಎರಡು ವರ್ಷಗಳ ಹಿಂದಿನ ತಂಡದಲ್ಲಿ ಆಡಿದ್ದ ಶಫಾಲಿ ಮತ್ತು ರಿಚಾ ಘೋಷ್ ಅವರಿಗೆ ಭಾರತ ಸೀನಿಯರ್ ತಂಡದಲ್ಲಿ ಆಡಿದ್ದ ಅನುಭವ ಇತ್ತು. ವಿದೇಶಗಳಲ್ಲಿ ಹಲವಾರು ಪಂದ್ಯಗಳನ್ನು ಆಡಿದ್ದರು. ಆದರೆ, ಈ ಸಲ ಅಂತಹ ಅನುಭವಿಗಳ ಸಾಂಗತ್ಯ ತಂಡಕ್ಕೆ ಇರಲಿಲ್ಲ. ನಿಕಿ ಪ್ರಸಾದ್ ಸಹಿತ ಎಲ್ಲಾ ಆಟಗಾರ್ತಿಯರಿಗೆ ಇದು ಅಪೂರ್ವ ಅನುಭವ. ಹೀಗಾಗಿ, ಇದು ಸಾಧನೆಯೇ ಸರಿ. ಸೀನಿಯರ್ ವಿಭಾಗದ ಯಾವುದೇ ಮಾದರಿಯಲ್ಲಿ ಭಾರತದ ವನಿತೆಯರು ಇದುವರೆಗೂ ವಿಶ್ವಕಪ್ ಗೆದ್ದಿಲ್ಲ. ಇಂತಹ ಸಂದರ್ಭದಲ್ಲಿ ತರುಣಿಯರ ಬಳಗದ ಸಾಧನೆಯು ಕ್ರಿಕೆಟ್ ಅಭಿಮಾನಿಗಳ ಮನಸ್ಸಿಗೆ ತಂಪೆರೆದಿದೆ.

**19 ವರ್ಷದೊಳಗಿನ ಮಹಿಳೆಯರ ಟಿ20 ಕ್ರಿಕೆಟ್ ವಿಶ್ವಕಪ್ ಜಯಿಸಿದ ನಾಯಕಿಯಾಗಿ ಅವರು ಕರ್ನಾಟಕಕ್ಕೆ ಹೆಮ್ಮೆ ಮೂಡಿಸಿದ್ದಾರೆ. ಮಲೇಷ್ಯಾದ ಕ್ವಾಲಾಲಂಪುರದಲ್ಲಿ ನಡೆದ ಎರಡನೇ ವಿಶ್ವಕಪ್ ಟೂರ್ನಿಯಲ್ಲಿ ನಿಕಿ ಪ್ರಸಾದ್ ಬಳಗವು ಅಜೇಯ ಸಾಧನೆಯೊಡನೆ ಟ್ರೋಫಿಗೆ ಮುತ್ತಿಕ್ಕಿತು. 2023ರಲ್ಲಿ ದಕ್ಷಿಣ ಆಫ್ರಿಕಾದಲ್ಲಿ ನಡೆದಿದ್ದ ಚೊಚ್ಚಲ ಟೂರ್ನಿಯಲ್ಲಿ ಶಫಾಲಿ ವರ್ಮಾ ನಾಯಕತ್ವದ ತಂಡವು ಪ್ರಶಸ್ತಿ ಜಯಿಸಿತ್ತು. ಆ ಪ್ರಶಸ್ತಿಯನ್ನು ಉಳಿಸಿಕೊಳ್ಳುವಲ್ಲಿ ಈಗಿನ ತರುಣಿಯರ ಪಡೆ ಯಶಸ್ವಿಯಾಗಿದೆ. ಅಂದು ಶಫಾಲಿ ವರ್ಮಾ ಬಳಗದ ಸಾಧನೆ ಚಾರಿತ್ರಿಕವಾಗಿತ್ತು.**

**ಬಾಲಕಿಯರಿಗೆ ಪ್ರೋಷಕರಿಂದ ಪ್ರೋತ್ಸಾಹ**

ಮಹಿಳಾ ಕ್ರಿಕೆಟಿಗರಿಗೂ ಕೇಂದ್ರ ಗುತ್ತಿಗೆ ಮತ್ತು ಸಮಾನ ವೇತನ ದಂತಹ ಸೌಲಭ್ಯಗಳನ್ನು ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿಯು ಇತ್ತೀಚೆಗಷ್ಟೇ ಜಾರಿಗೆ ತಂದಿದೆ.

ಇತ್ತೀಚಿನ ವರ್ಷಗಳಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿಯೂ ಹೆಣ್ಣುಮಕ್ಕಳ ಕ್ರಿಕೆಟ್ ಕಲಿಕೆಗೆ ಅವಕಾಶಗಳು ಹೆಚ್ಚುತ್ತಿವೆ. ಇದರಿಂದಾಗಿ ಕ್ರಿಕೆಟ್ ಆಡಲು ಬಾಲಕಿ ಯರಿಗೆ ಪೋಷಕರಿಂದ ಪ್ರೋತ್ಸಾಹ ದೊರೆ ಯುತ್ತಿದೆ. ಜೊತೆಗೆ ಮಹಿಳಾ ಪ್ರೀಮಿಯರ್ ಲೀಗ್ (ಡಬ್ಲ್ಯುಪಿಎಲ್) ಕೂಡ ಜನಪ್ರಿಯಗೊಂಡಿರುವುದು ಹೆಣ್ಣುಮಕ್ಕಳನ್ನು ಕ್ರಿಕೆಟ್‌ನತ್ತ ಸೆಳೆಯುತ್ತಿದೆ.

ಟೂರ್ನಿಯಲ್ಲಿ ಅತಿ ಹೆಚ್ಚು ರನ್ ಗಳಿಸಿದ ಗೊಂಗಡಿ ತ್ರಿಷಾ (309 ರನ್) ಪಾರಮ್ಯ ಮೆರೆದರು. ಹೈದರಾಬಾದಿನ 19 ವರ್ಷ ವಯಸ್ಸಿನ ತ್ರಿಷಾ ಏಳು ಪಂದ್ಯಗಳಲ್ಲಿ 77.25ರ ಸರಾಸರಿಯಲ್ಲಿ ರನ್ ಗಳಿಸಿದರು. ಅಲ್ಲದೆ ಯುವ ವಿಶ್ವಕಪ್ ಟೂರ್ನಿಯಲ್ಲಿ ಶತಕ ಹೊಡೆದ ಭಾರತದ ಮೊದಲ ಆಟಗಾರ್ತಿ ಎಂಬ ಹಿರಿಮೆಗೆ ಪಾತ್ರರಾದರು. ಲೆಗ್ ಸ್ಪಿನ್ನರ್ ಕೂಡ ಆಗಿರುವ ತ್ರಿಷಾ ಏಳು ವಿಕೆಟ್ ಪಡೆದರು. ಆರಂಭ ಆಟಗಾರ್ತಿಯಾಗಿ ತಮಿಳುನಾಡಿನ ಜಿ. ಕಮಲಿನಿ ಅವರು ತಂಡಕ್ಕೆ ಉಪಯುಕ್ತ ಕೊಡುಗೆ ನೀಡಿದರು. ಬಾಲ್ಯದಲ್ಲಿ ಸ್ಕೇಟಿಂಗ್ ಪಟುವಾಗಿದ್ದ ಅವರು. ಭವಿಷ್ಯ ಅರಸಿ ಕ್ರಿಕೆಟ್‌ನತ್ತ ಒಲವು ತೋರಿದ್ದು ಈಗ ಫಲ ನೀಡುತ್ತಿದೆ. ಎಡಗೈ ಸ್ಪಿನ್ ಆಲ್‌ರೌಂಡರ್ ವೈಷ್ಣವಿ ಶರ್ಮಾ 17 ವಿಕೆಟ್ ಗಳಿಸಿದರು. ಮಲೇಷ್ಯಾ ವಿರುದ್ಧ ಹ್ಯಾಟ್ರಿಕ್ ಕೂಡ ಸಾಧಿಸಿದರು. ಕೇರಳದ ಬೌಲರ್ ವಿ.ಜೆ. ಜೋಶಿತಾ, ವಿಶಾಖಪಟ್ಟಣದ ಶಬ್ಬಮ್ ಶಕೀಲ್, ದೆಹಲಿಯ ಪರುಣಿಕಾ ಸಿಸೋಡಿಯಾ ಹಾಗೂ ಮುಂಬೈನ ಆಯುಷಿ ಶುಕ್ಲಾ ಅವರು ಈಗ ಭರವಸೆ ಮೂಡಿಸಿರುವ ಪ್ರಮುಖ ಆಟಗಾರ್ತಿಯರು. ಮೇಲಿನ ಕ್ರಮಾಂಕದ ಮೂವರು ಬ್ಯಾಟರ್‌ಗಳೇ ಹೆಚ್ಚು ಸಮರ್ಥವಾಗಿ ಆಡಿದ್ದರಿಂದ ಮಧ್ಯಮ ಕ್ರಮಾಂಕದ ಬ್ಯಾಟರ್ ಳಿಗೆ ಹೆಚ್ಚಿನ ಸವಾಲು ಎದುರಾಗಲಿಲ್ಲ. ನಿಕಿ ಪ್ರಸಾದ್ ಅವರ ನಾಯಕತ್ವದ ಕೌಶಲಕ್ಕೆ ಪೂರ್ಣ ಅಂಕ ಕೊಡಬಹುದು. ಮುಖ್ಯ ಕೋಚ್ ನೂಷಿನ್ ಅಲ್ ಖಾದಿರ್ ಮತ್ತು ನೆರವು ಸಿಬ್ಬಂದಿಯ ಶ್ರಮವೂ ಈ ಗೆಲುವಿನ ಹಿಂದಿದೆ. ನೂಷಿನ್ ಅವರಿಗೆ ಇದು ಎರಡನೇ ವಿಶ್ವಕಪ್ ಗೆಲುವು. ಈ ಗೆಲುವಿನಿಂದಾಗಿ ಸೀನಿಯರ್ ತಂಡ ಮತ್ತು ಡಬ್ಲ್ಯುಪಿಎಲ್ ತಂಡಗಳ ಕದ ತಟ್ಟುವ ಪ್ರತಿಭಾನ್ವಿತ ಆಟಗಾರರ ಸಂಖ್ಯೆ ಹೆಚ್ಚಲಿದೆ. ಇದರಿಂದಾಗಿ ಸೀನಿಯರ್ ಆಟಗಾರ್ತಿಯರು ಪೈಪೋಟಿ ಎದುರಿಸಬೇಕಾಗಬಹುದು. ಈ ಆರೋಗ್ಯಕರ ಸ್ಪರ್ಧೆಯು ದೇಶದ ಮಹಿಳಾ ಕ್ರಿಕೆಟ್ ಬೆಳವಣಿಗೆಗೆ ಮತ್ತಷ್ಟು ಬಲ ತುಂಬಬಹುದು.




• ಹಿಂದಿನ ಸಂಚಿಕೆಯಿಂದ 78 ನೆಯ ಅಧ್ಯಾಯ

ಈ ಮಹಾನುಭಾವನು ಬಹುಕಾಲ ನಮಗೆ ರಾಯನಾಗಿರಲಿ. ದಶರಥರಾಯನ ಅನುಗ್ರಹದಿಂದ ಪಟ್ಟಾಭಿಷಿಕ್ತನಾದ ಶ್ರೀರಾಮನನ್ನು ನಾವೆಲ್ಲರೂ ನೋಡುವೆವು. ಮಹಾತ್ಮನಾಗಿ ಪಾಪರಹಿತನಾದ ದಶರಥ ರಾಯನು ಬಹುಕಾಲ ಬದುಕಲಿ ಎಂಬುದಾಗಿ ಮಾತಾಡಿಕೊಳ್ಳುತ್ತಿದ್ದರು. ಆ ವೇಳೆಯಲ್ಲಿ ಶ್ರೀರಾಮನ ಪಟ್ಟಾಭಿಷೇಕಮಹೋತ್ಸವವನ್ನು ನೋಡು ವುದಕ್ಕೋಸ್ಕರ ಆ ಪುರದಲ್ಲಿ ದಿಕ್ಕುದಿಕ್ಕುಗಳಿಂದಲೂ ಜನರು ಬಂದು ತುಂಬಿಕೊಂಡರು. ಆಗ ಅಯೋಧ್ಯಾಪುರಿಗೆ ವೇಗವುಳ್ಳ ಕೇ ಬರುತ್ತಿದ್ದ ಜನಗಳಿಂದ ಸಂಭೂತವಾದ ಮಹಾಧ್ವನಿಯು ಪರ್ವಕಾಲಗಳಲ್ಲಿ ಕಡುವೇಗವುಳ್ಳ ಕಡಲಿನ ಧ್ವನಿಯೋ ಎಂಬಂತೆ ಕೇಳುತ್ತಿತ್ತು. ಇಂದ್ರನ ಮಂದಿರಕ್ಕೆ ಸಮಾನವಾದ ಆ ಪಟ್ಟಣವು ನೋಡಲಿಚ್ಛೆಯುಳ್ಳವರಾಗಿ ದೇಶದೇಶಗಳಿಂದ ಬಂದ ಜನಗಳಿಂದ ತುಂಬಿ, ಜಲಜಂತುಗಳಿಂದ ಶಬ್ದಾಯಮಾನವಾದ ಸಮುದ್ರೋದಕದಂತೆ ಪ್ರಕಾಶಿಸುತ್ತಿತ್ತು,

**ಮಂಥರೆಯು ಶ್ರೀ ರಾಮನಪಟ್ಟಾಭಿಷೇಕ, ಕ್ಕೆ ವಿಘ್ನ ಮಾಡಲು ಸಕ್ರಮಿ ಸಿದ್ದು**

ಭರತನ ತಾಯಿಯಾದ ಕೈಕೇಯಾದೇವಿಗೆ ಮಂಥರೆ ಎಂಬ ದಾಸಿಯು ಇದ್ದಳು. ಅವಳು ಕೇಕಯರಾಯನ ಮನೆಯಲ್ಲಿದ್ದು ಕೈಕೇಯಾದೇವಿಗೆ ಮದುವೆಯಾದಾಗ ಆಕೆಯ ಸಂಗಡ ಬಂದವಳು. ಅವಳು ಶ್ರೀರಾಮನ ಪಟ್ಟಾಭಿಷೇಕಸಮಯದಲ್ಲಿ ಚಂದ್ರಕಾಂತಿಯ ಶಿಬಿಯ ಹಾಗೆ ಮನೋಹರವಾದ ಉಪ್ಪರಿಗೆಯನ್ನೇರಿ ಅಲಂಕರಿಸಲ್ಪಟ್ಟಿದ್ದ ಅಯೋಧ್ಯಾ ಪಟ್ಟಣವನ್ನು ನೋಡುತ್ತಿದ್ದಳು. ಅದು ಕೇರಿಕೇರಿಗಳಲ್ಲಿ ಎಲ್ಲಿ ನೋಡಿದರೂ ತಾವರೆ ಮೊದಲಾದ ಹೂಗಳ ಮಾಲಿಕೆಗಳಿಂದ ಅಲಂಕರಿಸಲ್ಪಟ್ಟಿತ್ತು. ಆ ಪಟ್ಟಣವು ಸರ್ವಾಭರಣಭೂಷಿತರಾದ ಜನರಿಂದ ಇಟ್ಟಣಿಸಿತ್ತು. ಶ್ರೀರಾಮನು ಪಟ್ಟಾಭಿಷಿಕ್ತನಾಗಿ ಮೆರವಣಿಗೆಯಾಗಿ ಬರುವಾಗ ಹರಸಿ ಶೇಪೆಯನ್ನಿಕ್ಕಬೇಕೆಂದು ಕೈಗಳಲ್ಲಿ ಮೋದಕಗಳನ್ನೂ ಪುಷ್ಪಮಾಲಿಕೆಗಳನ್ನೂ ತೆಗೆದುಕೊಂಡು ಸುಮಂಗಳೆಯರು ನಿಂತಿದ್ದರು. ಉದ್ಯಾನವನವು ಇಂಪಾಗಿ ಧ್ವನಿಗೈಯುತ್ತಿದ್ದ ನವಿಲು ಪಾರಾವತ ಹಂಸ ಕೋಗಿಲೆ ಮೊದಲಾದ ಪಕ್ಷಿಗಳ ಕಲಕಲಧ್ವನಿಗಳಿಂದ ಮನೋಹರವಾಗಿತ್ತು. ದೇವಾಲಯಗಳು ಹಾಲುಗಾರೆಯುಳ್ಳ ಬಿಳಿಯ ಗೋಪುರಗಳಿಂದಲೂ ತಾಳ ಮದ್ದಳೆಗಳ ಮತ್ತು ಗಾಯಕ ನರ್ತಕ ಸ್ತ್ರೀಯರ ಮಾಂಗಲ್ಯ ಧ್ವನಿಗಳಿಂದಲೂ ಪ್ರಕಾಶಿಸುತ್ತಿದ್ದವು. ಸರ್ವಾಭರಣಭೂಷಿತರಾಗಿ ಸಂತೋಷ ಯುಕ್ತರಾದ ಜನರಿಂದಲೂ ಮಂಗಲಸೂಕ್ತಗಳನ್ನು ಹೇಳುವ ಬ್ರಾಹ್ಮಣರಿಂದಲೂ ಹರ್ಷದಿಂದ ಮೈಯುಬ್ಬಿದ ಆನೆಕುದುರೆಗಳಿಂದಲೂ ಗುಟರುಹಾಕುತ್ತಿದ್ದ ಕೊಬ್ಬಿದ ಗೂಳಿಗಳಿಂದಲೂ ಮನೋಹರವಾಗಿದ್ದ ಅಯೋಧ್ಯಾಪಟ್ಟಣವನ್ನು ಕಂಡು ಮಂಥರೆಯು ಆಶ್ಚರ್ಯಪಟ್ಟು ತನ್ನ ಸಮೀಪದಲ್ಲಿ ಬಿಳಿಯ ಪಟ್ಟೆಯ ಸೀರೆಯನ್ನುಟ್ಟು ಅತಿಹರ್ಷಿತೆಯಾಗಿದ್ದ ಒಬ್ಬ ದಾಸಿಯನ್ನು ನೋಡಿ ಎಲೇ ದಾಸಿ, ಕೌಸಲ್ಯಾದೇವಿಯು ಅತಿಹರ್ಷದಿಂದ ತನ್ನ ಸಹೆಯರಿಗೂ ಊಳಿಗದವರಿಗೂ ಅನೇಕ ವಸ್ತ್ರಾಭರಣಗಳನ್ನು ಕೊಡುತ್ತಿದ್ದಾಳೆ.ಈ ಪಟ್ಟಣದೊಳಗೆ ಯಾರನ್ನು ನೋಡಿದರೂ ಹರ್ಷದಿಂದಲೇ ಇದ್ದಾರೆ. ದಶರಥರಾಯನು ಏನು ಮಾಡುತ್ತಿದ್ದಾನೆ ಈ ವೃತ್ತಾಂತವನ್ನು ನನಗೆ ತಿಳುಹಿಸಬೇಕು ಎಂದು ಕೇಳಿದಳು.

ಮುಂದುವರಿಯುವುದು...

# ಬದುಕಲು ಬೇಕೇನು ಕಾರಣ?



ವಿಶ್ವಾಸ್.ಡಿ.ಗೌಡ

• ಉದಯವಾಹಿನಿ, ವಿಶೇಷ



ಮನಸ್ಸಿನಲ್ಲಿ ಸಾವಿರ ನೋವು ಇಟ್ಟುಕೊಂಡು ನಗೋದನ್ನು ಯಾರಾದ್ರೂ ಅವನಿಂದ ಕಲಿಯಬೇಕು! ಭಾರತೀಯರಿಗೆ ಮೊಹಮ್ಮದ್ ಶಮ್ಮಿ ಅವರ ನಿಜವಾದ ಮೌಲ್ಯವು ಗೊತ್ತಾದದ್ದು ಈ ಬಾರಿಯ ವಿಶ್ವಕಪ್ ಕೂಟದಲ್ಲಿಯೇ ಅದರಲ್ಲಿಯೂ ನಿನ್ನೆ ಮುಂಬೈ ವಾಂಖೆಡೆ ಕ್ರೀಡಾಂಗಣದಲ್ಲಿ ಭಾರತದ ಬೇರೆಲ್ಲಾ ಬೌಲರಗಳು ವಿಕೆಟ್ ಪಡೆಯಲು ಪರದಾಡುತ್ತಿದ್ದಾಗ ಮತ್ತು ದುಬಾರಿಯಾದಾಗ ಬರೋಬ್ಬರಿ ಏಳು ವಿಕೆಟ್ ಪಡೆದು ಆತನು ಭಾರತವನ್ನು ಫೈನಲ್ ಪಂದ್ಯಕ್ಕೆ ಕರೆದುಕೊಂಡು ಹೋದದ್ದನ್ನು ಭಾರತವು ಯಾವತ್ತಿಗೂ ಮರೆಯುವುದಿಲ್ಲ. ಈ ವಿಶ್ವಕಪ್ ಕೂಟದ ಪ್ರತೀ ಪಂದ್ಯದಲ್ಲಿ ಎಂಬಂತೆ ಅವರು ವಿದೇಶದ ಪ್ರತಿಯೊಬ್ಬ ಬ್ಯಾಟರುಗಳನ್ನು ಕಾಡಿದ್ದಾರೆ. ಅವರ ಸ್ವಿಂಗ್, ಔಟ್ ಸ್ವಿಂಗ್, ರಿವರ್ಸ್ ಸ್ವಿಂಗ್ ಮತ್ತು ಯಾರ್ಕರ್ ಎಸೆತಗಳಿಗೆ ವಿಶ್ವದ ಭಾರೀ ಬಲಿಷ್ಠ ಆಟಗಾರರು ಶರಣಾಗತ ಆದದ್ದು ನಿಜಕ್ಕೂ ಅದ್ಭುತ! ಮೊಹಮದ್ ಶಮಿ ವಿಶ್ವಕಪ್ ಕೂಟದಲ್ಲಿ 50 ವಿಕೆಟ್ ಪಡೆದ ಮೊದಲ ಭಾರತೀಯ ಎಂಬ ಕೀರ್ತಿ ಪಡೆದಿದ್ದಾರೆ. ಭಾರತಕ್ಕೆ ಕಪಿಲ್ ದೇವ್ ನಂತರ ದೊರೆತ ಅತ್ಯುತ್ತಮ ವೇಗದ ಬೌಲರ್ ಅವರು ಎಂಬುದನ್ನು ನಾವು ಒಪ್ಪದೇ ಇರಲು ಸಾಧ್ಯವೇ ಇಲ್ಲ

ಮೊಹಮ್ಮದ್ ಶಮ್ಮಿ ಬಾಲ್ಯದಿಂದಲೂ ಕಠಿಣ ಪರಿಶ್ರಮದ ಹಾಗೂ ದುಡಿಮೆಯ ಮೇಲೆ ನಂಬಿಕೆಯನ್ನು ಇಟ್ಟ ಹುಡುಗ. ಕೋಚ್ ಹೇಳಿದ ಎಲ್ಲಾ ಕೌಶಲಗಳನ್ನು ಅತೀವ ಶ್ರದ್ಧೆಯಿಂದ ಕಲಿಯುತ್ತಾ ಹೋದ ಶಮ್ಮಿಯ ಕನಸು ಅಂಡರ್ 19 ವಿಶ್ವ ಕೂಟದಲ್ಲಿ ಭಾರತಕ್ಕೋಸ್ಕರ ಆಡುವುದಾಗಿತ್ತು. ಆಗಲೇ ಆತನ ಬೌಲಿಂಗ್ ವೇಗ 140km/h ದಾಟಿತ್ತು ಮತ್ತು ಹೆಚ್ಚಿನ ವಿಕೆಟ್ ಬೌಲ್ಡ್ ಮಾಡಿ ಪಡೆಯುತ್ತಿದ್ದರು. ಆತನಿಗೆ ಯಾವ ಪ್ರಾಯೋಜಕರೂ ಇರಲಿಲ್ಲ. ಒಂದು ಹೊತ್ತಿನ ಊಟಕ್ಕೂ ಆತ ಪರದಾಡುವ ಸ್ಥಿತಿ ಇತ್ತು. ಆದರೆ ಭಾರತದ ಕ್ರಿಕೆಟ್ ರಾಜಕೀಯವು ಶಮ್ಮಿಯ ಅಂಡರ್ 19 ಕನಸನ್ನು ನುಚ್ಚುನೂರು ಮಾಡಿತ್ತು! ಆಗ ಆತನ ಕೋಚ್ ಆತನ ಪ್ರತಿಭೆ ಸಾಯಬಾರದು ಎಂಬ ಕಾರಣಕ್ಕೆ ಯಾರದೋ ಅಡ್ರೆಸ್ ಹುಡುಕಿ ಆತನನ್ನು ಕೊಲ್ಕತ್ತಾಗೆ ಕರೆದುಕೊಂಡು ಬಂದರು. ಅವಕಾಶಗಳಿಗಾಗಿ ಶಮ್ಮಿ ಯಾರ್ಯಾರ ಮನೆಬಾಗಿಲು ಬಡಿಯಬೇಕಾಯಿತು.

**ಮೂರು ಬಾರಿ ಆತ್ಮಹತ್ಯೆಗೆ ಪ್ರಯತ್ನ!**

ಹಸಿವನ್ನಾದರೂ ತಡೆಯಬಹುದು. ಆದರೆ ಅಪಮಾನ ಗಳ ಅಗ್ನಿದಿವ್ಯ ತಡೆಯುವುದು ಕಷ್ಟ' ಎಂದು ಶಮ್ಮಿ ಒಂದು ಸಂದರ್ಶನದಲ್ಲಿ ಹೇಳಿದ್ದಾರೆ. ಹೆಚ್ಚು ಶಾಲೆ ಓದಿಲ್ಲ ಎಂಬ ಕಾರಣಕ್ಕೆ ಕೂಡ ಆತನು ಹಲವು ಬಾರಿ ಬಿಸಿಸಿಐ ಮತ್ತು ಆಯ್ಕೆ ಮಂಡಳಿಯ ಅವಕೃಪೆಗೆ ಪಾತ್ರ ಆಗಬೇಕಾಯಿತು ಅಂದರೆ ನೀವು ನಂಬಲೇಬೇಕು.

**ಶಮ್ಮಿ ಬದುಕಿನ ಕರಾಳ ಅಧ್ಯಾಯ ಆರಂಭ ಆದದ್ದು ಮದುವೆಯಿಂದ:** ಶಮ್ಮಿ 2014ರಲ್ಲಿ ಹಸೀನ್ ಜಹಾನ್ ಎಂಬ ಹುಡುಗಿಯನ್ನು ಪ್ರೀತಿಸಿ ಮದುವೆಯಾದರು. ಒಂದು ಮಗು ಕೂಡ ಜನಿಸಿತು. ಆದರೆ ಅದೇ ಹಸೀನ್ ಜಹಾನ್ ಆತನ ಬದುಕಿನ ವಿಲನ್ ಆದದ್ದು ದುರಂತ. ಸ್ವತಃ ಹೆಂಡತಿ ಆತನ ಮೇಲೆ ಲೈಂಗಿಕ ಹಿಂಸೆ ಮತ್ತು ವ್ಯಭಿಚಾರದ ಕೇಸ್ ದಾಖಲಿಸಿದಳು! ತನ್ನ ಗಂಡನ ಮಾನಸಿಕ ಆರೋಗ್ಯವು ಸರಿ ಇಲ್ಲ ಎಂಬ ಆರೋಪ. ಎಲ್ಲದಕ್ಕೂ ನನ್ನ ಹತ್ತಿರ ಸಾಕ್ಷಿ ಇದೆ ಎನ್ನುವ ಧಿಮಾಕು! ಶಮ್ಮಿ ಬದುಕಿನ ಅತ್ಯಂತ ಕರಾಳ ದಿನಗಳವು. ಒಮ್ಮೆ ವಿದೇಶದ ಪ್ರವಾಸದಲ್ಲಿ ಇದ್ದಾಗ 2018ರಲ್ಲಿ ಆತನ FIR ಆಗಿ ಅರೆಸ್ಟ್ ವಾರಂಟ್ ಹೊರಟಿತ್ತು. ಆದರೆ ತಾಂತ್ರಿಕ ಕಾರಣಗಳಿಂದ ಶಮ್ಮಿ ಅರೆಸ್ಟ್ ಆಗುವುದು ತಪ್ಪಿತು.

**ಮೂರು ಬಾರಿ ಆತ್ಮಹತ್ಯೆಗೆ ಪ್ರಯತ್ನ:** ಈ ಸಂದರ್ಭದಲ್ಲಿ ತಾನು ಮೂರು ಬಾರಿ ಆತ್ಮಹತ್ಯೆಗೆ ಪ್ರಯತ್ನ ಮಾಡಿದ್ದೇನೆ ಎಂದು ಶಮ್ಮಿ ಒಪ್ಪಿಕೊಂಡಿದ್ದಾರೆ. ಕ್ರಿಕೆಟ್ ಮೇಲೆ ಫೋಕಸ್ ಔಟ್ ಆಗಿತ್ತು. ತಾನು ನಿರಪರಾಧಿ ಎಂದು ಎಷ್ಟೇ ಬಾರಿ ಕೂಗಿ ಹೇಳಿದರೂ ಆತನನ್ನು ಯಾರೂ ನಂಬಲಿಲ್ಲ. ನಿರಂತರ ಕೋರ್ಟ್ ವಿಚಾರಣೆ, ಪೊಲೀಸ್ ಸ್ಟೇಶನ್ ಅಲೆದಾಟ ಶಮ್ಮಿಯನ್ನು ಹೈರಾಣ ಮಾಡಿತ್ತು. ಆಗ ವಿರಾಟ್ ಕೊಹ್ಲಿಯಂತಹ ಸ್ನೇಹಿತರು ಆತನ ಪರವಾಗಿ ನಿಂತು ನೈತಿಕ ಬೆಂಬಲ ನೀಡಿದ್ದನ್ನು ಆತನು ಇಂದಿಗೂ ಮರೆತಿಲ್ಲ. ಆ ಕೇಸಿನಿಂದ ಹೊರಬರಲು ಶಮ್ಮಿಗೆ ತುಂಬಾ ಕಷ್ಟ ಆಯಿತು. ಶಮ್ಮಿ ತುಂಬಾ ಜರ್ಜರಿತ ಆದರು.

**ಮ್ಯಾಚ್ ಫಿಕ್ಸಿಂಗ್ ಎಂಬ ಬೆಂಬಿಡದ ಭೂತ:** ಹೋದೆಯಾ ಪಿಶಾಚಿ ಎಂದರೆ ಬಂದೆ ಗವಾಕ್ಷಿಯಲ್ಲಿ' ಎಂಬ ಗಾದೆ ಮಾತಿನಂತೆ ಶಮ್ಮಿ ಬದುಕಿನಲ್ಲಿ ಎರಡನೇ ಬಿರುಗಾಳಿ ಬೀಸಿತ್ತು. ಅದು 'ಮ್ಯಾಚ್ ಫಿಕ್ಸಿಂಗ್' ಆರೋಪ! ದುಡ್ಡು ತೆಗೆದುಕೊಂಡು ವಿದೇಶಗಳ ತಂಡಕ್ಕೆ ಫೇವರ್ ಮಾಡಿದ್ದಾರೆ ಎನ್ನುವ ದೂರು ಬಂದಾಗ ಒಮ್ಮೆಗೇ ಶಮ್ಮಿ ಕುಗ್ಗಿಹೋದರು. ಅವರಂತಹ ದೇಶಪ್ರೇಮಿ ಕ್ರಿಕೆಟರನಿಗೆ ಆ ಆರೋಪವು ಸಾವಿಗೆ ಸಮ ಆಗಿತ್ತು. ಬಿಸಿಸಿಐ ಆತನ ಯಾವ ಮಾತನ್ನೂ ಕೇಳದೆ ವಿಚಾರಣಾ ಸಮಿತಿ ರಚನೆ ಮಾಡಿತು. ಪತ್ರಿಕೆಗಳು ಆತನ ವಿರುದ್ಧ ಬರೆದವು. ಹೆಂಡತಿಯ ಕಡೆಯವರು ಆತನ್ನು ಬಹಿರಂಗವಾಗಿ ನಿಂದಿಸಿದರು. ಆಗಲೂ ಆತನ ಪರವಾಗಿ ನಿಂತವರು ವಿರಾಟ್ ಮೊದಲಾದ ಸ್ನೇಹಿತರೇ. ಈ ಆರೋಪವೂ ಮುಂದೆ ಸುಳ್ಳು ಎಂದು ಸಾಬೀತಾಯಿತು. ಆ ಹಂತದಲ್ಲಿ ಶಮ್ಮಿ ಕ್ರಿಕೆಟ್ ಬಿಟ್ಟು ಹೋಗುವ ತೀರ್ಮಾನಕ್ಕೆ ಬಂದಿದ್ದರು. ಆಗಲೂ ನೆರವಿಗೆ ನಿಂತವರು ಚಿನ್ನದಂತಹ ಗೆಳೆಯರೇ!

**ನಿಂದನೆಗೆ ನಿಂತ ಟ್ರೋಲ್ ಪೇಜಗಳು:** 2021 ಅಕ್ಟೋಬರ್ ಹೊತ್ತಿಗೆ ಶಮ್ಮಿ ಭಾರತೀಯ ಕ್ರಿಕೆಟ್ ತಂಡದಲ್ಲಿ ಒಬ್ಬರೇ ಮುಸ್ಲಿಂ ಆಟಗಾರ ಆಗಿದ್ದರು. ಆಗ ಪಾಕಿಸ್ತಾನದ ವಿರುದ್ಧ ಭಾರತವು ಟಿ 20 ಪಂದ್ಯದಲ್ಲಿ ಸೋತಿತ್ತು. ದುರ್ದೈವ ಏನೆಂದರೆ ಶಮ್ಮಿ 43 ರನ್ ಕೊಟ್ಟು ದುಬಾರಿ ಆಗಿದ್ದರು. ಯಾವುದೇ ಒಬ್ಬ ಆಟಗಾರ ಎಲ್ಲಾ ಪಂದ್ಯಗಳನ್ನೂ ಗೆಲ್ಲಿಸಲು ಸಾಧ್ಯವಿಲ್ಲ ಎನ್ನುವ ಸತ್ಯ ನಮಗೆ ಅರ್ಥ ಆಗಬೇಕು ಅಲ್ವಾ? ಕೆಲವು ವಿಕೃತ ಮನಸ್ಸಿನ ಮಂದಿ ಶಮ್ಮಿ ವಿರುದ್ಧ ಟ್ರೋಲ್ ಪುಟಗಳನ್ನು ತೆರೆದರು ಮತ್ತು ಟ್ರೋಲ್ ಆರಂಭ ಮಾಡಿದರು. ಸಾಮಾಜಿಕ ಜಾಲತಾಣದಲ್ಲಿ ನಿರಂತರ ನಿಂದನೆ ನಡೆಯಿತು. ಭಾರತ ಪಾಕ್ ಪಂದ್ಯಗಳಿಗೆ ಹೈಪ್ ಕ್ರಿಯೇಟ್ ಮಾಡುವ ಕೆಲವು ಮಾಧ್ಯಮಗಳು 'ಯಾವ ಹುತ್ತದಲ್ಲಿ ಯಾವ ಹಾವೋ ಯಾರಿಗ್ಗೊತ್ತು' ಮೊದಲಾದ ಶೀರ್ಷಿಕೆಯನ್ನು ನೀಡಿ ಆತನ ತೇಜೋವಧೆಗೆ ಇಳಿದವು. ಆಗಲೂ ಶಮ್ಮಿ ಪರವಾಗಿ ನಿಂತವರು ವಿರಾಟ್ ಅಂತಹ ಗೆಳೆಯರೇ! ಈ ಅಗ್ನಿದಿವ್ಯವನ್ನು ಗೆಲ್ಲುವುದು ಶಮ್ಮಿಗೆ ತುಂಬಾ ಕಷ್ಟ ಆಯಿತು. ಅದೇ ಶಮ್ಮಿ ಇಂದು ಭಾರತಕ್ಕೆ ಚಿನ್ನದಂತಹ ಬೌಲರ್ ಆಗಿದ್ದಾರೆ. ಶಮ್ಮಿ ಜಾಗದಲ್ಲಿ ಬೇರೆ ಯಾರಿದ್ದರೂ ಕ್ರಿಕೆಟಿಗೆ ವಿದಾಯ ಹೇಳಿ ಓಡಿಹೋಗುತ್ತಿದ್ದರು. ಆದರೆ ಮೊಹಮ್ಮದ್ ಶಮ್ಮಿ ಈ ಸಾಲು ಸಾಲು ಅಗ್ನಿಪರೀಕ್ಷೆಗಳ ನಡುವೆ ಕ್ರಿಕೆಟ್ ಬಿಟ್ಟು ಹೋಗಿಲ್ಲ ಅನ್ನುವುದು ಭಾರತದ ಭಾಗ್ಯ. ಇಂತಹ ದೈತ್ಯ ಪ್ರತಿಭೆ ಇದ್ದರೂ ಆತನಿಗೆ ಕ್ರಿಕೆಟ್ ಆಯ್ಕೆ ಮಂಡಳಿಯು ತೋರಿದ ಅವಕೃಪೆ, ಮಾಡಿದ ಅನ್ಯಾಯ ಯಾವುದನ್ನೂ ಮನಸ್ಸಿನಲ್ಲಿ ಇಟ್ಟುಕೊಳ್ಳದೆ ನಗುನಗುತ್ತ ಭಾರತವನ್ನು ಪ್ರತೀ ಪಂದ್ಯದಲ್ಲಿಯೂ ಗೆಲ್ಲಿಸುವುದು ಇದೆಯಲ್ಲ, ಯಾವ ಬಂಜರು ಕ್ರಿಕೆಟ್ ಪಿಚ್ಚಿನಲ್ಲಿಯೂ ಸ್ವಿಂಗ್ ಪಡೆದು ಭಾರತದ ನೆರವಿಗೆ ನಿಲ್ಲುವುದಿದೆಯಲ್ಲಾ ಆ ಕಾರಣಕ್ಕಾದರೂ ನೀವು ಶಮ್ಮಿಗೆ ಹ್ಯಾಟ್ಸಾಫ್ ಹೇಳಬೇಕು! ಅದರಲ್ಲಿಯೂ ಬೇರೆ ಬೇರೆ ಕ್ರಿಕೆಟರುಗಳ ಹೆಂಡತಿಯರು ಮ್ಯಾಚ್ ನೋಡಲು ಬಂದು ತಮ್ಮ ಗಂಡಂದಿರ ನೆರವಿಗೆ ನಿಲ್ಲುತ್ತಿರುವಾಗ, ಒಂದಿಷ್ಟೂ ಬೇಜಾರು ಮಾಡದೆ ಪ್ರತೀ ವಿಕೆಟ್ ಪಡೆದು ಆಕಾಶ ನೋಡುವ ಶಮ್ಮಿಯ ನೋವು ನಮಗೆ ಅರ್ಥ ಆದರೆ ಸಾಕು

**ಅಂತಹ ಶಮ್ಮಿ ಸಾಗಿ ಬಂದ ದಾರಿ**

**ಮೊಹಮ್ಮದ್ ಶಮ್ಮಿ ಬದುಕಿನ ಹಿನ್ನೆಲೆಯನ್ನು ಒಮ್ಮೆ ಗಮನಿಸಿದಾಗ ನೀವು ಖಂಡಿತಾ ಆತನನ್ನು ಹೆಚ್ಚು ಪ್ರೀತಿ ಮಾಡುತ್ತೀರಿ. 1990 ಸೆಪ್ಟೆಂಬರ್ 3ರಂದು ಉತ್ತರ ಪ್ರದೇಶದ ಆಮ್ರೋಹ ಪ್ರದೇಶದ ಒಂದು ಹಳ್ಳಿಯಲ್ಲಿ ಒಬ್ಬ ರೈತನ ಮಗನಾಗಿ ಜನಿಸಿದ ಆತನು ಬಡತನ, ಹಸಿವು, ಅಪಮಾನ ಎಲ್ಲವನ್ನೂ ದಾಟಿಕೊಂಡು ಬರಬೇಕಾಯಿತು. 15 ವರ್ಷ ಪ್ರಾಯದಲ್ಲಿ ಬದ್ರುದ್ದೀನ್ ಸಿದ್ದೀಕ್ ಎಂಬ ಕೋಚ್ ಆತನ ಪ್ರತಿಭೆಯನ್ನು ಗುರುತಿಸಿ ತರಬೇತು ಕೊಡಲು ಆರಂಭ ಮಾಡಿದ್ದರು.**

# ಕಲಾವಿದೆತ್ರಯರ ಸಾಮರಸ್ಯದ ಸುಮನೋಹರ ನೃತ್ಯನೈವೇದ್ಯ

ವೈ.ಕೆ. ಸಂಧ್ಯಾಶರ್ಮ

• ಉದಯವಾಹಿನಿ, ವಿಶೇಷ



ಉದಯೋನ್ಮುಖ ಬಾಲಪ್ರತಿಭೆಗಳಾದ ಕು. ತನ್ವಿ ರಾವ್, ಪೂರ್ವಿ ಸರ್ವೇಶ್ ಮತ್ತು ಸಿಂಧೂರ ರಾವ್ ಇತ್ತೀಚೆಗೆ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ವಿದ್ಯುಕ್ತ 'ಗೆಜ್ಜೆನಮನ' ನೃತ್ಯಪ್ರದರ್ಶನದಲ್ಲಿ ನಗುಮುಖದಿಂದ- ಅಂಗಶುದ್ಧವಾದ ಸುಂದರ ನರ್ತನವನ್ನು ಪ್ರಸ್ತುತಪಡಿಸಿ ನೆರೆದ ಕಲಾಭಿಮಾನಿಗಳ ತುಂಬು ಮೆಚ್ಚುಗೆಯನ್ನು ಪಡೆದರು. ನಗರದ 'ಶಿವಾನುಗ್ರಹ ಲಲಿತಕಲಾ ಟ್ರಸ್ಟ್'ನ ನಾಟ್ಯಗುರು ವಿದುಷಿ ಲತಾ ರಮೇಶ್ ಅವರ ಶಿಷ್ಯರಾದ ಕನ್ಯಾತ್ರಯರು ಬದ್ಧತೆಯಿಂದ ಕಲಿತು ಗುರುಗಳ ಮಾರ್ಗದರ್ಶನದಲ್ಲಿ ಅಭ್ಯಸಿಸಿದ ಕೃತಿಗಳನ್ನು ಬಹು ಒಪ್ಪವಾಗಿ ಅರ್ಪಿಸಿದರು.

ಹೆಚ್ಚೂ ಕಡಿಮೆ ಮೂವರು ನರ್ತಕಿಯರು ಎಂದೇ ಎರಕದಲ್ಲಿ ಹುಯ್ದ ಹದವಾದ ಮೈಕಟ್ಟಿನ ಪುತ್ಥಳಿಗಳಂತಿದ್ದರು. ಶುಭಾರಂಭಕ್ಕೆ 'ಪುಷ್ಪಾಂಜಲಿ'ಯನ್ನು ತಮ್ಮ ತಾಳಬದ್ಧ ಲಯಾತ್ಮಕ ಹೆಜ್ಜೆಗಳಿಂದ, ಸಾಮರಸ್ಯವಾಗಿ ಆಂಗಿಕಾಭಿನಯವನ್ನು ಸಾದರಪಡಿಸಿದರು. 'ಗಣೇಶ ಕೌತ್ವಂ' -ಕೃತಿಯಲ್ಲಿ ವಿಘ್ನನಿವಾರಕ ವಿನಾಯಕನ ವಿವಿಧ ರೂಪಗಳನ್ನು ಕಟ್ಟಿಕೊಡುವಲ್ಲಿ ಮೂಷಿಕದ ಜಿಗಿದಾಟ- ಚಲನೆಗಳು, ಗಣಪನ ಭಂಗಿಗಳು ಇತ್ಯಾದಿ ನಾಟಕೀಯ ಆಯಾಮಗಳಿಂದ ವಿಶೇಷತೆಯನ್ನು ಮೆರೆದವು. 'ಅಲರಿಪು'ವಿನಲ್ಲಿ ಮೂಡಿಬಂದ ನೃತ್ತಗಳು ಅಚ್ಚುಕಟ್ಟಾಗಿದ್ದು, ಗುರು ಲತಾರ ಸುಶ್ರಾವ್ಯ -ಲಯಬದ್ಧ ನಟುವಾಂಗ ಸಶಕ್ತವಾಗಿತ್ತು. ಪ್ರಸ್ತುತಿಯ ಪ್ರಮುಖ ಘಟ್ಟ- ನಾಯಕಿಯ ವಿರಹಭಾವನೆಯನ್ನು ಕಟ್ಟಿಕೊಡುವ,



ಉದಯವಾಹಿನಿ ಚಿತ್ರ

**ಕೊರಗಜ್ಜನ ಸ್ತುತಿ ವಿಶೇಷ ನೃತ್ಯಾಕರ್ಷಣೆ**

ತೀವ್ರಭಾವಾಲಾಪದ ಭಾವಪೂರ್ಣ 'ವರ್ಣ'ದ ಕೃತಿಯನ್ನು ಮೂವರು ಕಲಾವಿದೆಯರು ತಮ್ಮ ಸುಂದರಾಭಿನಯದಿಂದ ಸಾಕ್ಷಾತ್ಕರಿಸಿದರು. ನಾಯಕಿಯ ಮನದ ಅಳಲು- ನೋವು ವಿಧ ವಿಧವಾದ ಆಂಗಿಕಾಭಿನಯದ ಅಭಿವ್ಯಕ್ತಿ, ಗತ ಶೃಂಗಾರ ಸಂಚಾರಿ ಸನ್ನಿವೇಶಗಳ ಚಿತ್ರಣದಲ್ಲಿ ಗಾಢವಾಗಿ ಬಿಂಬಿತವಾದವು. ಪರಸ್ತ್ರೀ ಮೋಹಿತನಾದ ಅವನು ಅವಳ ಚಾಡಿ ಮಾತುಗಳಿಗೆ ಕಿವಿಯಾಗಿ ತನ್ನ ಪವಿತ್ರ ಪ್ರೇಮವನ್ನು ಅರಿಯದಾದನೇ ಎಂದು ನಾಯಕಿ ವಿರಹದ ನೋವಿನ ಉರಿಯಲ್ಲಿ ಬೆಂದು ಬಸವಳಿಯುವ ಹೃದಯಂಗಮ ಚಿತ್ರಣವನ್ನು ಕಲಾವಿದೆಯರು ಕಟ್ಟಿಕೊಟ್ಟದ್ದು ಪರಿಣಾಮಕಾರಿಯಾಗಿತ್ತು. ನಡುನಡುವೆ ನಾಯಕಿಯ ನೋವಿಗೆ ದನಿ ಮಿಡಿಯುವಂತೆ, ಅವಳ ಒಳಗಿನ ಬೇಗುದಿಯ ತೀವ್ರ ಅಭಿವ್ಯಕ್ತಿಯಂತೆ ಪ್ರಸ್ತುತಪಡಿ ಸುವ ನೃತ್ತಗಳ ಝೇಂಕಾರಕ್ಕೆ ಗುರು ಲತಾರ ಸ್ಫುಟವಾದ ನಟುವಾಂಗದ ನಿರ್ಝರಿ ಕಲಾವಿದೆಯರ ಅಸ್ಖಲಿತ ನರ್ತನದ ಕಸುವಿಗೆ ಇಂಬು ನೀಡಿತ್ತು. ಪ್ರದರ್ಶನದ ಉತ್ತರಾರ್ಧದಲ್ಲಿ 'ಭೋ ಶಂಭೋ ಶಿವ ಶಂಭೋ ಸ್ವಯಂಭೋ' – ಕೃತಿಯನ್ನು ಪೂರ್ವೀ ಮನೋಜ್ಞವಾಗಿ ನಿರೂಪಿಸಿದಳು. ಅವಳ ಪ್ರತಿಯೊಂದು ಆಂಗಿಕಾಭಿನಯ, ಮಂಡಿ ಅಡವು, ಆಕಾಶಚಾರಿ, ಯೋಗಭಂಗಿಗಳು ಆಕರ್ಷಕವಾಗಿದ್ದು, ಬೇಡರ ಕಣ್ಣಪ್ಪನ ಶಿವಾರಾಧನೆಯ ಸಂಚಾರಿ ಕಥಾನಕ ಪರಿಣಾಮಕಾರಿಯಾಗಿತ್ತು. ನಂತರ- ಸಿಂಧೂರರಾವ್ ಸಾಕ್ಷಾತ್ಕರಿಸಿದ 'ಹನುಮಂತ ದೇವ ನಮೋ' – ಶ್ರೀ ಪುರಂದರದಾಸರ ಕೃತಿ ಶಕ್ತಿಶಾಲಿಯಾಗಿ ಮೂಡಿಬಂತು. ಅಶೋಕವನದಲ್ಲಿ ಸೀತಾಮಾತೆಯನ್ನು ಕಂಡು ಶ್ರೀರಾಮನ ಮುದ್ರೆಯುಂಗರವನ್ನು ನೀಡುವ ದೃಶ್ಯದಲ್ಲಿ, ಸ್ವಲ್ಪ ಕಪಿಚೇಷ್ಟೆಯ ನಗೆಹನಿಯೊಂದಿಗೆ ಸಾಗಿ ರಾವಣನ ಮುಂದೆ ಬಾಲಸುತ್ತಿ ಸಿಂಹಾಸನ ಮಾಡಿಕೊಂಡು ಸ್ವಾಭಿಮಾನ ಮೆರೆದ ವೀರ ಹನುಮಾನನ ವಿಶಿಷ್ಟ ವ್ಯಕ್ತಿತ್ವವನ್ನು ಕಲಾವಿದೆ ಬಹು ಸೊಗಸಾಗಿ, ಲವಲವಿಕೆಯಿಂದ ಅಭಿವ್ಯಕ್ತಿಸಿದಳು. ಮುಂದೆ ಮೂರುಕಲಾವಿದೆಯರು ವಿವಿಧ ಪಾತ್ರಗಳ ಒಳಹೊಕ್ಕು ಅಭಿನಯಿಸಿದ 'ಆಡಿದನೋ ರಂಗ' ಶ್ರೀಕೃಷ್ಣನ ಲೀಲಾವಿನೋದ- ಸಾಹಸವನ್ನು ಕಣ್ಮನ ಸೆಳೆಯುವಂತೆ ಅಭಿನಯಿಸಿದರು. ತುಳುನಾಡಿನ ಹೆಮ್ಮೆಯ ದೈವ 'ಕೊರಗಜ್ಜನ ಕಥೆ'ಯನ್ನು ತನ್ವೀ ರಾವ್ ಬಹು ವಿಶಿಷ್ಟ ಬಗೆಯಲ್ಲಿ, ಆತನ ವಿಶೇಷತೆ- ಮಹಿಮೆಗಳನ್ನು ಸ್ತುತಿಸುವ ನೃತ್ಯರೂಪಕದಂತಿದ್ದ ಸ್ತುತಿಗೀತೆ ಕುತೂಹಲ ಕೆರಳಿಸುತ್ತ ಸಾಗಿತು. ಸಾಮಾಜಿಕವಾಗಿ, ಕನಿಷ್ಠ ರೀತಿಯಲ್ಲಿ ಕಾಣಲಾಗುತ್ತಿದ್ದ ಐತಿಹಾಸಿಕ ವ್ಯಕ್ತಿ, ಶಕ್ತಿಯಾಗಿ ಬೆಳೆದ ಕೊರಗ ತನಿಯನ ಕಥಾನಕವನ್ನು ಅನೇಕ ಪರಿಕರಗಳ ಸಹಾಯದಿಂದ ನಿರೂಪಿಸಿದಳು. ಕೊನೆಯಲ್ಲಿ ಆಕರ್ಷಕ ಕೊನ್ನಕೊಲ್ಗಳ ಲಯದಲ್ಲಿ, ಮಿಂಚಿನ ಸಂಚಾರದ ನೃತ್ತನೈವೇದ್ಯದ 'ತಿಲ್ಲಾನ'ದ ನಂತರ ದಶಾವತಾರವನ್ನು ಚಿತ್ರಿಸಿದ 'ಮಂಗಳ'ದೊಂದಿಗೆ ನೃತ್ಯಪ್ರಸ್ತುತಿ ಸಂಪನ್ನಗೊಂಡಿತು.

# ದೇಶ ಉಳಿಸಿ ಅಭಿಯಾನ ದೇಶಾದ್ಯಂತ ನಡೆಸಲಾಗುವುದು!

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

ದೇಶಾದ್ಯಂತ ಅನೇಕ ರಾಜ್ಯಗಳಲ್ಲಿ ಬಾಂಗ್ಲಾದೇಶದ ನುಸುಳುಕೋರರ ಸಂಖ್ಯೆ ಭಯಾನಕವಾಗಿ ಹೆಚ್ಚಾಗುತ್ತಿದೆ. ಇದರಿಂದ ರಾಜ್ಯದ ಸುರಕ್ಷತೆಗೆ ದೊಡ್ಡ ಅಪಾಯ ನಿರ್ಮಾಣವಾಗಿದ್ದು ಸಾಮಾಜಿಕ ಅಸ್ಥಿರತೆ, ಅಪರಾಧಗಳಲ್ಲಿ ಹೆಚ್ಚಳ, ನಿರುದ್ಯೋಗ ಸಮಸ್ಯೆ, ಸುಳ್ಳು ದಾಖಲೆಗಳನ್ನು ಪಡೆದು ವಾಸಿಸುವವರ ದೊಡ್ಡ ಜಾಲವೇ ರಾಜ್ಯಗಳಲ್ಲಿ ಸಕ್ರಿಯವಾಗಿರುವುದು ಕಂಡುಬರುತ್ತಿದೆ. ಈ ಹಿನ್ನೆಲೆಯಲ್ಲಿ ಸಂಪೂರ್ಣ ದೇಶದಲ್ಲಿ ಪಶ್ಚಿಮ ಬಂಗಾಳ, ಅಸ್ಸಾಂ ನಂತಹ ಸ್ಥಿತಿ ನಿರ್ಮಾಣವಾಗುವ ಮೊದಲು ಕೇಂದ್ರ ಮತ್ತು ರಾಜ್ಯ ಸರಕಾರಗಳು ದೇಶದಲ್ಲಿನ ಬಾಂಗ್ಲಾದೇಶಿ ನೂಸುಳುಕೋರರ ಶೋಧ ಅಭಿಯಾನ ನಡೆಸಿ ಎಲ್ಲಾ ಬಾಂಗ್ಲಾದೇಶಿ ನುಸುಳುಕೋರರನ್ನು ಹುಡುಕಿ ಮತ್ತು ಅವರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು, ಅವರನ್ನು ದೇಶದಿಂದ ಹೊರಗಟ್ಟಬೇಕೆಂದು ಹಿಂದೂ ಜನಜಾಗೃತಿ ಸಮಿತಿಯ ವಕ್ತಾರ ಶ್ರೀ. ಸತೀಶ್ ಕೋಚರೇಕರ ಇವರು ಆಗ್ರಹಿಸಿದ್ದಾರೆ. ಅವರು ಮುಂಬಯಿ ಮರಾಠಿ ಪತ್ರಕರ್ತರ ಸಂಘದಲ್ಲಿ ಫೆಬ್ರುವರಿ 3 ರಂದು ಆಯೋಜಿಸಿರುವ ಪತ್ರಕರ್ತರ ಸಭೆಯಲ್ಲಿ ಮಾತನಾಡುತ್ತಿದ್ದರು. ಈ ಅಭಿಯಾನದ ನಿಮಿತ್ತ ಜನಜಾಗೃತಿಗಾಗಿ ಸಂಪೂರ್ಣ ದೇಶದಲ್ಲಿ ಪ್ರತಿಭಟನೆಗಳು, ಮೋರ್ಚಾಗಳು, ಸಹಿ ಅಭಿಯಾನ, ಪೊಲೀಸರಲ್ಲಿ ದೂರುಗಳು ದಾಖಲಿಸುವುದು ಹೀಗೆ ಆಯೋಜನೆ ಕೂಡ ನಾವು ಮಾಡುವವರಿದ್ದೇವೆ' ಎಂದು ಶ್ರೀ .ಕೋಚರೇಕರ ಇವರು ಹೇಳಿದರು. ಈ ಸಮಯದಲ್ಲಿ ಸನಾತನ ಸಂಸ್ಥೆಯ ವಕ್ತಾರರಾದ ಶ್ರೀ. ಅಭಯ ವರ್ತಕ, ಮುಂಬಯಿ ಉಚ್ಚನ್ಯಾಯಾಲಯದ ನ್ಯಾಯವಾದಿ ರಾಹುಲ ಪಾಟಕರ ಇವರು ಕೂಡ ಉಪಸ್ಥಿತರಿದ್ದರು. ಸನಾತನ ಸಂಸ್ಥೆಯ ವಕ್ತಾರರಾದ ಶ್ರೀ. ಅಭಯ ವರ್ತಕ ಇವರು, 'ದೇಶದಲ್ಲಿ ಅನೇಕ ನಗರ ಪ್ರದೇಶಗಳಲ್ಲಿ ನೂರಾರು ಬಾಂಗ್ಲಾದೇಶಿಗಳು ರೋಹಿಂಗ್ಯಗಳನ್ನು ಬಂಧಿಸಲಾಗಿದೆ. ಮುಂಬಯಿ ಮತ್ತು ನವೀ ಮುಂಬಯಿಯಲ್ಲಿ 8 ರಿಂದ 10 ಲಕ್ಷಕ್ಕಿಂತಲೂ ಹೆಚ್ಚಿನ ಅಕ್ರಮ ನುಸುಳುಕೋರರು ವಾಸಿಸುತ್ತಿರುವುದಾಗಿ ಅಂದಾಜು ಮಾಡಲಾಗಿದೆ. ಇಂತಹ ಪರಿಸ್ಥಿತಿ ದೇಶಾದ್ಯಂತ ಇದೆ. ವಾಸ್ತವದಲ್ಲಿ ಈ ಅಂಕಿಅಂಶ ಹಿಮ ಪರ್ವತದ ಕೇವಲ ಒಂದು ಚಿಕ್ಕ ಭಾಗವಾಗಿದೆ. ಬಾಂಗ್ಲಾದೇಶಿ ನಸುಳುಕೋರರ ಈ ಸಮಸ್ಯೆ ದೇಶದ ಸುರಕ್ಷತೆಯ ದೃಷ್ಟಿಯಿಂದ ಬಹಳ ಗಂಭೀರವಾಗಿದ್ದು ಇದನ್ನು ಬುಡ ಸಮೇತ ತೆಗೆಯುವುದು ಅತ್ಯಾವಶ್ಯಕವಾಗಿದೆ. ದೇಶಾದ್ಯಂತ ಬಾಂಗ್ಲಾದೇಶ ನುಸುಳುಕೋರ ಶೋಧ ಅಭಿಯಾನ' ನಡೆಸಬೇಕು; ಇದರ ಅಂತರ್ಗತ ದೇಶದಾದ್ಯಂತ ಎಲ್ಲಾ ಜಿಲ್ಲೆಗಳು, ನಗರಗಳು, ತಾಲ್ಲೂಕುಗಳಲ್ಲಿ ಶಂಕಿತ ಸ್ಥಳಗಳಲ್ಲಿ 'ಸರ್ಚ್ ಆಪರೇಷನ್/ಕೊಂಬಿಂಗ್ ಆಪರೇಷನ್' ನಡೆಸಿ ಬಾಂಗ್ಲಾದೇಶಿ ನುಸುಳುಕೋರರನ್ನು ಹುಡುಕಬೇಕು; ನಕಲಿ ದಾಖಲೆಗಳು ತಯಾರಿಸಿ ಕೊಡುವವರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು ; ಬಾಡಿಗೆ ಮನೆಗಳು ನೀಡುವ ಮೊದಲು ಮನೆ ಮಾಲೀಕರು ಬಾಡಿಗೆದಾರರ, ಹಾಗೂ ಕೆಲಸಕ್ಕೆ ಇರುವ ಕಾರ್ಮಿಕರ ಯೋಗ್ಯ ವಿಚಾರಣೆ ನಡೆಸಬೇಕು, ಶಂಕಿತರೆಂದು ಕಂಡುಬಂದರೆ ತಕ್ಷಣ ಪೊಲೀಸರಿಗೆ ತಿಳಿಸಬೇಕು; ನುಸುಳುಕೋರರಿಗೆ ಆಶ್ರಯ ನೀಡುವವರು, ಜಾಮೀನು ನೀಡುವವರು ಅಥವಾ ಯಾವುದೇ ರೀತಿಯ ಸಹಾಯ ಮಾಡುವವರ ಮೇಲೆ ದೇಶದ್ರೋಹದ ದೂರು ದಾಖಲೆಸಬೇಕೆಂದು ನಾವು ಆಗ್ರಹಿಸುತ್ತೇವೆ. ನಟ ಸೈಫ್ ಅಲಿಖಾನ್ ಇವರ ನಿವಾಸ ಸ್ಥಳಕ್ಕೆ ನುಗ್ಗಿ ದಾಳಿ ನಡೆಸಿರುವ ಮೊಹಮ್ಮದ್ ಶರೀಫುಲ್ ಇಸ್ಲಾಂ ಶಹಜಾದ್ ಈ ಬಾಂಗ್ಲಾದೇಶಿ ನುಸುಳುಕೋರನನ್ನು ಬಂಧಿಸಲಾಗಿದೆ. ಅವನು ನಕಲಿ ಹೆಸರಿನಲ್ಲಿ ಮುಂಬಯಿಯಲ್ಲಿ ವಾಸಿಸುತ್ತಿದ್ದನು. ದೇಶದಲ್ಲಿನ ಅನೇಕ ಸಮಸ್ಯೆಗಳಿಗೆ ಬಾಂಗ್ಲಾದೇಶಿ ನುಸುಳುಕೋರರು ಕಾರಣರಾಗಿರುವುದು ಗಮನಕ್ಕೆ ಬರುತ್ತದೆ . ಈ ದೃಷ್ಟಿಯಿಂದ ಬಾಂಗ್ಲಾದೇಶಿ ನುಸುಳುಕೋರರನ್ನು ಓಡಿಸಿ, ದೇಶ ಉಳಿಸಿ' ಈ ಅಭಿಯಾನವನ್ನು ನಾವು ಎಲ್ಲಾ ಹಿಂದೂ ಸಂಘಟನೆಗಳು ಸೇರಿ ದೇಶಾದ್ಯಂತ ನಡೆಸುವೆವು. ಇದರಲ್ಲಿ ಜನಸಾಮಾನ್ಯರೂ ಸಹಕಾರ ನೀಡಬೇಕೆಂದು ಕರೆ ನೀಡುತ್ತೇವೆ. ದೇಶವನ್ನು ನುಸುಳುಕೋರರಿಂದ ಮುಕ್ತಗೊಳಿಸುವುದು ನಮ್ಮ ಸಂಕಲ್ಪವಾಗಿ

**ಪ್ರಸ್ತುತ ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತ ಹಿಂದೂಗಳ ಮೇಲೆ ನಿರಂತರ ದೌರ್ಜನ್ಯ ನಡೆಯುತ್ತಿದೆ. ನಾಳೆ ಇದೇ ಬಾಂಗ್ಲಾದೇಶಿ ನುಸುಳುಕೋರರು ಹೆಚ್ಚಾಗಿ ಭಾರತದಲ್ಲಿ ಚಿಕ್ಕ ಬಾಂಗ್ಲಾದೇಶ ನಿರ್ಮಿಸಿ ಅಲ್ಲಿಯ ಹಿಂದೂಗಳ ಮೇಲೆ ಹೀಗೆ ದೌರ್ಜನ್ಯ ನಡೆಸುವರು, ಈ ಪರಿಸ್ಥಿತಿ ಬರಬಾರದೆಂದರೆ, ಈ ಪ್ರಕರಣದಲ್ಲಿ ಸರಕಾರವು ಈಗಲೇ ಕಠಿಣ ಕ್ರಮ ಕೈಗೊಳ್ಳಬೇಕು, ಎಂದು ಹಿಂದೂ ಜನಜಾಗೃತಿ ಸಮಿತಿಯ ವಕ್ತಾರ ಶ್ರೀ. ಕೋಚರೆಕರ ಹೇಳಿದರು.**

**ಮುಂಬಯಿ ಉಚ್ಚನ್ಯಾಯಾಲಯದ ನ್ಯಾಯವಾದಿ ರಾಹುಲ ಪಾಟಕರ ಇವರು ಬಾಂಗ್ಲಾದೇಶಿ ನುಸುಳುಕೋರರು ದೇಶದಲ್ಲಿನ ಉದ್ಯೋಗ ಕಸಿದುಕೊಳ್ಳುತ್ತಿದ್ದಾರೆ. ಮಹಾರಾಷ್ಟ್ರದಲ್ಲಿನ ಸಂಭಾಜಿ ನಗರ ಜಿಲ್ಲೆಯ ಸಿಲ್ಲೋಡದಲ್ಲಿ ಒಂದು ಲಕ್ಷಕ್ಕಿಂತಲೂ ಹೆಚ್ಚಿನ ಬಾಂಗ್ಲಾದೇಶಿ ನುಸುಳುಕೋರರಿಗೆ ನಕಲಿ ಪ್ರಮಾಣ ಪತ್ರ ಹಂಚುತ್ತಿರುವ ಅತ್ಯಂತ ಆಘಾತಕಾರಿ ಘಟನೆ ಬೆಳಕಿಗೆ ಬಂದಿದೆ. ರತ್ನಗಿರಿ ಜಿಲ್ಲೆಯ ಚಿಪಳುನ್ ನಲ್ಲಿ 13 ಬಾಂಗ್ಲಾದೇಶಿ ನಾಗರಿಕರಲ್ಲಿ 3 ಜನರನ್ನು ಬಂಧಿಸಲಾಗಿದೆ; ಇದರಲ್ಲಿಯೂ ಸಹ ಪೊಲೀಸರು ಈ ಪ್ರಕರಣ ಸರಿಯಾಗಿ ಪರಿಶೀಲಿಸದ ಕಾರಣ ಬಾಂಗ್ಲಾದೇಶಿ ನುಸುಳುಕೋರರಿಗೆ ಜಾಮೀನು ಸಿಕ್ಕಿದೆ, ಇದು ಬಹಳ ಗಂಭೀರ ವಿಷಯವಾಗಿದೆ. ದೇಶದ ನ್ಯಾಯ ವ್ಯವಸ್ಥೆ ಬಾಂಗ್ಲಾದೇಶಿ ನುಸುಳುಕೋರರಿಗೆ ಜಾಮೀನು ನೀಡುವುದು ನ್ಯಾಯ ದೇವತೆಯ ಅವಮಾನವಾಗಿದೆ.**

# ಸುಬ್ರಹ್ಮಣ್ಯಸ್ಯ ಮಹಿಮಾಂ ವರ್ಣಿತುಂ ಕೇನ ಶಖ್ಯತೇ



ಉದಯವಾಹಿನಿ ಚಿತ್ರ

• ಉದಯವಾಹಿನಿ ಬೆಂಗಳೂರು

**ಶ್ರೀ ಸುಬ್ರಹ್ಮಣ್ಯ ಷಷ್ಠಿ -ವಟು ಆರಾಧನೆ**

ಬೆಂಗಳೂರಿನ ಜಯನಗರ 5ನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠದಲ್ಲಿ ಪರಮಪೂಜ್ಯ ಶ್ರೀ 108 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಅಜ್ಞಾನುಸಾರವಾಗಿ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಶ್ರೀ ಸುಬ್ರಹ್ಮಣ್ಯ ಷಷ್ಟಿಯ ಅಂಗವಾಗಿ ಶ್ರೀ ಸುಬ್ರಹ್ಮಣ್ಯ ( ಶ್ರೀ ನಾಗ ) ಅಂತರ್ಗತ ಶ್ರೀ ಭಾರತೀ ರಮಣ ಮುಖ್ಯಪ್ರಾಣಾಂತರ್ಗತ ಶ್ರೀ ಸಂಕರ್ಷಣನನ್ನು ಸುವರ್ಣದ ತೊಟ್ಟಿನಲ್ಲಿ ಪ್ರತಿಷ್ಠಾಪಿಸಿ ವಿಶೇಷ ಅರ್ಚನೆಯೊಂದಿಗೆ ಶ್ರೀ ಸುಬ್ರಹ್ಮಣ್ಯ ಆರಾಧನೆ ಮತ್ತು ವಟುಗಳ ಬ್ರಹ್ಮಚಾರಿಗಳ ಆರಾಧನಾ ಮಹೋತ್ಸವವನ್ನು ಆಚಾರ್ಯರಾದ ಜಿ , ಕೆ ಆಚಾರ್ಯರು ನೆರವೇರಿಸಿದರು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು ಈ ಸಂದರ್ಭದಲ್ಲಿ ಆಚಾರ್ಯ ನಾಗರಾಜು ಹಾವೇರಿ ಮತ್ತು ಸೇವಾ ಕರ್ತೃಗಳು ಹಾಗೂ ಭಕ್ತರು ಶ್ರೀ ಮಠದ ಸಿಬ್ಬಂದಿಗಳು ಭಾಗವಹಿಸಿ ಶ್ರೀ ಸುಬ್ರಹ್ಮಣ್ಯ ದೇವರ ಅನುಗ್ರಹಕ್ಕೆ ಪಾತ್ರರಾದರು.

# ಜಿಲ್ಲಾಮಟ್ಟದ ಸಿರಿಧಾನ್ಯ, ಸಾವಯವ ಹಬ್ಬ ಉದ್ಘಾಟನೆ

## ಬೆಳೆಗಳಿಗೆ ಹೆಚ್ಚಿನ ರಾಸಾಯನಿಕಗಳನ್ನು ಬಳಸದಿರಿ: ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಶರಣಬಸಪ್ಪ ದರ್ಶನಾಪುರ

• ಉದಯವಾಹಿನಿ, ಯಾದಗಿರಿ


ಉದಯವಾಹಿನಿ ಚಿತ್ರ

**ಸಿರಿಧಾನ್ಯ ಬೆಳೆಗೆ ವಿಶೇಷ ಒತ್ತು**

ದೇಶದ ನಾಗರಿಕರ, ಮಕ್ಕಳ ಆರೋಗ್ಯ, ಭವಿಷ್ಯದ ಹಿತದೃಷ್ಟಿಯಿಂದ ರೈತರು ತಮ್ಮ ಬೆಳೆಗಳಲ್ಲಿ ಹೆಚ್ಚಿನ ರಾಸಾಯನಿಕಗಳು ಬಳಸದಂತೆ ಎಚ್ಚರಿಕೆವಹಿಸಲು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಣ್ಣ ಕೈಗಾರಿಕೆ, ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ್ ಅವರು ಸಲಹೆ ನೀಡಿದರು. ನಗರದ ಜಿಲ್ಲಾ ಕ್ರೀಡಾಂಗಣದಲ್ಲಿಂದು ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಹಬ್ಬ ಉದ್ಘಾಟಿಸಿ ಅವರು ಮಾತನಾಡಿದರು.

ರೈತರು ಹೆಚ್ಚಿನ ಔಷಧಿ ಮತ್ತು ರಾಸಾಯನಿಕಗಳನ್ನು ತಮ್ಮ ಬೆಳೆಗಳಗಾಗಿ ಉಪಯೋಗಿಸಿ ಹೆಚ್ಚಿನ ಇಳುವರಿ ಪಡೆಯುವ ಮನೋಭಾವ ತೊಲಗಬೇಕು. ದವಸಧಾನ್ಯ, ತರಕಾರಿ ಬೆಳೆ, ಹಣ್ಣುಗಳಿಗೆ ಹೆಚ್ಚಿನ ರಾಸಾಯನಿಕ ಬಳಕೆಯು ವಿಷಯುಕ್ತ ಆಹಾರವಾಗಿ ಪರಿಣಮಿಸುವುದರಿಂದ, ರೈತರು ಸಾವಯವ ರಸಗೊಬ್ಬರ, ಸಿರಿಧಾನ್ಯಗಳಂತಹ ಬೆಳೆಗಳಿಗೆ ಒತ್ತು ನೀಡಬೇಕು ಎಂದು ಅವರು ಹೇಳಿದರು. ರಾಜ್ಯ ಸರ್ಕಾರವು ಕೂಡ ಕೃಷಿ ಇಲಾಖೆ ಮೂಲಕ ರೈತರ ಮನೆ ಬಾಗಿಲಿಗೆ ತಲುಪಿ ಸಾವಯವ, ಸಮಗ್ರ ಮತ್ತು ಸಿರಿಧಾನ್ಯಗಳ ಮೂಲಕ ತಮ್ಮ ಕೃಷಿ ಪದ್ಧತಿ ಬೆಳೆಸಿಕೊಳ್ಳಲು ಅರಿವು ಮೂಡಿಸುತ್ತಿದ್ದು, ಅವುಗಳ ಸದುಪಯೋಗ ಪಡೆದುಕೊಳ್ಳಬೇಕು. ಯೋಜನಾ ಬದ್ಧವಾಗಿ ರಾಸಾಯನಿಕ ಇಲ್ಲದ ಕೃಷಿ ಪದ್ಧತಿ, ಅಳವಡಿಸಲು ವಿಶೇಷ ಗಮನ ನೀಡಬೇಕು. ಸರ್ಕಾರವು ಕೂಡ ಕೃಷಿ, ರಾಶಿ ಯಂತ್ರೋಪಕರಣಗಳು, ತುಂತುರು, ಹನಿ ನೀರಾವರಿ ಸೇರಿದಂತೆ ಹಲವು ರೀತಿಯಲ್ಲಿ ಸಬ್ಸಿಡಿ ಸೌಲಭ್ಯಗಳನ್ನು ನೀಡುತ್ತಿದ್ದು, ಹೈನುಗಾರಿಕೆಗೂ ಉತ್ತೇಜನ ನೀಡುತ್ತಿದೆ. ರೈತರು ಈಗ ಪುನಃ ಹೈನುಗಾರಿಕೆಗಳತ್ತ ವಾಲುತ್ತಿದ್ದಾರೆ.

ಅದರಂತೆ ಕೃಷಿಯಲ್ಲಿ ರೈತರು ಇತಿಮಿತಿಯಲ್ಲಿ ಔಷಧಿ ಬಳಸಬೇಕು. ವಿಜ್ಞಾನ ಕೇಂದ್ರ, ಕೃಷಿ ಮಹಾವಿದ್ಯಾಲಯಗಳ ಮೂಲಕವೂ ರೈತರಿಗೆ ಅರಿವು ಮೂಡಿಸುತ್ತಿದ್ದು, ಇದರ ಸದುಪಯೋಗ ಪಡೆಯುವಂತೆ ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ನಗರ ಶಾಸಕರಾದ ಶ್ರೀ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು, ರೈತರು ತಮ್ಮ ಕೃಷಿ ಪದ್ಧತಿಯಲ್ಲಿ ಸಾವಯವ ರಸಗೊಬ್ಬರ ಬಳಸಬೇಕು. ಆರೋಗ್ಯಕ್ಕೆ ಅತ್ಯಂತ ಉಪಯುಕ್ತವಾಗಿರುವ ಸಿರಿಧಾನ್ಯಗಳ ಬೆಳೆಗೆ ವಿಶೇಷ ಒತ್ತು ನೀಡಬೇಕು. ರಾಜ್ಯ ಸರ್ಕಾರವು ಕೂಡ ಕೃಷಿ ಇಲಾಖೆ ಮೂಲಕ ವಿವಿಧ ಯೋಜನೆಗಳಡಿ ಯಂತ್ರೋಪಕರಣಗಳು, ಸಬ್ಸಿಡಿ ಸೌಲಭ್ಯ ನೀಡುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಂಡು ಆರ್ಥಿಕವಾಗಿ ಸಬಲರಾಗುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಹತ್ತು ಜನ ರೈತರಿಗೆ ಶ್ರೇಷ್ಠ ಕೃಷಿಕ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಸಿರಿ ಧಾನ್ಯ ಮಹತ್ವದ ಕುರಿತ ಭಾಷಣ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ಅದರಂತೆ ಪಾಕ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಸನ್ಮಾನಿಸಲಾಯಿತು. ಜಿಲ್ಲಾ ಉಸ್ತುವಾರಿ ಸಚಿವರು ಇದೇ ಸಂದರ್ಭದಲ್ಲಿ ವಿವಿಧ ಯಂತ್ರೋಪಕರಣಗಳು, ವಿವಿಧ ಮಳಿಗೆಗಳನ್ನು ಉದ್ಘಾಟಿಸಿದರು. ರಾಶಿ ಪೂಜೆ ನೆರವೇರಿಸಿದರು.

ನಗರಸಭೆ ಅಧ್ಯಕ್ಷ ಲಲಿತಾ ಅನಪುರ, ಜಿಲ್ಲಾಧಿಕಾರಿ ಡಾ. ಸುಶೀಲಾ ಬಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯದ ಡೀನ್ ಪ್ರಕಾಶ್ ಕುಚನೂರ್, ಕವಡಿಮಟ್ಟಿ, ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರು, ಹಿರಿಯ ವಿಜ್ಞಾನಿಗಳಾದ ಡಾ. ಜಯಪ್ರಕಾಶ್ ನಾರಾಯಣ್, ಜಾನಪದ ಕವಿ ಸಿದ್ದಪ್ಪ ಬಿಳಗಿ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಬಸನಗೌಡ ಮಾಲಿ ಪಾಟೀಲ್, ಸೋಮನಾಥ ರೆಡ್ಡಿ, ಉಪಸ್ಥಿತರಿದ್ದರು. ಜಂಟಿ ಕೃಷಿ ನಿರ್ದೇಶಕರಾದ ರತೇಂದ್ರನಾಥ್ ಸುಗೂರ, ಪ್ರಾಸ್ತಾವಿಕವಾಗಿ ಮಾತನಾಡಿದರು. ಕೃಷಿ ಸಹಾಯಕ ನಿರ್ದೇಶಕರಾದ ರಾಜಕುಮಾರ್ ಕಾರ್ಯಕ್ರಮ ನಿರ್ವಹಿಸಿದರು. ಬೂದಯ್ಯ ಹಿರೇಮಠ ಪ್ರಾರ್ಥಿಸಿದರು.

> **ದೇಶದಲ್ಲಿ ದಿನನಿತ್ಯ ಜನಸಂಖ್ಯಾ ಬೆಳವಣಿಗೆಯಾಗುತ್ತಿದೆ . ಕೃಷಿ ಭೂಮಿ ಕಡಿಮೆಯಾಗಿ ಕೈಗಾರಿಕೆ ಕ್ಷೇತ್ರ ಬೆಳೆಯುತ್ತಿದೆ. ಕೃಷಿ ಕ್ಷೇತ್ರ ಕಡಿಮೆಯಾಗುತ್ತಿದ್ದರೂ, ದೇಶದ ಜನಸಂಖ್ಯೆಗೆ ಅನುಗುಣವಾಗಿ ಕೃಷಿ ಬೆಳೆ ಬೆಳೆದು ಬೆನ್ನೆಲುಬಾಗಿ ರೈತರು ನಿಂತಿರುವದು ಅಭಿನಂದನಾರ್ಹವಾಗಿದೆ ಎಂದು ಹೇಳಿದರು.**

### ಬೆಳೆಗೆ ಗಮನ ನೀಡಲು ಸಲಹೆ

**ಸಾವಯವ ರಸಗೊಬ್ಬರಗಳ ಮೂಲಕದ ಆಂಧ್ರ ಮಾದರಿಯ ಕೃಷಿ ಪದ್ಧತಿ ಅಳವಡಿಸಿಕೊಳ್ಳಬೇಕು.ಔಷಧಿ ಇಲ್ಲದ ಆಹಾರ ಸೇವಿಸುವ ಪರಿಪಾಠ ತಮ್ಮ ಕುಟುಂಬದಿಂದಲೇ ಆರಂಭಿಸಿ, ಎಲ್ಲಾರ ಆರೋಗ್ಯ ದ ಬಗ್ಗೆ ಕಾಳಜಿವಹಿಸಬೇಕು. ಔಷಧಿ ಇಲ್ಲದ ತರಕಾರಿ ಬೆಳೆಗಾಗಿ ತಮ್ಮ ಒಂದೆರಡು ಎಕರೆ ಜಮೀನು ಮೀಸಲಿಡಬೇಕು. ಸ್ವಂತ ಜಮೀನು ಇದ್ದಲ್ಲಿ ಕೃಷಿ ಬೆಳೆಗೆ ಗಮನ ನೀಡಲು ಸಲಹೆ ನೀಡಿದರು.**

## ಶಾಲಾ ಅಡುಗೆ ಕೋಣೆಯಲ್ಲಿ ಸಿಲಿಂಡರ್ ಬೆಂಕಿ ಅವಘಡ

• ಉದಯವಾಹಿನಿ ವರದಿ


ಉದಯವಾಹಿನಿ ಚಿತ್ರ

**ತಪ್ಪಿದ ಭಾರಿ ಅನಾಹುತ**

**ಕಾರಟಗಿ:** ಪಟ್ಟಣದ 14ನೇ ವಾರ್ಡಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಧ್ಯಾಹ್ನ ಬಿಸಿ ಊಟಕ್ಕೆ ಅಡುಗೆ ತಯಾರಿಸುತ್ತಿದ್ದ ವೇಳೆ ಸಿಲಿಂಡರಿನ ಗ್ಯಾಸ್ ಸೋರಿಕೆಯಾಗಿ ಆಕಸ್ಮಿಕ ಬೆಂಕಿ ಹತ್ತಿದೆ ಗಾಬರಿಗೊಂಡ ಅಡುಗೆ ಮಾಡುತ್ತಿರುವ ಮಹಿಳೆಯರು ಹೊರಗೆ ಓಡಿ ಬಂದಿದ್ದಾರೆ. ತತ್ ಕ್ಷಣ ಶಾಲಾ ಮುಖ್ಯೋಪಾಧ್ಯಾಯರು, ಸಾರ್ವಜನಿಕರು ಗುಂಪು ಕೂಡಿದ್ದಾರೆ ಬೆಂಕಿ ನಂದಿಸಲು ಯತ್ನಿಸಿದ್ದಾರೆ. ಆದರೂ ಕೂಡ ಬೆಂಕಿ ಜ್ವಾಲೆ ಹೆಚ್ಚಾದ ಕಾರಣ ಮುಖ್ಯೋಪಾಧ್ಯಾಯರು ಕೂಡಲೆ ಅಗ್ನಿಶಾಮಕ ದಳಕ್ಕೆ ಕರೆ ಮಾಡಿದರು.

ಅಡಿಗೆ ಕೋಣೆಯಲ್ಲಿ ತುಂಬಿದ ಇನ್ನೊಂದೆರಡು ಗ್ಯಾಸ್ ಸಿಲಿಂಡರ್ ಗಳು ಇದ್ದು ಬೆಂಕಿಯ ಜ್ವಾಲೆ ಅವುಗಳಿಗೆ ಹತ್ತಿಕೊಂಡರೆ ಹೇಗೆ ಎಂದು ಶಾಲಾ ಮುಖ್ಯೋಪಾಧ್ಯಾಯರು ಶಿಕ್ಷಕ ವರ್ಗ ಆಘಾತಗೊಂಡರು, ಸ್ಥಳಕ್ಕೆ ಬಂದ ಅಗ್ನಿಶಾಮಕ ದಳದವರು ಬೆಂಕಿಯನ್ನು ಯಶಸ್ವಿಯಾಗಿ ನಂದಿಸಿ ಯಾವುದೇ ಅನಾಹುತ ಆಗದಂತೆ ತಡೆದಿದ್ದಾರೆ. ಬೆಂಕಿ ಅವಘಡ ಕುರಿತಂತೆ ಅಡುಗೆ ಕೋಣೆಯ ಬೆಂಕಿ ಅವಘಡ ಕುರಿತಂತೆ ಶಾಲಾ ಮುಖ್ಯೋಪಾಧ್ಯಾಯರು ಕ್ಷೇತ್ರ ಶಿಕ್ಷಣಾಧಿಕಾರಿಗಳವರಿಗೆ ದೂರವಾಣಿ ಕರೆಯ ಮೂಲಕ ತಿಳಿಸಿದರು.

ಶಾಲೆಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ನಟೇಶ್ ಮತ್ತು ಪ್ರಾಥಮಿಕ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಶ್ರೀಶೈಲ ಬಿರಾದಾರ್ ಇವರು ಭೇಟಿ ನೀಡಿ ನಡೆದಿರುವ ಘಟನೆ ಕುರಿತು ಮಾಹಿತಿ ಪಡೆದುಕೊಂಡರು.

## ಕುಡಿಯುವ ನೀರು ಕುರಿತು ಮುಂಜಾಗ್ರತೆ ಕ್ರಮಕ್ಕೆ ವಿದ್ಯಾಧರ್ ಜಾಕ ಆಗ್ರಹ

• ಉದಯವಾಹಿನಿ, ವಡಗೇರಾ


ಉದಯವಾಹಿನಿ ಚಿತ್ರ



ಬೇಸಿಗೆ ಆರಂಭ ಮುಂಜಾಗ್ರತವಾಗಿ ತಾಲ್ಲೂಕಿನಾದ್ಯಂತ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆಗೆ ಕ್ರಮ ಸೂಕ್ತ ಕೈಗೊಳ್ಳುವಂತೆ ರಾಜ್ಯ ರೈತ ಸಂಘ ಹಸಿರು ಸೇನೆ ತಾಲ್ಲೂಕು ಅಧ್ಯಕ್ಷ ವಿದ್ಯಾಧರ್ ಜಾಕ ಆಗ್ರಹಿಸಿದ್ದಾರೆ. ಈಗಾಗಲೇ ಬೇಸಿಗೆ ಆರಂಭಿಸಿದ್ದು ತಾಲ್ಲೂಕಿನ ಕೇಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿದೆ ಗ್ರಾಮೀಣ ಪ್ರದೇಶಗಳಲ್ಲಿ ಕೊಳವೆಬಾವಿಗಳು ಕೆಟ್ಟು ನಿಂತಿದ್ದು ಅವುಗಳ ದುರಸ್ತಿಗೆ ಅಧಿಕಾರಿಗಳು ಮುಂದಾಗಿಲ್ಲ.

ಸರಕಾರ ಗ್ರಾಮೀಣ ಪ್ರದೇಶದ ಜನರಿಗಾಗಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಆರಂಭಿಸಿ ಕೋಟಿಗಟ್ಟಲೆ ಹಣ ಖರ್ಚು ಮಾಡಿದೆ ಆದರೆ ಸಾರ್ವಜನಿಕರಿಗೆ ಮಾತ್ರ ಅವುಗಳ ಉಪಯೋಗಕ್ಕೆ ಬರುತ್ತಿಲ್ಲ ಗ್ರಾಮೀಣ ಭಾಗದಲ್ಲಿ ಪ್ರತಿಶತ ಶೇಕಡ 50 ರಷ್ಟು ಕುಡಿಯುವ ನೀರಿನ ಶುದ್ದೀಕರಣ ಘಟಕ ಗಳು ಕೆಟ್ಟ ನಿಂತು ಧೂಳು ತಿಂದು ತುಕ್ಕು ಹಿಡಿದಿವೆ ಇದಕ್ಕೆ ಪ್ರಮುಖ ಕಾರಣ ಕೆಲವು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ನಿರ್ಲಕ್ಷ, ಗ್ರಾಮೀಣ ಭಾಗಕ್ಕೆ ತೆರಳಿ ಅಲ್ಲಿಯ ಸಮಸ್ಯೆಗಳನ್ನು ಆಲಿ ಸದೆ ಇರುವುದು ಅಧಿಕಾರಿಗಳು ನಗರ ಪ್ರದೇಶದಲ್ಲಿ ಕುಳಿತುಕೊಂಡೆ ಕಾರ್ಯನಿರ್ವಹಿಸಿದ್ದಾರೆ. ಕುಡಿಯುವ ನೀರಿನ ಅನುದಾನವನ್ನು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ದುರ್ಬಳಕೆ ಮಾಡಿಕೊಂಡಿದ್ದಾರೆ ಈ ಕುರಿತು ಜಿಲ್ಲಾ ಪಂಚಾಯಿತಿ ಸಿಇಓ ರವರು ತನಿಖೆ ನಡೆಸಬೇಕು. ವಡಗೇರಾ ಪಟ್ಟಣದಲ್ಲಿಯೂ ಸುಮಾರು ವರ್ಷಗಳಿಂದ ಕುಡಿ ಯುವ ನೀರಿನ ಸಮಸ್ಯೆ ಕಾಡುತ್ತಿದ್ದು ಈ ಕುರಿತು ಹಲವಾರು ಬಾರಿ ಅಧಿಕಾರಿಗಳು ಶಾಸಕರ ಗಮನಕ್ಕೆ ತಂದರು ಪ್ರಯೋಜನವಾಗಿಲ್ಲ ಈಗಲಾದರೂ ಯಾದಗಿರಿ ಮತಕ್ಷೇತ್ರದ ಶಾಸಕರಾದ ಚನ್ನಾರೆಡ್ಡಿ ಪಾಟೀಲ್ ತುನ್ನೂರು, ಸಂಬಂಧಿಸಿದ ಮೇಲಾಧಿಕಾರಿಗಳು ಎಚ್ಚೆತ್ತುಕೊಂಡು ಕೆಟ್ಟು ನಿಂತಿರು ವ ಬೋರ್ ವೆಲ್, ನೀರಿನ ಶುದ್ದೀಕರಣ ಘಟಕ ಗಳನ್ನು ದುರಸ್ತಿಗೊಳಿಸಿ ತಾಲ್ಲೂಕಿನ ಗ್ರಾಮೀಣ ಪ್ರದೇಶ, ವಡಗೇರಾ ಪಟ್ಟಣಕ್ಕೆ ಸಮರ್ಪಕ ಕುಡಿ ಯುವ ನೀರಿನ ವ್ಯವಸ್ಥೆ ಕಲ್ಪಿಸಿಕೊಡಬೇಕು.

ಒಂದು ವೇಳೆ ನಿರ್ಲಕ್ಷ್ಯ ವಹಿಸಿದ್ದಲ್ಲಿ ವಡಗೇರಾ ತಾಲ್ಲೂಕು ಪಂಚಾಯಿತಿ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳುವುದಾಗಿ ರಾಜ್ಯ ರೈತ ಸಂಘದ ತಾಲ್ಲೂಕು ಅಧ್ಯಕ್ಷ ವಿದ್ಯಾಧರ್ ಜಾಕ, ಶರಣಯ್ಯ ಸ್ವಾಮಿ, ಗೌರವಾಧ್ಯಕ್ಷ ಶರಣು ಜಡಿ, ಹಳ್ಳೆಪ್ಪ ತೇಜೇರ, ಸತೀಶ್ ಪೂಜಾರಿ, ಶ್ರೀನಿವಾಸ್ ಮುಸ್ತಾಜೀರ, ಬೀರಪ್ಪ ಜಡಿ, ವೆಂಕಟೇಶ್ ಇಟಗಿ, ನಿಂಗಪ್ಪ ಕುರ್ಕಳಿ, ಇನ್ನಿತರರು ಎಚ್ಚರಿಸಿದ್ದಾರೆ.

## ಕಾಡು ಪ್ರಾಣಿ ದಾಳಿಗೆ ಬೆಚ್ಚಿದ ಗ್ರಾಮಸ್ಥರು

• ಉದಯವಾಹಿನಿ, ತಡಸ


ಉದಯವಾಹಿನಿ ಚಿತ್ರ

ಶಿಗ್ಗಾವಿ ತಾಲ್ಲೂಕಿನ ಹೊಸೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಡಿ ಗ್ರಾಮವಾದ ಜೊಂಡಲಗಟ್ಟ ಗ್ರಾಮಸ್ಥರು ಚಿರತೆ ಹಾಗೂ ಇತರೆ ಕಾಡು ಪ್ರಾಣಿಗಳ ದಾಳಿಯಿಂದ ಆತಂಕದಲ್ಲಿದ್ದು ಅಧಿಕಾರಿಗಳಾಗಲಿ, ಜನಪ್ರತಿನಿಧಿಗಳಾಗಲಿ ಯಾವುದೇ ಕ್ರಮ ಕೈಗೊಳ್ಳಲು ಮುಂದಾಗುತ್ತಿಲ್ಲ ಎಂಬುದು ಗ್ರಾಮಸ್ಥರ ಆರೋಪವಾಗಿದೆ. ಗ್ರಾಮವು ಶಿಗ್ಗಾವಿ ಹಾಗೂ ಮುಂಡಗೋಡ ತಾಲ್ಲೂಕಿನ ಗಡಿಭಾಗವಾಗಿದ್ದು ಹೆಚ್ಚಾಗಿ ಗ್ರಾಮಸ್ಥರು ವ್ಯವಹಾರಿಕವಾಗಿ ಮುಂಡಗೋಡನ್ನು ಅವಲಂಬಿಸಿದ್ದಾರೆ. ಮಕ್ಕಳು ಶಾಲೆಗಾಗಿ ಮುಂಡಗೋಡ ತಾಲ್ಲೂಕಿನ ನ್ಯಾಸರಗಿ ಗ್ರಾಮದ ತನಕ ಸುಮಾರು ನಾಲ್ಕರಿಂದ ಐದು ಕಿಲೋಮೀಟರ್ ನಡೆದುಕೊಂಡು ಹೋಗುತ್ತಾರೆ. ಈ ಸಂದರ್ಭದಲ್ಲಿ ಪ್ರಾಣಿಗಳ ಹಾವಳಿಗೆ ಮಕ್ಕಳು ಬೆಚ್ಚಿಬಿದ್ದಿದ್ದಾರೆ. ಕಳೆದೆರಡು ದಿನಗಳಿಂದ ಸತತವಾಗಿ ಸಾಯಂಕಾಲ ಸಮಯದಲ್ಲಿ ಗ್ರಾಮದಲ್ಲೇ ಇರುವ ಸಾಕು ನಾಯಿ ಹಾಗೂ ಆಡುಮರಿಯನ್ನು ಚಿರತೆ ದಾಳಿ ಮಾಡಿದ್ದು ಗ್ರಾಮಸ್ಥರು ಆತಂಕದಲ್ಲಿ ಬದುಕುವಂತಾಗಿದೆ.

ಸಣ್ಣ ಪುಟ್ಟ ಮಕ್ಕಳು ಮನೆಯಲ್ಲಿದ್ದು ಪ್ರಾಣಿಗಳ ಹಾವಳಿಗೆ ಸಂಜೆಯಾಗುತ್ತಲೇ ಮನೆಯ ಬಾಗಿಲು ಹಾಕಿ ಕೂರುವಂತಾಗಿದೆ. ಚಿರತೆ ದಾಳಿಯಿಂದ ಮಕ್ಕಳನ್ನು ಕಳೆದುಕೊಳ್ಳುವ ಆತಂಕದಲ್ಲಿ ಬದುಕುವಂತಾಗಿದೆ' ಎಂದು ಗ್ರಾಮದ ಮಂಜುಳಾ ಹೇಳುತ್ತಾರೆ.

> **ಕಳೆದೆರಡು ದಿನಗಳ ಹಿಂದೆ ಒಂದು ನಾಯಿ ಹಾಗೂ ಆಡುಮರಿ ಮೇಲೆ ಚಿರತೆ ದಾಳಿ ಮಾಡಿದ್ದು ಗ್ರಾಮಸ್ಥರಿಂದ ಮಾಹಿತಿ ಪಡೆಯಲಾಗಿದೆ. ಮತ್ತೇನಾದರೂ ದಾಳಿ ಮಾಡಿದರೆ ಬೋನ್ ಇಟ್ಟು ಚಿರತೆಯನ್ನು ಸೆರೆ ಹಿಡಿಯುತ್ತವೆ**
>
> **-ರವಿಕುಮಾರ್ ಪುರಾಣಿಕಮಠ**
> **ದುಂಡಶಿ ಉಪ ವಲಯ ಅರಣ್ಯಾಧಿಕಾರಿ**


### ಬಸ್ ಈಗ ಬರುತ್ತಿಲ್ಲ

**ಬಸ್ಸಿನ ಸೌಕರ್ಯವಿಲ್ಲದ ಕಾರಣ ಮಕ್ಕಳು ಹಾಗೂ ಗ್ರಾಮಸ್ಥರು ನಡೆದುಕೊಂಡು ಶಾಲೆಗೆ ತರಳಬೇಕಾಗುತ್ತದೆ. ಚುನಾವಣೆ ಸಂದರ್ಭದಲ್ಲಿ ಬಿಟ್ಟಂತ ಬಸ್ ಈಗ ಬರುತ್ತಿಲ್ಲ ಎಂದು ಗ್ರಾಮದ ಅಜಿತ್ ಆರೋಪಿಸಿದರು.**

> **'ಗ್ರಾಮದಲ್ಲಿ 50 ಮನೆಗಳಿದ್ದು. 100 ಜನರ ವಾಸವಿದೆ. ಗ್ರಾಮದ ಸುತ್ತಲೂ ದಟ್ಟವಾದ ಅರಣ್ಯವಿದ್ದು ಕಾಡು ಪ್ರಾಣಿಗಳು ಸಾಕು ಪ್ರಾಣಿಗಳಿಗೆ ಹಾಗೂ ಒಬ್ಬರು ಮನುಷ್ಯರು ಓಡಾಡಲು ಭಯಪಡುವಂತಾಗಿದೆ ಅರಣ್ಯ ಇಲಾಖೆ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡು ಜನರ ಪ್ರಾಣ ಉಳಿಸಿ ಎಂದು ಗ್ರಾಮದ ಅಶೋಕ ಅಳಲು ತೋಡಿಕೊಂಡಿದ್ದಾರೆ.**

## ರಾಜ್ಯದಲ್ಲೊಂದು PHC ನರ್ಸ್ ಮಹಾ ಎಡವಟ್ಟು

• ಉದಯವಾಹಿನಿ, ಹಾವೇರಿ


ಉದಯವಾಹಿನಿ ಚಿತ್ರ

**ಗಾಯಕ್ಕೆ ಸ್ಟಿಚ್ ಹಾಕೋ ಬದಲು ಫೆವಿಕ್ವಿಕ್**

ಗಾಯಗೊಂಡಾಗ, ಗಾಯವಾದಾಗ ಅದು ದೊಡ್ಡದಿದ್ದಾಗ ಸ್ಟಿಚ್ ಹಾಕುವುದು ಸರ್ವೇ ಸಾಮಾನ್ಯ. ಆದರೇ ರಾಜ್ಯದಲ್ಲೊಂದು ಪ್ರಾಥಮಿಕ ಆರೋಗ್ಯ ಕೇಂದ್ರದ ನರ್ಸ್ ಮಹಾ ಎಡವಟ್ಟು ಎನ್ನುವಂತೆ ಗಾಯಕ್ಕೆ ಹೊಲಿಗೆ ಹಾಕೋ ಬದಲು ಫೆವಿಕ್ವಿಕ್ ಹಾಕಿ ಕಳುಹಿಸಿದ್ದಾರೆ. ಇದರಿಂದಾಗಿ ಬಾಲಕ ನರಳಾಡುತ್ತಿರುವಂತ ಘಟನೆ ಹಾವೇರಿಯಲ್ಲಿ ನಡೆದಿದೆ.

ಹಾವೇರಿ ಜಿಲ್ಲೆಯ ಆಡೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಆಟವಾಡುತ್ತಿದ್ದಾಗ ಬಿದ್ದು ಗಾಯಗೊಂಡಿದ್ದಂತ 7 ವರ್ಷದ ಬಾಲಕ ಗುರುಕಿಶನ್ ಅಣ್ಣಪ್ಪ ಹೊಸಮನಿಯನ್ನು ಕರೆದುಕೊಂಡು ಹೋಗಲಾಗಿತ್ತು. ವೈದ್ಯರಿಲ್ಲದ ಕಾರಣ ನರ್ಸ್ ಜ್ಯೋತಿ ಚಿಕಿತ್ಸೆ ನೀಡಿದ್ದಾರೆ. ಗಾಯಗೊಂಡಿದ್ದಂತ ಜಾಗಕ್ಕೆ ಡ್ರೆಸ್ಸಿಂಗ್ ಮಾಡಿ, ಹೊಲಿಗೆ ಹಾಕುವ ಬದಲು ಗಾಯಕ್ಕೆ ಫೆವಿಕ್ವಿಕ್ ಹಚ್ಚಿ ಅದರ ಮೇಲೆ ಬ್ಯಾಂಡೇಜ್ ಟೇಪ್ ಹಚ್ಚಿ ಕಳುಹಿಸಿದಂತ ಆರೋಪ ಕೇಳಿ ಬಂದಿದೆ. ಬಾಲಕನ ಕೆನ್ನೆಯ ಮೇಲಾದಂತ ಗಾಯಕ್ಕೆ ಸ್ಟಿಚ್ ಬದಲು ಫೆವಿಕ್ವಿಕ್ ಹಾಕಿದ್ದರ ಪರಿಣಾಮ ಬ್ಯಾಂಡೇಜ್ ತೆಗೆಯಲು ಬಾಲಕ ಪರದಾಡುತ್ತಿದ್ದಾರೆ. ಅಲ್ಲದೇ ನರ್ಸ್ ಎಡವಟ್ಟಿನ ವಿರುದ್ಧ ಬಾಲಕನ ಪೋಷಕರು, ಆಡೂರು ಗ್ರಾಮಸ್ಥರು ಆಕ್ರೋಶ ವ್ಯಕ್ತ ಪಡಿಸಿದ್ದಾರೆ. ಜನವರಿ 14ರಂದು ನಡೆದಂತ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಇನ್ನೂ ಫೆವಿಕ್ನಿಕ್ ಹಾಕುವ ವಿಡಿಯೋವನ್ನು ಬಾಲಕನ ಪೋಷಕರು ಮೊಬೈಲ್‌ನಲ್ಲಿ ಚಿತ್ರೀಕರಿ ಸಿಕೊಂಡಿದ್ದಾರೆ.

ಈ ಬಗ್ಗೆ ಆಡೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ರಕ್ಷಾ ಸಮಿತಿಗೆ ದೂರು ನೀಡಿದ್ದಾರೆ. ಅಲ್ಲದೇ ಕಾರಣ ಕೇಳಿ ನರ್ಸ್ ಗೆ ಆರೋಗ್ಯ ರಕ್ಷಾ ಸಮಿತಿ ನೋಟಿಸ್ ನೀಡಿದೆ.

### ಡಿಹೆಚ್‌ಓ ಹಿಂದೇಟು ಏಕೆ?

**ಇತ್ತ ಸೂಕ್ತ ಕ್ರಮವಹಿಸಬೇಕಿದ್ದಂತ ಹಾವೇರಿ ಡಿಹೆಚ್‌ಓ ರಾಜೇಶ್ ಸುರಗಿಹಳ್ಳಿ ಅವರು ನರ್ಸ್ ಜ್ಯೋತಿಯವರನ್ನು ಗುತ್ತಲ ತಾಲ್ಲೂಕಿನ ಆರೋಗ್ಯ ಕೇಂದ್ರಕ್ಕೆ ನಿಯೋಜನೆ ಮಾಡಿ ಕೈ ತೊಳೆದುಕೊಂಡಿದ್ದಾರೆ. ಫೆವಿಕ್ವಿಕ್ ಹಾಕಿ ನಿರ್ಲಕ್ಷ್ಯ ತೋರಿದರೂ ನರ್ಸ್ ಜ್ಯೋತಿಯನ್ನು ಅಮಾನತು ಮಾಡಲು ಡಿಹೆಚ್‌ಓ ಹಿಂದೇಟು ಏಕೆ ಅಂತ ಸಾರ್ವಜನಿಕರು ಪ್ರಶ್ನಿಸಿದ್ದಾರೆ.**

## ಸತತ ಪರಿಶ್ರಮದಿಂದ ಸಂಸ್ಥೆಗೆ ಲಾಭ: ಭೀಮೇಶ್ವರ ಜೋಷಿ

• ಉದಯವಾಹಿನಿ, ಕಳಸ


ಉದಯವಾಹಿನಿ ಚಿತ್ರ

ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ಇಲ್ಲಿನ ಕಳಸ ಕೃಷಿ, ಸಹಕಾರ ಪತ್ತಿನ ಸಂಘದ ಅಧ್ಯಕ್ಷ ಜಿ.ಕೆ.ಮಂಜಪ್ಪಯ್ಯ ಅವರನ್ನು ತಾಲ್ಲೂಕಿನ ನಾಗರಿಕರ ಪರವಾಗಿ ಮಂಗಳವಾರ ಸನ್ಮಾನಿಸಲಾಯಿತು. ಸನ್ಮಾನ ನೆರವೇರಿಸಿ ಮಾತನಾಡಿದ ಹೊರನಾಡಿನ ಜಿ.ಭೀಮೇಶ್ವರ ಜೋಷಿ, ಮಂಜಪ್ಪಯ್ಯ 30 ವರ್ಷಗಳಿಂದ ಸಹಕಾರಿ ಕ್ಷೇತ್ರದಲ್ಲಿದ್ದು. ಈ ಕ್ಷೇತ್ರದ ಶಕ್ತಿಯಾಗಿದ್ದಾರೆ. ಜೀವನದ ಹೆಚ್ಚಿನ ಅವಧಿಯನ್ನು ಸಂಸ್ಥೆಗಾಗಿ ವಿನಿಯೋಗಿಸುತ್ತಿರುವ ಅವರು, ಪ್ರಾಮಾಣಿಕವಾಗಿ ಸಂಸ್ಥೆ ಕಟ್ಟಿದ್ದಾರೆ' ಎಂದರು. ಮಂಜಪ್ಪಯ್ಯ ಅವರ ಆದರ್ಶ ಜೀವನ, ಸಹಕಾರಿ ಕ್ಷೇತ್ರದಲ್ಲಿನ ಯಶಸ್ಸು, ಜನಸಾಮಾನ್ಯರ ಬಗೆಗಿನ ಕಾಳಜಿ ಅನನ್ಯ, ಅವರ ಸರಳತೆ, ಸತತ ಪರಿಶ್ರಮ ಸಂಸ್ಥೆಗೆ ನಿರಂತರ ಲಾಭ ತಂದು ಕೊಡುತ್ತಿದೆ ಎಂದರು.

ವಿಧಾನ ಪರಿಷತ್ ಉಪಸಭಾಪತಿ ಎಂ.ಕೆ.ಪ್ರಾಣೇಶ್ ಮಾತನಾಡಿ, ಕೃಷಿ, ಪತ್ತಿನ ಸಹಕಾರ ಸಂಘಗಳು ಹೇಗೆ ಕಾರ್ಯನಿರ್ವಹಿಸಬೇಕು ಎಂಬುದಕ್ಕೆ ಕಳಸ ಸಂಘ ಮಾದರಿ ಆಗಿದೆ. ಮೂರು ದಶಕಗಳಿಂದ ಮಂಜಪ್ಪಯ್ಯ ಈ ಸಂಘವನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ದಿದ್ದು, ಯುವಜನರಿಗೆ ಮಾದರಿಯಾಗಿದ್ದಾರೆ. ಸಹಕಾರ ಕ್ಷೇತ್ರದ ಜೊತೆಗೆ ಸಾರ್ವಜನಿಕ ಕ್ಷೇತ್ರಕ್ಕೂ ಅವರು ಕೊಟ್ಟಿರುವ ಕೊಡುಗೆ ಅಪಾರ ಎಂದರು. ಮಾಜಿ ಸಚಿವ ಬಿ.ಬಿ. ನಿಂಗಯ್ಯ ಮಾತನಾಡಿ, ಕಳಸ ಸಹಕಾರ ಸಂಘವು ಬೆಳೆ ಸಾಲ ಕೊಡುವುದಷ್ಟಕ್ಕೆ ಸೀಮಿತವಾಗದೆ, ಅನೇಕ ಚಟುವಟಿಕೆಗಳೊಂದಿಗೆ 450 ಕೋಟಿ ವ್ಯವಹಾರ ನಡೆಸುತ್ತಿದೆ ಎಂದರು. ವಿವಿಧ ಸಂಘಟನೆಗಳು ಮತ್ತು ಸಹಕಾರ ಸಂಘಗಳ ಸನ್ಮಾನ ಸ್ವೀಕರಿಸಿ ಮಾತನಾಡಿದ ಮಂಜಪ್ಪಯ್ಯ, ನಾನು ಕೃಷಿ ಕುಟುಂಬದಿಂದ ಬಂದಿದ್ದರಿಂದ ನನಗೆ ಕೃಷಿಕರ ಎಲ್ಲಾ ಸಂಕಷ್ಟದ ಅರಿವು ಇದೆ. ಹೀಗಾಗಿ, ಸಹಕಾರ ಸಂಘದಲ್ಲಿ ಕೃಷಿಕರಿಗೆ ಬೇಕಾದ ಎಲ್ಲಾ ಸವಲತ್ತು ಮತ್ತು ಮಾರುಕಟ್ಟೆ ಸೌಲಭ್ಯ ಕಲ್ಪಿಸಲು ಅನುಕೂಲವಾಯಿತು ಎಂದರು.

**ಕೃಷಿಕರ ಉತ್ಪನ್ನಕ್ಕೆ ಉತ್ತಮ ದರ:** ರಾಜ್ಯ ಸುಕೊ ಬ್ಯಾಂಕ್ ಅಧ್ಯಕ್ಷ ಮನೋಹರ ಮಸ್ಕಿ ಮಾತನಾಡಿ ಕೃಷಿಕರ ಉತ್ಪನ್ನಕ್ಕೆ ಉತ್ತಮ ದರ ಸಿಗಬೇಕು ಎಂಬ ಕೇಂದ್ರದ ಕನಸನ್ನು ಕಳಸ ಸಹಕಾರ ಸಂಘವು ತಾಲ್ಲೂಕು ಮಟ್ಟದಲ್ಲಿ ನನಸು ಮಾಡುತ್ತಿದೆ. ಅಡಿಕೆ ಕಾಫಿ ಸಂಸ್ಕರಣಾ ಘಟಕಗಳ ಮೂಲಕ ಕೃಷಿಕರ ಬೆಳೆಗಳ ಮೌಲ್ಯವರ್ಧನೆಗೆ ಒತ್ತು ಕೊಡುತ್ತಿದೆ.

### ಶಾಲಾ ಕೊಠಡಿಗಳ ನಿರ್ಮಾಣ ಹೇಗೆ ಮುಂದುವರಿಸಬೇಕೋ ನಮಗೆ ಚೆನ್ನಾಗಿ ಗೊತ್ತು; ಡಿಡಿಪಿಐ ಶ್ರೀಶೈಲ ಬಿರಾದರ್ ಗರಂ

# ಮಾಲೀಕರು, ಅಧಿಕಾರಿಗಳ ನಡುವೆ ಕಾನೂನು ಸಮರ ಶುರು

• ಉದಯವಾಹಿನಿ ವರದಿ


ಉದಯವಾಹಿನಿ ಚಿತ್ರ



**ಕಾರಟಗಿ:** ತಾಲ್ಲೂಕಿನ ಬೇವಿನ ಹಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ 2018/19ನೆ ಸಾಲಿನ ಕೆಕೆಆರ್ ಡಿಬಿ ಯೋಜನೆಯಲ್ಲಿ ಸುಮಾರು 18 ಲಕ್ಷ ವೆಚ್ಚದಲ್ಲಿ ಶಾಲಾ ಹೆಚ್ಚುವರಿ ಎರಡು ಕೊಠಡಿಗಳ ನಿರ್ಮಾಣಕ್ಕೆ ಅನುದಾನ ಬಿಡು ಗಡೆಗೊಂಡಿತ್ತು. ಅನುದಾನ ಬಿಡುಗಡೆ ಕೆಲವೇ ದಿನಗಳಲ್ಲಿ ಶಾಲಾ ಕೊಠಡಿಗಳು ನಿರ್ಮಾಣ ಕಾರ್ಯ ಬರದಿಂದ ಸಾಗಿತ್ತು, ಶಾಲಾ ಕಟ್ಟಡ ಭಾಗಶಃ ಶೇಕಡ 50 % ರಷ್ಟು ನಿರ್ಮಾಣಗೊಂಡು ಕಟ್ಟಡ ಪೂರ್ಣಗೊಳ್ಳಲು ತಯಾರಿ ನಡೆದಿತ್ತು, ಆದರೆ ಗ್ರಾಮದ ವೀರನಗೌಡ ತಂದೆ ಶರಣೆಗೌಡ ಮತ್ತು ಮುದುಕನಗೌಡ ತಂದೆ ಶರಣೇಗೌಡ ಇವರು ಮಾಡಿರುವ ತಕರಾರಿನಿಂದ ಶಾಲಾ ಕಟ್ಟಡ ನಿರ್ಮಾಣ ಸಂಪೂರ್ಣ ಸ್ಥಗಿತಗೊಂಡು ಸುಮಾರು 06 ವರ್ಷಗಳೇ ಗತಿಸಿವೆ.

ಗ್ರಾಮದ ಸರ್ಕಾರಿ ಹಿರಿಯ ಪ್ರಾಥ ಮಿಕ ಶಾಲೆ ಸರ್ವೆ ನಂಬರ್ 1/1, 1/2 ರಲ್ಲಿ ಇದ್ದು ಶಾಲಾ ಜಾಗ ನಮ್ಮದು ಇಲ್ಲಿ ಶಾಲಾ ಕಟ್ಟಡ ನಿರ್ಮಾಣ ಮಾಡಬಾರದು ಎಂದು 2019ರಲ್ಲಿ ಇವರುಗಳು ತಕರಾರು ಅರ್ಜಿ ಸಲ್ಲಿಸಿರುತ್ತಾರೆ. ಸುಮಾರು 06 ವರ್ಷಗಳಿಂದ ಶಾಲೆಯ ಹೆಚ್ಚುವರಿ ಕೊಠಡಿಗಳ ನಿರ್ಮಾಣ ಕಾರ್ಯ ಸ್ಥಗಿತಗೊಂಡಿದ್ದು ಶಾಲೆಯ ಜಾಗದ ಭೂಮಾಲೀಕರ ಮತ್ತು ಅಧಿಕಾರಿಗಳ ನಡುವೆ ಕಟ್ಟಡ ನಿರ್ಮಾಣಕ್ಕಾಗಿ ಹಗ್ಗ ಜಗ್ಗಾಟ ನಡೆದಿತ್ತು ಸದರಿ ಶಾಲೆಯ ಕಟ್ಟಡ ನಿರ್ಮಾಣ ಕಾರ್ಯ ಮುಂದುವರಿಸಲು ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಶ್ರೀಶೈಲ ಬಿರಾದರ್ ಇವರು ಬೇವಿನಾಳ ಶಾಲೆಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಇಂಜಿನಿಯರ್ ಹಾಗೂ ಅಧಿಕಾರಿಗಳ ತಂಡದೊಂದಿಗೆ ಭೇಟಿ ನೀಡಿದ್ದಾರೆ.

ಶಾಲೆಯ ಜಾಗದ ಮಾಲಕರೊಂದಿಗೆ ಸಭೆಯನ್ನು ನಡೆಸಿ ಚರ್ಚಿಸಲಾಯಿತು. ಶಾಲೆಯ ಕಟ್ಟಡ ನಿರ್ಮಾಣ ಕಾರ್ಯ ಆಗಬೇಕು ಆ ನಿಟ್ಟಿನಲ್ಲಿ ಜಾಗದ ಮಾಲೀಕರು ಸಹಕಾರ ನೀಡಬೇಕು ಮಕ್ಕಳ ಶಿಕ್ಷಣಕ್ಕೆ ಪ್ರಾಧಾನ್ಯತೆ ನೀಡಿ ಕಟ್ಟಡ ನಿರ್ಮಾಣಕ್ಕೆ ಮಾಡಿರುವ ತಕರಾರು ಹಿಂಪಡೆಯುವಂತೆ ಮನ ಒಲಿಸಲು ಪ್ರಯತ್ನಿಸಿದರು.

ಆ ಸಂದರ್ಭದಲ್ಲಿ ಶಾಲೆಯ ಜಾಗದ ಪಹಣಿದಾರರು ಶಾಲೆಯ ಆವರಣದಲ್ಲಿ ಕಟ್ಟಡ ನಿರ್ಮಾಣ ಮುಂದುವರಿಸಬೇಕಾದರೆ ನಮಗೆ ಪರಿಹಾರ ನೀಡಬೇಕು, ಒಂದು ಗುಂಟೆಗೆ ಸುಮಾರು 5 ಲಕ್ಷ ರೂಪಾಯಿಗಳಂತೆ ಜಾಗದ ಒಟ್ಟು ಗುಂಟೆಗಳನು ಗುಣವಾಗಿ ಪರಿಹಾರ ನೀಡಬೇಕು ಅಲ್ಲಿಯವರೆಗೆ ನಾವು ಶಾಲೆಯ ಸ್ಥಗಿತಗೊಂಡಿರುವ ಕಟ್ಟಡವನ್ನು ಮುಂದುವರಿಸಲು ಬಿಡುವುದಿಲ್ಲ ಎಂದರು.


ಆ ಸಂದರ್ಭದಲ್ಲಿ ಉಪ ನಿರ್ದೇಶಕರು ಮಾತನಾಡಿ ನಿಮ್ಮ ಬೇಡಿಕೆಯನ್ನು ನಾವು ಸರ್ಕಾರಕ್ಕೆ ತಲುಪಿಸುತ್ತೇವೆ ಎಂದು ಜಾಗದ ಮಾಲೀಕರ ಬೇಡಿಕೆಯನ್ನು ಬರವಣಿಗೆ ರೂಪದಲ್ಲಿ ಬರೆದ ಅರ್ಜಿಗೆ ಅಧಿಕಾರಿಗಳು ಸಹಿ ಮಾಡಿದ ನಂತರ ಭೂ ಮಾಲೀಕರನ್ನು ಸಹಿ ಮಾಡಲು ಕೇಳಿದ್ದಾರೆ ಆದರೆ ಭೂ ಮಾಲೀಕರು ಅರ್ಜಿಗೆ ಸಹಿ ಮಾಡಲು ನಿರಾಕರಿಸಿದರು. ಆ ಸಂದರ್ಭದಲ್ಲಿ ಉಪ ನಿರ್ದೇಶಕರು ಫುಲ್ ಗರಂ ಆದರು ಈ ಜಾಗದಲ್ಲಿ 70 ವರ್ಷಗಳಿಂದ ನಮ್ಮ ಶಾಲೆ ಇದೆ ಇದು ಅಧಿಕೃತ ಶಿಕ್ಷಣ ಇಲಾಖೆಗೆ ಸೇರಿದ ಜಾಗ ಇಲ್ಲಿ ಶಾಲಾ ಕಟ್ಟಡದ ನಿರ್ಮಾಣವನ್ನು ಹೇಗೆ ಮುಂದುವರಿಸಬೇಕೋ ನಮಗೆ ಗೊತ್ತಿದೆ ಎಂದು ಇಲಾಖೆಯ ಅಧಿಕಾರಿಗಳಿಗೆ ಇಂಜಿನಿಯರ್ ಗಳಿಗೆ ಶಾಲಾ ಕಟ್ಟಡ ಮುಂದುವರಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

### ಉದ್ಘಾಟನೆಯ ಭಾಗ್ಯ ಎಂದು?

**ಶಾಲಾ ಕಟ್ಟಡ ಕುರಿತು ತಕರಾರು ಮಾಡಿರುವ ಜಾಗದ ಮಾಲೀಕರು ಮತ್ತು ಅಧಿಕಾರಿಗಳ ನಡುವೆ ಕಾನೂನು ಸಮರ ಶುರುವಾಗಿದ್ದು ಶಾಲಾ ಕಟ್ಟಡ ನಿರ್ಮಾಣಕ್ಕೆ ಕುತೂಹಲದಿಂದ ನಿರೀಕ್ಷೆ ಮಾಡುತ್ತಿರುವ ಶಾಲಾ ಮಕ್ಕಳಿಗೆ ಹೆಚ್ಚುವರಿ ಕೊಠಡಿ ಉದ್ಘಾಟನೆಯ ಭಾಗ್ಯ ಎಂದು ಸಿಗುತ್ತೋ ಕಾದು ನೋಡಬೇಕು**

> **ಎಪ್ಪತ್ತು ವರ್ಷಗಳಿಂದ ಶಾಲೆ ಇದೆ ಜಗದಲ್ಲಿದೆ, ಸ್ಥಗಿತಗೊಂಡ ಶಾಲಾ ಕಟ್ಟಡ ನಿರ್ಮಾಣ ಹೇಗೆ ಮುಂದುವರಿಸ ಬೇಕೋ ಗೊತ್ತಿದೆ ನಮಗೆ ಮಕ್ಕಳ ಹಿತ ಮುಖ್ಯ**

## ಮಿನಿ ನ್ಯೂಸ್


ಉದಯವಾಹಿನಿ ಚಿತ್ರ

• ಉದಯವಾಹಿನಿ ಶಹಾಪುರ

**ಪಟ್ಟಣದ ಭೀಮರಾಯನ ಗುಡಿ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಪದಾಧಿಕಾರಿಗಳು ಆಯ್ಕೆ ಸಮಾರಂಭ ಕಾರ್ಯಕ್ರಮ ನಡೆಯಿತು. ಕೋಡಿಹಳ್ಳಿ ಚಂದ್ರಶೇಖರ್ ಬಣ್ಣದ ವತಿಯಿಂದ ಶಹಾಪುರ ತಾಲ್ಲೂಕು ಘಟಕ ರೈತ ಸಂಘದ ಅಧ್ಯಕ್ಷರನ್ನಾಗಿ ಭೀಮನಗೌಡ ಟಿ ಪಾಟೀಲ್ ಹಲ್ಕಲ್ ಇವರನ್ನು ಆಯ್ಕೆ ಮಾಡಲಾಯಿತು. ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷರಾದ ಮಹಾದೇವಿ ಎಸ್ ಬೇನಾಳ ಮಠ, ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಮಲ್ಲನಗೌಡ ಪಾಟೀಲ, ಜಿಲ್ಲಾಧ್ಯಕ್ಷ ಎಚ್. ಆರ್. ಬಡಿಗೇರ್, ಪದಾಧಿಕಾರಿಗಳು ಇದ್ದರು.**

### ಪಟ್ಟಣ ಪಂಚಾಯಿತಿಯಿಂದ 22 ಬಿಡಾಡಿ ದನ ಗೋಶಾಲೆಗೆ

• ಉದಯವಾಹಿನಿ, ಕಲಘಟಗಿ

ಪಟ್ಟಣ ಪಂಚಾಯಿತಿ ಅಧಿಕಾರಿಗಳು ಹಾಗೂ ಪೌರ ಕಾರ್ಮಿಕರು ಪಟ್ಟಣದ 22 ಬಿಡಾಡಿ ದನಗಳನ್ನು ಸೆರೆ ಹಿಡಿದು ಗೋಶಾಲೆಗೆ ಸಾಗಿಸಿದ್ದಾರೆ. ಪಟ್ಟಣದಲ್ಲಿ ಸಾರ್ವಜನಿಕರ ಸಂಚಾರಕ್ಕೆ ಹಾಗೂ ಅಂಗಡಿ ಮುಗ್ಗಟ್ಟುಗಳ ವಸ್ತುಗಳನ್ನ ಬಿಡಾಡಿ ದನಗಳ ಹಾವಳಿಯಿಂದ ತೊಂದರೆ ಮಾಡುತ್ತಿದ್ದವು.ಪಟ್ಟಣ ಪಂಚಾಯತಿಯಿಂದ ದನಗಳ ಮಾಲೀಕರಿಗೆ ಹಲವು ಬಾರಿ ಜಾಗೃತಿ ಮೂಡಿಸಿ ಮನವಿ ಮಾಡಿದರು ಪ್ರಯೋಜನವಾಗದ ಕಾರಣ ಮುಖ್ಯಾಧಿಕಾರಿ ಸಿ.ವಿ. ಕುಲಕರ್ಣಿ ಹಾಗೂ ಪಪಂ ಅಧ್ಯಕ್ಷೆ ಶಿಲ್ಪಾ ಪಾಲ್ಕರ, ಉಪಾಧ್ಯಕ್ಷ ಗಂಗಾಧರ ಗೌಳಿ, ಸ್ಥಾಯಿ ಸಮಿತಿ ಅಧ್ಯಕ್ಷ ಬಸವರಾಜ ಕಡ್ಡಾಸ್ಕರ ಸೇರಿ ಸದಸ್ಯರ ಸಮ್ಮತಿ ಮೇರೆಗೆ ಕಾರ್ಯಾಚರಣೆ ನಡೆಸಲಾಯಿತು.

ಬೆಳಗಿನ ಜಾವ ಮೂರು ಗಂಟೆಗೆ ಆರಂಭಗೊಂಡ ಕಾರ್ಯಾಚರಣೆ ಸತತ ಮೂರು ಗಂಟೆಗಳ ನಿರಂತರ ನಡೆಯಿತು. ಪಟ್ಟಣದ ವಿವಿಧೆಡೆ ರಸ್ತೆಗಳಲ್ಲಿ ಬಿಡಾರ ಹೂಡಿದ್ದ ಒಟ್ಟು 22 ಬಿಡಾಡಿ ದನಗಳನ್ನು ಸೆರೆ ಹಿಡಿದು ಹುಬ್ಬಳ್ಳಿ ತಾಲ್ಲೂಕಿನ ಬುಡರಶಿಂಗಿಯ ಗೋ ಶಾಲೆಗೆ ಬಿಟ್ಟು ಬರಲಾಯಿತು.

### 21 ಮಕ್ಕಳಲ್ಲಿ ಚಿಕನ್ ಪಾಕ್ಸ್ ಸೋಂಕು ದೃಢ: ಆತಂಕದಲ್ಲಿ ಪೋಷಕರು

• ಉದಯವಾಹಿನಿ ದಕ್ಷಿಣಕನ್ನಡ

ದಕ್ಷಿಣಕನ್ನಡದಲ್ಲಿ ವಿವಿಧ ಶಾಲೆಗಳಲ್ಲಿ ಒಟ್ಟು 21 ಮಕ್ಕಳಿಗೆ ಚಿಕನ್ ಪಾಕ್ಸ್ ಸೋಂಕು ದೃಢಪಟ್ಟಿದೆ. ದಕ್ಷಿಣಕನ್ನಡ ಜಿಲ್ಲೆಯ ಕಡಬ ಒಂದೇ ತಾಲ್ಲೂಕಿನ ವಿವಿಧ ಶಾಲೆಗಳಲ್ಲಿ ಒಟ್ಟು 21 ಮಕ್ಕಳಿಗೆ ಈ ಒಂದು ಚಿಕನ್ ಪಾಕ್ಸ್ ದೃಢಪಟ್ಟಿದೆ. ಹಾಗಾಗಿ ಮಕ್ಕಳ ಪೋಷಕರಲ್ಲಿ ಇದೀಗ ಆತಂಕ ಮನೆ ಮಾಡಿದೆ. ಹೌದು ರೋಗ ಹರಡಿರುವ ಶಾಲೆಗಳ ಆಡಳಿತ ಮಂಡಳಿಗೆ ಆರೋಗ್ಯ ಇಲಾಖೆ ಮುನ್ನೆಚ್ಚರಿಕೆ ವಹಿಸುವಂತೆ ಆದೇಶ ನೀಡಿದೆ. ರೋಗ ಕಡಿಮೆಯಾಗುವವರೆಗೂ ಮಕ್ಕಳಿಗೆ ರಜೆ ನೀಡುವಂತೆ ಮತ್ತು ಮಕ್ಕಳನ್ನು ಶಾಲೆಗೆ ಕಳುಹಿಸದಂತೇ ಶಾಲೆಗಳಿಗೆ ಮತ್ತು ಪೋಷಕರಿಗೆ ಜಿಲ್ಲಾ ಮತ್ತು ತಾಲ್ಲೂಕು ಆರೋಗ್ಯಾಧಿಕಾರಿಗಳು ವಿನಂತಿ ಮಾಡಿದ್ದಾರೆ. ಆರೋಗ್ಯ ಇಲಾಖೆಯಿಂದ ದೊರೆತ ಮಾಹಿತಿ ಅನ್ವಯ ನೆಲ್ಯಾಡಿಯಲ್ಲಿ ಎರಡು ಶಾಲೆಗಳಲ್ಲಿ ಒಟ್ಟು ಒಂಬತ್ತು ಮಕ್ಕಳಿಗೆ, ಬೆಳ್ಳಾರೆ ಶಾಲೆಯಲ್ಲಿ ಒಂದು, ಲಾವತ್ತಡ್ಕದಲ್ಲಿ ಒಂದು, ಗೋಳಿತ್ತೊಟ್ಟುವಿನಲ್ಲಿ ಒಂದು, ಕುಕ್ಕೆ ಸುಬ್ರಹ್ಮಣ್ಯದ ಶಾಲೆಯ 6 ಮಕ್ಕಳಿಗೆ ಸೇರಿದಂತೆ ಒಟ್ಟು 21 ಮಕ್ಕಳಿಗೆ ಚಿಕನ್‌ಪಾಕ್ಸ್ ಹರಡಿರುವ ಬಗ್ಗೆ ಪ್ರಸ್ತುತ ಮಾಹಿತಿ ಲಭ್ಯವಾಗಿದೆ.

### 1 ದಿನದ ಗುಂಡು ಮಗುವನ್ನೇ ಬಿಟ್ಟೋದ ತಾಯಿ, ಪೋಷಕರ ಪತ್ತೆಗಾಗಿ ಮನವಿ

• ಉದಯವಾಹಿನಿ, ಶಿವಮೊಗ್ಗ

ಶಿವಮೊಗ್ಗ ನಗರದ, ಶ್ರೀರಾಂಪುರ ನಗರ, ಮೊದಲ ತಿರುವಿನ ರಸ್ತೆಯ ಪಕ್ಕದಲ್ಲಿ ಕೈಚೀಲದಲ್ಲಿ ಸುಮಾರು 1 ದಿನದ ಗಂಡು ಮಗು ಪತ್ತೆಯಾಗಿದ್ದು ಸಾರ್ವಜನಿಕರು ರಕ್ಷಣೆ ಮಾಡಿ ಜಿಲ್ಲಾ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಿ, ಡಿಸಿಪಿಯು ಘಟಕ ಮತ್ತು ಮಕ್ಕಳ ಸಹಾಯವಾಣಿ ಅಧಿಕಾರಿಗಳು, ಮಕ್ಕಳ ಕಲ್ಯಾಣ ಸಮಿತಿ ಶಿವಮೊಗ್ಗ ಇಲ್ಲಿಗೆ ದಾಖಲಿಸಿರುತ್ತಾರೆ.

ಮಗುವಿನ ಮುಂದಿನ ಪುನರ್ವಸತಿ ಹಿತದೃಷ್ಟಿಯಿಂದ ಮಗುವಿನ ಸಂಬಂಧಿಕರು ಯಾರಾದರೂ ಇದ್ದಲ್ಲಿ, ಪೋಷಕರ ಬಗ್ಗೆ ಮಾಹಿತಿ ದೊರೆತಲ್ಲಿ ಸೂಕ್ತ ದಾಖಲಾತಿಯೊಂದಿಗೆ ಅಧೀಕ್ಷಕರು, ಸರ್ಕಾರಿ ಬಾಲಕರ ಬಾಲಮಂದಿರ, ಆಳ, ಶಿವಮೊಗ್ಗ, ಇವರ ಕಛೇರಿಗೆ ಖುದ್ದಾಗಿ, ದೂರವಾಣಿ ಸಂಖ್ಯೆ 08182-295511 ಗೆ ಸಂಪರ್ಕಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

### ಛತ್ತೀಸ್ ಗಢದಲ್ಲಿ ನಕ್ಸಲ್ ನಿಗ್ರಹ ಕಾರ್ಯಾಚರಣೆ ವೇಳೆ ಐಇಡಿ ಸ್ಫೋಟ

• ಉದಯವಾಹಿನಿ, ಬಿಜಾಪುರ

**ಮೂವರು ಸೈನಿಕರಿಗೆ ಗಾಯ**

ಛತ್ತೀಸ್ ಗಢದ ಬಿಜಾಪುರ ಜಿಲ್ಲೆಯಲ್ಲಿ ಮಂಗಳವಾರ ನಕ್ಸಲ್ ವಿರೋಧಿ ಕಾರ್ಯಾಚರಣೆಯ ಸಂದರ್ಭದಲ್ಲಿ ಸುಧಾರಿತ ಸ್ಫೋಟಕ ಸಾಧನ ಐಇಡಿ ಸ್ಫೋಟಗೊಂಡು ಇಬ್ಬರು ಭದ್ರತಾ ಸಿಬ್ಬಂದಿ ಗಾಯಗೊಂಡಿದ್ದಾರೆ ಮತ್ತು ಇನ್ನೊಬ್ಬ ಸೈನಿಕ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಬಿಜಾಪುರ ಮತ್ತು ದಾಂತೇವಾಡ ಜಿಲ್ಲೆಗಳ ಗಡಿಯಲ್ಲಿರುವ ಅರಣ್ಯದಲ್ಲಿ ಈ ಘಟನೆಗಳು ನಡೆದಿದ್ದು, ಭದ್ರತಾ ಪಡೆಗಳ ಜಂಟಿ ತಂಡವು ನಕ್ಸಲ್ ವಿರೋಧಿ ಕಾರ್ಯಾಚರಣೆಯಲ್ಲಿ ತೊಡಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಜಿಲ್ಲಾ ರಿಸರ್ವ್ ಗಾರ್ಡ್ ಮತ್ತು ಕೇಂದ್ರ ಮೀಸಲು ಪೊಲೀಸ್ ಪಡೆ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದಾರೆ ಎಂದು ಅವರು ಹೇಳಿದರು. ಪ್ರಾಥಮಿಕ ಮಾಹಿತಿಯ ಪ್ರಕಾರ, ಇಬ್ಬರು ಸೈನಿಕರು ಆಕಸ್ಮಿಕವಾಗಿ ಒತ್ತಡ-ಸಕ್ರಿಯ ಐಇಡಿಯೊಂದಿಗೆ ಸಂಪರ್ಕಕ್ಕೆ ಬಂದರು. ಇದು ಸ್ಫೋಟಕ್ಕೆ ಕಾರಣವಾಯಿತು, ಮೂರನೇ ಸಿಬ್ಬಂದಿ ನಕ್ಸಲರು ಸ್ಥಾಪಿಸಿದ ಸ್ಪೈಕ್ ಟ್ರ್ಯಾಪ್ ಮೇಲೆ ಹೆಜ್ಜೆ ಹಾಕಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ಗಾಯಗೊಂಡ ಸೈನಿಕರಿಗೆ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ರಾಯಪುರಕ್ಕೆ ವಿಮಾನದಲ್ಲಿ ಕರೆದೊಯ್ಯಲಾಗಿದೆ ಎಂದು ಅವರು ಹೇಳಿದರು.

# ರಾಹುಲ್ ಗಾಂಧಿ ವಿರುದ್ಧ ಕಿಡಿಕಾರಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್

## ಸೇನಾ ಮುಖ್ಯಸ್ಥರ ಹೇಳಿಕೆ ತಿರುಚುವ ರಾಹುಲ್ ಗಾಂಧಿಗೆ ನಾಚಿಕೆಯಾಗಬೇಕು; ರಾಜನಾಥ್ ಸಿಂಗ್ ಕಿಡಿ




**ಹೊಸದಿಲ್ಲಿ:** ಭಾರತದ ಭೂಪ್ರದೇಶದಲ್ಲಿ ಚೀನೀ ಸೇನೆಯ ಅತಿಕ್ರಮಣದ ಕುರಿತು ರಾಹುಲ್ ಗಾಂಧಿ ಅವರ ಆರೋಪಗಳನ್ನು ಸ್ಪಷ್ಟವಾಗಿ ತಳ್ಳಿಹಾಕಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್, ರಾಹುಲ್ ಗಾಂಧಿ ಅವರು ಭಾರತೀಯ ಭೂಸೇನೆ ಮುಖ್ಯಸ್ಥರ ಹೇಳಿಕೆಯನ್ನು ತಪ್ಪಾಗಿ ಪ್ರಸ್ತುತಪಡಿಸುತ್ತಿದ್ದಾರೆ ಎಂದು ಕಿಡಿಕಾರಿದ್ದಾರೆ.

ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿರುವ ರಾಜನಾಥ್ ಸಿಂಗ್, ಸೇನಾ ಮುಖ್ಯಸ್ಥರ ಹೇಳಿಕೆಯನ್ನು ತಮ್ಮ ಅನುಕೂಲಕ್ಕೆ ತಕ್ಕಂತೆ ಮಾರ್ಪಡಿಸಿ ಸುಳ್ಳು ಹೇಳುತ್ತಿರುವ ರಾಹುಲ್ ಗಾಂಧಿ ಅವರಿಗೆ ನಾಚಿಕೆಯಾಗಬೇಕು. ಎಂದು ಹರಿಹಾಯ್ದಿದ್ದಾರೆ. ಸೇನಾ ಮುಖ್ಯಸ್ಥರು ಗಡಿಯಲ್ಲಿ ಸಾಂಪ್ರದಾಯಿಕ ಗಸ್ತು ತಿರುಗುವಿಕೆಯ ಮೇಲೆ ಚೀನೀ ಸೇನೆಯ ಅಡಚಣೆಯ ಬಗ್ಗೆ ಮಾತ್ರ ಉಲ್ಲೇಖಿಸಿದ್ದಾರೆ.

ಚೀನಾ ಸೈನಿಕರು ಆಗಾಗ ಗಡಿಯಲ್ಲಿ ಭಾರತೀಯ ಸೈನಿಕರ ಗಸ್ತು ತಿರುಗು ವಿಕೆ ಪ್ರಕ್ರಿಯೆಗೆ ಅಡ್ಡಿಪಡಿಸುತ್ತಲೇ ಇರುತ್ತಾರೆ. ಆದರೆ ಸೇನಾ ಮುಖ್ಯಸ್ಥರು ಎಲ್ಲಿಯೂ ಭಾರತದ ಭೂಪ್ರದೇಶವನ್ನು ಚೀನೀ ಪಡೆಗಳು ಅತಿಕ್ರಮಣ ಮಾಡಿವೆ ಎಂದು ಹೇಳಿಲ್ಲ. ಎಂದು ರಾಜನಾಥ್ ಸಿಂಗ್ ಸ್ಪಷ್ಟಪಡಿಸಿದ್ದಾರೆ.

ರಾಷ್ಟ್ರೀಯ ಹಿತಾಸಕ್ತಿಯ ವಿಷಯಗಳಲ್ಲಿ ರಾಹುಲ್ ಗಾಂಧಿ ಬೇಜವಾಬ್ದಾರಿ ಹೇಳಿಕೆಗಳನ್ನು ನೀಡುವುದು ತೀವ್ರ ವಿಷಾದನೀಯ. ಗಡಿಯಲ್ಲಿ ಭಾರತೀಯ ಸೈನಿಕರ ಗಸ್ತು ತಿರುಗುವಿಕೆ ಪ್ರಕ್ರಿಯೆಗೆ ಚೀನಾ ಸೈನಿಕರು ಅಡ್ಡಿಪಡಿಸುವ ಕುರಿತು, ರಕ್ಷಣಾ ಇಲಾಖೆ ಈಗಾಗಲೇ ಸಂಸತ್ತಿಗೆ ಮಾಹಿತಿ ನೀಡಿದೆ. ಆದರೆ ರಾಹುಲ್ ಗಾಂಧಿ ಸೇನಾ ಮುಖ್ಯ ಸ್ಥರ ಹೇಳಿಕೆಯನ್ನು ತಿರುಚಿ ಕೀಳು ರಾಜಕೀಯ ಮಾಡು ತ್ತಿದ್ದಾರೆ. ಎಂದು ರಕ್ಷಣಾ ಸಚಿವರು ತೀವ್ರ ವಾಗ್ದಾಳಿ ನಡೆಸಿದ್ದಾರೆ. 1962ರ ಭಾರತ-ಚೀನಾ ಸಂಘ ರ್ಷದ ವೇಳೆ ಕೈತಪ್ಪಿದ ಭೂಭಾಗದ ಬಗ್ಗೆ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿರುವ ರಾಜನಾಥ್ ಸಿಂಗ್,

- ಭಾರತದ ಭೂಪ್ರದೇಶವನ್ನು ಚೀನೀ ಪಡೆ ಅತ್ರಿಕ್ರಮಿಸಿದೆ ಎಂದ ರಾಹುಲ್
- ರಾಹುಲ್ ಗಾಂಧಿ ಸೇನಾ ಮುಖ್ಯಸ್ಥರ ಹೇಳಿಕೆಯನ್ನು ತಿರುಚಿದ್ದಾರೆ ಎಂದ ರಾಜನಾಥ್
- ರಾಷ್ಟ್ರೀಯ ಹಿತಾ ಸಕ್ತಿ ಬಗ್ಗೆ ರಾಹುಲ್‌ಗೆ ಪಾಠ ಮಾಡಬೇಕಿದೆ ಎಂದ ರಾಜನಾಥ್



1962ರ ಸಂಘರ್ಷದ ಪರಿಣಾಮವಾಗಿ ಅಕ್ಸಾಯ್ ಚಿನ್‌ನಲ್ಲಿ 38,000 ಚ.ಕಿ.ಮೀ. ಭೂಪ್ರದೇಶವನ್ನು ಭಾರತ ಕಳೆದುಕೊಂಡಿರುವ ಇತಿಹಾಸ ರಾಹುಲ್ ಗಾಂಧಿ ಅವರಿಗೆ ಏಕೆ ಗೊತ್ತಿಲ್ಲ. ಎಂದು ಪ್ರಶ್ನಿಸಿ ದ್ದಾರೆ. ಮುಂದುವರೆದು, 1963ರಲ್ಲಿ ಪಾಕಿಸ್ತಾನವು ಅಕ್ಸಾಯ್ ಚಿನ್ ಪ್ರದೇಶದ 5,180 ಚ. ಕಿ.ಮೀ. ಭೂಪ್ರದೇಶವನ್ನು ಅಕ್ರಮವಾಗಿ ಚೀನಾಗೆ ಬಿಟ್ಟು ಕೊಟ್ಟಿತ್ತು.

ಇತಿಹಾಸದ ಈ ಕಾಲಘಟ್ಟದ ಬಗ್ಗೆ ರಾಹುಲ್ ಗಾಂಧಿ ಆತ್ಮಾವಲೋಕನ ಮಾಡಿಕೊಳ್ಳುತ್ತಾರೆಯೇ? ಎಂದು ರಾಜನಾಥ್ ಸಿಂಗ್ ಪ್ರಶ್ನೆ ಮಾಡಿದ್ದಾರೆ. ಕಳೆದ ತಿಂಗಳು ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ್ದ ಭಾರತೀಯ ಭೂಸೇನೆ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ಗಡಿಯ ಎರಡೂ ಕಡೆಯ ಸೈನಿಕರು ಗಸ್ತು ತಿರುಗುವಿಕೆಯ ಸಮಯದಲ್ಲಿ ಭೂಪ್ರದೇಶವನ್ನು ಅಕ್ರಮವಾಗಿ ಪ್ರವೇಶಿಸುವುದು ಸಾಮಾನ್ಯ, ಎಂದು ಹೇಳಿದ್ದರು.

ಲೋಕಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣಕ್ಕೆ ವಂದನಾ ನಿರ್ಣಯದ ಮೇಲಿನ ಚರ್ಚೆಯ ವೇಳೆ ಮಾತನಾಡಿದ್ದ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಚೀನೀ ಸೈನಿಕರು ಭಾರತೀಯ ಭೂಪ್ರದೇಶವನ್ನು ಅತಿಕ್ರಮಿಸಿದ್ದಾರೆ ಎಂದು ಖುದ್ದು ಸೇನಾ ಮುಖ್ಯಸ್ಥರೇ ಒಪ್ಪಿಕೊಂಡಿದ್ದಾರೆ.

ಆದರೆ ಪ್ರಧಾನಿ ಮೋದಿ ಮಾತ್ರ ಈ ವಿಷಯದಲ್ಲಿ ದೇಶಕ್ಕೆ ಸುಳ್ಳು ಹೇಳುತ್ತಿದ್ದಾರೆ. ಎಂದು ಗಂಭೀರ ಆರೋಪ ಮಾಡಿದ್ದನ್ನು ಇಲ್ಲಿ ಸ್ಮರಿಸಬಹುದು.

ಇನ್ನು ರಾಹುಲ್ ಗಾಂಧಿ ಅವರು ಚೀನಾ ಅತಿಕ್ರಮಣದ ಬಗ್ಗೆ ಸದನಕ್ಕೆ ತಪ್ಪು ಮಾಹಿತಿ ನೀಡಿದ್ದಾರೆ ಎಂದು ಆರೋಪಿಸಿರುವ ಬಿಜೆಪಿ, ವಿಪಕ್ಷ ನಾಯಕನ ವಿರುದ್ಧ ಹಕ್ಕುಚ್ಯುತಿ ಮಂಡನೆಗೆ ಚಿಂತನೆ ನಡೆಸಿರುವುದಾಗಿ ಹೇಳಿದೆ.

### ಆರೋಪಗಳು ಸತ್ಯಕ್ಕೆ ದೂರ

ಭಾರತದ ಭೂಪ್ರದೇಶದಲ್ಲಿ ಚೀನೀ ಸೇನೆಯ ಅತಿಕ್ರಮಣದ ಕುರಿತು ರಾಹುಲ್ ಗಾಂಧಿ ಅವರ ಆರೋಪಗಳು ಸತ್ಯಕ್ಕೆ ದೂರವಾಗಿವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸ್ಪಷ್ಟಪಡಿಸಿದ್ದಾರೆ. ಗಡಿಯಲ್ಲಿ ಸಾಂಪ್ರದಾಯಿಕ ಗಸ್ತು ತಿರುಗುವಿಕೆಯ ಮೇಲೆ ಚೀನೀ ಸೇನೆಯ ಅಡಚಣೆಯ ಬಗೆಗಿನ ಸೇನಾ ಮುಖ್ಯಸ್ಥರ ಹೇಳಿಕೆಯನ್ನು, ರಾಹುಲ್ ಗಾಂಧಿ ತಿರುಚಿದ್ದಾರೆ ಎಂದು ರಾಜನಾಥ್ ಸಿಂಗ್ ಆರೋಪಿಸಿದ್ದಾರೆ. ರಾಷ್ಟ್ರೀಯ ಹಿತಾಸಕ್ತಿಯ ವಿಷಯಗಳಲ್ಲಿ ರಾಹುಲ್ ಗಾಂಧಿ ಬೇಜವಾಬ್ದಾರಿ ಹೇಳಿಕೆಗಳನ್ನು ನೀಡುವುದು ತೀವ್ರ ವಿಷಾದನೀಯ ಎಂದು ರಕ್ಷಣಾ ಸಚಿವರು ತರಾಟೆಗೆ ತೆಗೆದುಕೊಂಡಿದ್ದಾರೆ.

# ಬಜೆಟ್‌ಗೆ 37.64 ಮಿಲಿಯನ್ ಡಾಲರ್ ಪಾವತಿಸಿದ ಭಾರತ

**ನ್ಯೂಯಾರ್ಕ್:** ವಿಶ್ವಸಂಸ್ಥೆಯ 2025ರ ನಿಯಮಿತ ಬಜೆಟ್‌ಗೆ ಭಾರತವು 37.64 ಮಿಲಿಯನ್ ಡಾಲರ್‌ಗಳನ್ನು ಪಾವತಿಸಿದೆ. ವಿಶ್ವಸಂಸ್ಥೆಯಲ್ಲಿ 35 ಸದಸ್ಯ ರಾಷ್ಟ್ರಗಳು ಗೌರವ ಪಟ್ಟಿಗೆ ಸೇರಿದ್ದು ಅವರು ತಮ ನಿಯಮಿತ ಬಜೆಟ್ ಮೌಲ್ಯಮಾಪನಗಳನ್ನು ಪೂರ್ಣವಾಗಿ ಮತ್ತು ಸಮಯಕ್ಕೆ ಸರಿಯಾಗಿ ಪಾವತಿಸಿದ್ದಾರೆ. ಕೊಡುಗೆಗಳ ಸಮಿತಿಯ ಪ್ರಕಾರ, ಜನವರಿ 31 2025 ರಂತೆ, ಮೂವತ್ತೈದು ಸದಸ್ಯ ರಾಷ್ಟ್ರಗಳು ತಮ ನಿಯಮಿತ ಬಜೆಟ್ ಮೌಲ್ಯಮಾಪನಗಳನ್ನು ಹಣಕಾಸು ನಿಯಮಗಳಲ್ಲಿ ನಿರ್ದಿಷ್ಟಪಡಿಸಿದ 30-ದಿನಗಳ ಅವಧಿಯೊಳಗೆ ಪೂರ್ಣವಾಗಿ ಪಾವತಿಸಿವೆ.

ಭಾರತವು 2025 ರ ವಿಶ್ವಸಂಸ್ಥೆಯ ನಿಯಮಿತ ಬಜೆಟ್‌ಗೆ 37.64 ಮಿಲಿಯನ್ ಕೊಡುಗೆ ನೀಡಿದೆ. ತಮ್ಮ ನಿಯಮಿತ ಬಜೆಟ್ ಮೌಲ್ಯಮಾಪನಗಳನ್ನು ಪೂರ್ಣವಾಗಿ ಪಾವತಿಸಿದ ಸದಸ್ಯ ರಾಷ್ಟ್ರಗಳ ಗೌರವ ಪಟ್ಟಿಗೆ ಸೇರ್ಪಡೆಗೊಳ್ಳುವ ದೇಶಗಳನ್ನು ಹೆಸರಿಸುತ್ತಾ, ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಅವರ ವಕ್ತಾರ ಸ್ಟೀಫನ್ ಡುಜಾರಿಕ್ ಅವರು ದೈನಂದಿನ



ಪತ್ರಿಕಾಗೋಷ್ಠಿಯಲ್ಲಿ ಭಾರತದಲ್ಲಿರುವ ನಮ ಸ್ನೇಹಿತರಿಗೆ ನಾವು ಧನ್ಯವಾದಗಳನ್ನು ಅರ್ಪಿಸುತ್ತೇವೆ ಎಂದಿದ್ದಾರೆ.

ಯುಎನ್ ಬಜೆಟ್‌ಗೆ ತನ್ನ ಕೊಡುಗೆಗಳನ್ನು ಸಮಯಕ್ಕೆ ಮತ್ತು ಪೂರ್ಣವಾಗಿ ಪಾವತಿಸುವ ದೇಶಗಳಲ್ಲಿ ಭಾರತವು ಮುಂದಿದೆ. ಕಳೆದ ವಾರ, ಭಾರತಕ್ಕೆ ಭೇಟಿ ನೀಡಲಿರುವ ಅಸೆಂಬ್ಲಿ ಅಧ್ಯಕ್ಷ ಫಿಲೆಮನ್ ಯಾಂಗ್, ಪಿಟಿಐಗೆ ನೀಡಿದ ಸಂದರ್ಶನ ದಲ್ಲಿ ಭಾರತವು ಯುಎನ್‌ನ ಸದಸ್ಯ ರಾಷ್ಟ್ರವಾಗಿ ತನ್ನ ಬಾಧ್ಯತೆಯನ್ನು ಪೂರ್ಣವಾಗಿ ಮತ್ತು ಪಾವತಿಸುವ ಮೂಲಕ ಪೂರೈಸುವುದನ್ನು ಮುಂದುವರೆಸಿದೆ ಎಂದು ಹೇಳಿದ್ದರು

# ಸಂಗಮದಲ್ಲಿ ಮಿಂದೆದ್ದ ಭೂತಾನ್ ದೊರೆ ಜಿಗ್ಮೆ ಖೇಸರ್

**ಮಹಾಕುಂಭ ನಗರ:** ಭೂತಾನ್ ದೊರೆ ಜಿಗ್ಮೆ ಖೇಸರ್ ನಮ್‌ಗ್ಯಾಲ್ ವಾಂಗ್ಚುಕ್ ಅವರು ಮಂಗಳವಾರ ಮಹಾಕುಂಭಮೇಳಕ್ಕೆ ಭೇಟಿ ನೀಡಿದರಲ್ಲದೆ, ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದರು.

ಪವಿತ್ರ ಸ್ನಾನಕ್ಕೂ ಮುನ್ನ ಅವರು ಸೂರ್ಯನಿಗೆ ಅರ್ಘ್ಯ ಸಮರ್ಪಣೆ ಸೇರಿದಂತೆ ವಿವಿಧ ಧಾರ್ಮಿಕ ಆಚರಣೆಗಳನ್ನು ಮಾಡಿದರು. ವಾಂಗ್ಚುಕ್ ಅವರು ಥಿಂಪುವಿನಿಂದ ಸೋಮವಾರ ಲಖನೌಗೆ ಬಂದಿಳಿದಿದ್ದರು. ಭೂತಾನ್ ಸಾಂಪ್ರದಾಯಿಕ ಉಡುಗೆ ತೊಟ್ಟು ಬಂದಿದ್ದ ಅವರು ಮಹಾಕುಂಭ ಮೇಳಕ್ಕೆ ಬರುವಾಗ ಕೇಸರಿ ಬಣ್ಣದ ಕುರ್ತಾ ಮತ್ತು ಪೈಜಾಮ ಧರಿಸಿದ್ದರು.

ವಾಂಗ್ಚುಕ್ ಅವರು ಪವಿತ್ರ ಸ್ನಾನ ಮಾಡುವಾಗ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ, ಸಚಿವರಾದ ಸ್ವತಂತ್ರ ದೇವ್ ಸಿಂಗ್ ಮತ್ತು ನಂದಗೋಪಾಲ್ ಗುಪ್ತಾ, ವಿಷ್ಣುಸ್ವಾಮಿ ಪಂಥದ ಮುಖಂಡ ಜಗದ್ಗುರು ಸಂತೋಷ್ ದಾಸ್ ಮಹಾರಾಜ್ ಅವರು ಜತೆಗಿದ್ದರು. ಪವಿತ್ರ ಸ್ನಾನದ ಬಳಿಕ



ಭೂತಾನ್ ದೊರೆ, ಅಕ್ಷಯವಟ, ಹನುಮಾನ್ ದೇವಾಲಯಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಸೋಮವಾರ ಅವರು ರಾಜಭವನದಲ್ಲಿ ರಾಜ್ಯಪಾಲರಾದ ಆನಂದಿಬೆನ್ ಪಟೇಲ್ ಅವರನ್ನೂ ಭೇಟಿಯಾಗಿದ್ದರು. ರಾಜ್ಯಪಾಲರು ಮತ್ತು ಮುಖ್ಯ ಮಂತ್ರಿ ಅವರು ಭಾರತ- ಭೂತಾನ್ ದ್ವಿಪಕ್ಷೀಯ ಸಂಬಂಧದ ಬಗ್ಗೆಯೂ ವಾಂಗ್ಚುಕ್ ಜತೆ ಮಾತುಕತೆ ನಡೆಸಿದ್ದರು. ಇಂಥ ಅವಘಡಗಳು ಮರುಕಳಿಸದಿರಲಿ ಎಂದು ಕುಂಭಮೇಳದ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಿದ್ದರು. ಉತ್ತರ ಪ್ರದೇಶ ಸರ್ಕಾರವು ಮೇಳದ ವಲಯದ ವ್ಯವಸ್ಥೆಯಲ್ಲಿ ಹಲವು ಪ್ರಮುಖ ಬದಲಾವಣೆಗಳನ್ನು ಮಾಡಿತ್ತು.

**ಭೂತಾನ್ ದೊರೆಯ ಭೇಟಿಯು ಭಾರತ-ಭೂತಾನ್ ಬಾಂಧವ್ಯ ಮತ್ತು ಸಾಂಸ್ಕೃತಿಕ ಸಂಬಂಧಗ ಳನ್ನು ಮತ್ತಷ್ಟು ಬಲಪಡಿಸುವ ನಿಟ್ಟನಲ್ಲಿ ಪ್ರಮುಖ ಹೆಜ್ಜೆಯಾಗಿದೆ ಎಂದು ಸರ್ಕಾರದ ಪ್ರಕಟಣೆ ತಿಳಿಸಿದೆ. ಮಹಾಕುಂಭ ಮೇಳದ ಮೂರನೇ 'ಅಮೃತ ಸ್ನಾನ' ತ್ರಿವೇಣಿ ಸಂಗಮದಲ್ಲಿ ಸೋಮವಾರ ಸುಸೂತ್ರವಾಗಿ ನಡೆಯಿತು. ದೇಶದ ವಿವಿಧ ಭಾಗಗಳು ಮತ್ತು ವಿದೇಶ ಗಳ ಲಕ್ಷಾಂತರ ಭಕ್ತರು 'ವಸಂತ ಪಂಚಮಿ'ಯ ಪವಿತ್ರ ಸ್ನಾನದಲ್ಲಿ ಪಾಲ್ಗೊಂಡಿದ್ದರು.**

ದಟ್ಟಣೆ ನಿರ್ವಹಣೆ, ಭಕ್ತರ ಸುರಕ್ಷತೆ ಖಾತ್ರಿಪಡಿಸುವ ಉದ್ದೇಶದಿಂದ ಹಲವಾರು ಕ್ರಮಗಳನ್ನು ತೆಗೆದುಕೊಂಡಿತ್ತು. ಇದರಿಂದ ಸೋಮವಾರ ಯಾವುದೇ ಅಹಿತಕರ ಘಟನೆ ನಡೆಯಲಿಲ್ಲ.

# ವಿದೇಶಿಯರನ್ನು ಗಡಿಪಾರು ಮಾಡದ ಅಸ್ಸಾಂ ಸರ್ಕಾರಕ್ಕೆ ಸುಪ್ರೀಂ ತರಾಟೆ

**ನವದೆಹಲಿ:** ವಿದೇಶಿಯರು ಎಂದು ಘೋಷಿತರಾದ ವ್ಯಕ್ತಿಗಳನ್ನು ಗಡಿಪಾರು ಮಾಡದೆ ವಿಳಂಬ ಧೋರಣೆ ಅನುಸರಿಸುತ್ತಿರುವ ಅಸ್ಸಾಂ ಸರ್ಕಾರವನ್ನು ಸುಪ್ರೀಂ ಕೋರ್ಟ್ ಮಂಗಳವಾರ ತರಾಟೆಗೆ ತೆಗೆದು ಕೊಂಡಿತು.

ವಿಚಾರಣೆಗೆ ವರ್ಚುವಲ್ ವಿಧಾನದ ಮೂಲಕ ಹಾಜರಿದ್ದ ಅಸ್ಸಾಂನ ಮುಖ್ಯ ಕಾರ್ಯದರ್ಶಿ ಅವರ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ನ್ಯಾ. ಎ.ಎಸ್. ಓಕಾ, ಉಜ್ಜಲ್ ಭುಯಾನ್ ಅವರಿದ್ದ ಪೀಠ, ವಿಳಾಸವಿಲ್ಲದಿದ್ದರೂ ಅವರನ್ನು ಗಡೀಪಾರು ಮಾಡಬಹುದು, ಅನಿರ್ದಿಷ್ಟವಾಗಿ ಅವರನ್ನು ಬಂಧಿಸಿಟ್ಟುಕೊಂಡಿರುವಂತಿಲ್ಲ ಎಂದು ಹೇಳಿದೆ.

ಒಮ್ಮೆ ಅವರನ್ನು ವಿದೇಶಿಯರೆಂದು ಪರಿ ಗಣಿಸಿದ ನಂತರ, ಅವರನ್ನು ತಕ್ಷಣವೇ ಗಡಿಪಾರು ಮಾಡಬೇಕು. ಅವರ ಪೌರತ್ವದ ಸ್ಥಿತಿ ನಿಮಗೆ ತಿಳಿದಿದೆ. ಹಾಗಾದರೆ ಅವರ ವಿಳಾಸ ಸಿಗುವವರೆಗೆ ನೀವೇಕೆ ಕಾಯುತ್ತೀರಿ? ಅವರು ಎಲ್ಲಿಗೆ ಹೋಗಬೇಕೆಂದು ನಿರ್ಧರಿಸುವುದು ಉಳಿದ ದೇಶಕ್ಕೆ ಬಿಟ್ಟದ್ದು ಎಂದಿತು.

ವಿಳಾಸವಿಲ್ಲದೇ ಹೋದಲ್ಲಿ ಆ ಜನರನ್ನು ಎಲ್ಲಿಗೆ ಗಡೀಪಾರು ಮಾಡಬೇಕೆಂದು ರಾಜ್ಯ ಸರ್ಕಾರದ ಪರ ವಕೀಲರು ನ್ಯಾಯಾಲಯವನ್ನು ಕೇಳಿದರು. ಆಗ ನ್ಯಾಯಮೂರ್ತಿ ಓಕಾ, ನೀವು ಅವರನ್ನು ಸಂಬಂಧಪಟ್ಟ ದೇಶದ ರಾಜಧಾನಿಗೆ ಗಡಿಪಾರು ಮಾಡಿ. ಆ ವ್ಯಕ್ತಿ




### ಅಸ್ಸಾಂ ಸರ್ಕಾರ ಸುಳ್ಳು ಸಾಕ್ಷ್ಯದ ನೋಟಿಸ್ ಜಾರಿ

**ನ್ಯಾಯಾಲಯ ನಾವು ಅಸ್ಸಾಂ ಸರ್ಕಾರ ಸುಳ್ಳು ಸಾಕ್ಷ್ಯದ ನೋಟಿಸ್ ಜಾರಿ ಮಾಡುತ್ತೇವೆ. ಒಂದು ರಾಜ್ಯ ಸರ್ಕಾರವಾಗಿ, ನೀವು ಆರೋಪ ಮುಕ್ತರಾಗಬೇಕು ಎಂದು ಎಚ್ಚರಿಕೆ ನೀಡಿತು. ವಿಚಾರಣೆಯ ಒಂದು ಹಂತದಲ್ಲಿ, ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಪ್ರಕರಣ ರಾಜ್ಯಪಟ್ಟಿಗೆ ಬಾರದ ಹಿನ್ನೆಲೆಯಲ್ಲಿ ವಿದೇಶಾಂಗ ಸಚಿವಾಲಯದ ಅಧಿಕಾರಿಗಳೊಂದಿಗೆ ಚರ್ಚಿಸಿ ಪರಿಹಾರ ಕಂಡು ಕೊಳ್ಳುವುದಾಗಿ ತಿಳಿಸಿದರು.**

ಪಾಕಿಸ್ತಾನ ದವನಾಗಿದ್ದರೆ ನಿಮಗೆ ಪಾಕಿಸ್ತಾನದ ರಾಜಧಾನಿ ತಿಳಿದಿದೆಯೇ? ಅವರ ವಿದೇಶಿ ವಿಳಾಸ ತಿಳಿಯದೇ ಇದ್ದರೆ ಅವರನ್ನು ಇಲ್ಲಿ ಬಂಧಿಸಿದ್ದಾದರೂ ಹೇಗೆ? ಪರಿಶೀಲನಾ ವರದಿಯನ್ನು ವಿದೇಶಾಂಗ ಸಚಿವಾಲಯಕ್ಕೆ ಕಳುಹಿಸಿದ ದಿನಾಂಕವನ್ನು ಏಕೆ ಉಲ್ಲೇಖಿಸಿಲ್ಲ ಎಂದು ಕಿಡಿಕಾರಿದರು. ಈ ಕುರಿತು ಸೂಕ್ತ ಅಫಿಡವಿಟ್ ಸಲ್ಲಿಸಲು ಸಮಯಾವಕಾಶ ಅಗತ್ಯವಿದೆ ಎಂದು ವಕೀಲರು ಮನವಿ ಮಾಡಿದರು.

ವಿದೇಶಿ ವಿಳಾಸಗಳಿಲ್ಲದಿದ್ದರೂ ಸಹ, ಗಡಿಪಾರು ಪ್ರಕ್ರಿಯೆಯನ್ನು ತಕ್ಷಣವೇ ಪ್ರಾರಂಭಿಸುವಂತೆ ನ್ಯಾಯಾಲಯ ಅಸ್ಸಾಂ ಸರ್ಕಾರಕ್ಕೆ ನಿರ್ದೇಶನ ನೀಡಿತು. ರಾಷ್ಟ್ರೀಯತೆ ಪರಿಶೀಲನಾ ಪ್ರಕ್ರಿಯೆಯ ಕುರಿತು ಎರಡು ವಾರಗಳಲ್ಲಿ ದಿನಾಂಕವನ್ನೂ ಒಳಗೊಂಡಂತೆ ತೆಗೆದುಕೊಂಡ ಕ್ರಮಗಳ ವಿವರವಾದ ಅಫಿಡವಿಟ್ ಸಲ್ಲಿಸುವಂತೆಯೂ ಸರ್ಕಾರಕ್ಕೆ ಸೂಚಿಸಿತು. ದೇಶಗಳೇ ಇಲ್ಲದ ವ್ಯಕ್ತಿಗಳನ್ನು ಹೇಗೆ ನಿಭಾಯಿಸಬೇಕು ಎಂಬುದನ್ನು ಸ್ಪಷ್ಟಪಡಿಸುವುದಕ್ಕಾಗಿ ಕೇಂದ್ರ ಸರ್ಕಾರಕ್ಕೆ ಒಂದು ತಿಂಗಳ ಕಾಲಾವಕಾಶ ನೀಡಲಾಯಿತು.

# ಇಲಾನ್ ಮಸ್ಕ್ ನಡೆಗೆ ನೆಟ್ಟಿಗರು ಅಚ್ಚರಿ



**ವಾಷಿಂಗ್ಟನ್:** ಭಾರತ ಮೂಲದ 22 ವರ್ಷದ ಯುವಕ ಆಕಾಶ್ ಬೋ ಬ್ಬಾನ ಹೆಸರು ಅಮೆರಿಕದಲ್ಲಿ ಸದ್ದು ಮಾಡುತ್ತಿದೆ. ಇಲಾನ್ ಮಸ್ಕ್ ಅಡಿಯಲ್ಲಿ DOGEಗೆ ಆಯ್ಕೆಯಾಗಿರುವ 6 ಯುವಕರಲ್ಲಿ ಆಕಾಶ್ ಕೂಡ ಒಬ್ಬರು. ಈ ಆರೂ ಯುವಕರ ವಯಸ್ಸು 19ರಿಂದ 24 ವರ್ಷ ಮಾತ್ರ. ಎಲ್ಲಾರೂ ಯುವ ಎಂಜಿನಿಯರುಗಳು. ಸರ್ಕಾರದ ರಹಸ್ಯಗಳನ್ನು ಮತ್ತು ದೇಶದ ತಿಜೋರಿಯನ್ನು ಈ ಎಳಸು ಹುಡುಗರ ಕೈಗೆ ಹೇಗೆ ಇಟ್ಟಿದ್ದೀರಿ ಎಂದು ಹಲ ವರು ಟೀಕಿಸಿದ್ದಾರೆ. ಇನ್ನೂ ಸಾಕಷ್ಟು ಜನರು ಇಲಾನ್ ಮಸ್ಕ್ ಅವರದ್ದು ದಿಟ್ಟ ನಡೆ ಎಂದು ಪ್ರಶಂಸಿಸಿದ್ದಾರೆ.

ಭಾರತ ಮೂಲದ ಆಕಾಶ್ ಬೋಬ್ಬಾ, ಎಡ್ವರ್ಡ್ ಕೋರಿಸ್ಟೈನ್, ಈಥಾನ್ ಶಾವೋ ಟ್ರಾನ್ , ಲ್ಯೂಕ್ ಫ್ಯಾರಿಟರ್, ಗೌಟಿಯರ್ ಕೋಲ್ ಕಿಲಿಯನ್, ಗವಿನ್ ಕ್ಲಿಗರ್ ಅವರು ಡೋಜೆ ಇಲಾಖೆಗೆ ನೇಮಕವಾದ ಯುವ ಎಂಜಿನಿಯರುಗಳಾಗಿದ್ದಾರೆ. ಕಿಂಚಿತ್ತೂ ಅನುಭವವೇ ಇಲ್ಲ, ಇನ್ನೂ ಅರ್ಧಂಬರ್ಧ ಓದಿರುವ ಈ ಯುವಕ ರನ್ನು ಯಾವ ಪುರುಷಾ ರ್ಥಕ್ಕೆ ಡೋ ಜೆಯಂತಹ ಗಂಭೀರ ಇಲಾ ಖೆಗೆ ಸೇರಿ ಸಿಕೊಂಡಿದ್ದೀರಿ ಎಂಬುದು ಕೆಲವರ ಗಂಭೀರ ಪ್ರಶ್ನೆ. ಈತ ಅಸಾಮಾನ್ಯ ವ್ಯಕ್ತಿ ಮಾತ್ರವಲ್ಲ, ಒಬ್ಬ ಜೀನಿಯಸ್ ಎಂದು ಈತನ ಮಾಜಿ ಕ್ಲಾಸ್ ಮೇಟ್‌ವೊಬ್ಬ ಹೇಳಿದ್ದಾನೆ. ಹಲವು ವ್ಯಕ್ತಿಗಳು ಸೇರಿ ಹಲವು ದಿನಗಳ ತಯಾರಿಸಿದ ಕೋಡಿಂಗ್ ಪ್ರಾಜೆಕ್ಟ್ ಅನ್ನು ಆಕಾಶ್ ಹೇಗೆ ಒಂದೇ ರಾತ್ರಿಯಲ್ಲಿ ಹೊಸದಾಗಿ ಮಾಡಿದ ಎನ್ನುವ ಘಟನೆಯನ್ನು ವಿವರಿಸಿದ್ದಾನೆ.

ಬರ್ಕ್ಲೀಯಲ್ಲಿ ಪ್ರಾಜೆಕ್ಟ್ ಮಾಡುವಾಗ ನಾನು ಅಕಸ್ಮಾತ್ ಆಗಿ ಇಡೀ ಕೋಡ್‌ಬೇಸ್ ಅನ್ನೇ ಡಿಲೀಟ್ ಮಾಡಿಬಿಟ್ಟೆ. ಆಗ ಬಹಳ ಗಾಬರಿಗೊಂಡಿದ್ದೆ. ಆಗ ಆಕಾಶ್ ಕಂಪ್ಯೂಟರ್‌ನ ಸ್ಕ್ರೀನ್ ಅನ್ನು ತದೇಕಚಿತ್ತದಿಂದ ನೋಡಿ, ಬಳಿಕ ತಾನೇ ಕೋಡಿಂಗ್ ಬರೆಯತೊಡಗಿದ. ಎಲ್ಲಾವನ್ನೂ ಹೊಸದಾಗಿ ಬರೆದ. ಅದೂ ಒಂದೇ ರಾತ್ರಿಯಲ್ಲಿ ಆತ ಬರೆದಿದ್ದ ಕೋಡಿಂಗ್, ಹಿಂದಿನದಕ್ಕಿಂತಲೂ ಉತ್ತಮವಾಗಿತ್ತು. ನಾವು ಬೇಗನೇ ಪ್ರಾಜೆಕ್ಟ್ ಸಬ್ಮಿಟ್ ಮಾಡಿ ಕ್ಲಾಸ್‌ಗೆ ಮೊದಲು ಬಂದೆವು, ಎಂದು ಝೂಂಗ್ ತನ್ನ ಸೋಷಿಯಲ್ ಮೀಡಿಯಾ ಅಕೌಂಟ್‌ನಲ್ಲಿ ಬರೆದಿದ್ದಾನೆ.

### ಆಕಾಶ್ ಬೋಬ್ಬಾ ಎನ್ನುವ ಜೀನಿಯಸ್

**ಈ ಯುವಕರ ಪೈಕಿ ಆಕಾಶ್ ಬೋಬ್ಬಾ ಬಗ್ಗೆ ಒಂದಷ್ಟು ಪ್ರಶಂಸೆಯ ಮಾತುಗಳು ಕೇಳಿಬರುತ್ತಿವೆ. ಈತ ಭಾರತ ಮೂಲದವನಾಗಿದ್ದರೂ, ಅಮೆರಿಕದಲ್ಲೇ ಹುಟ್ಟಿ ಬೆಳೆದಿದ್ದಾನೆ. ಯುಸಿ ಬರ್ಕಲೀ ಕಾಲೇಜಿನಲ್ಲಿ ಓದಿರುವ ಹುಡುಗ. ಮೆಟಾ, ಪಲಂಟಿರ್, ಬ್ರಿಡ್ಜ್‌ವಾಟರ್ ಅಸೋಸಿಯೇಟ್ಸ್ ಕಂಪನಿಗಳಲ್ಲಿ ಇಂಟರ್ನ್ ಆಗಿ ಕೆಲಸ ಮಾಡಿದ್ದಾನೆ. ಆರ್ಟಿಫಿಶಿಯಲ್ ಇಂಟೆಲಿಜೆನ್ಸ್, ಡಾಟಾ ಅನಾಲಿಟಿಕ್ಸ್, ಫೈನಾನ್ಷಿಯಲ್ ಮಾಡಲಿಂಗ್‌ಗಳನ್ನು ಕಲಿತಿದ್ದಾನೆ.**

# 200 ಸಸಿ ನೆಟ್ಟು ಪೋಷಿಸುವ ಷರತ್ತಿನೊಂದಿಗೆ ಕಳ್ಳನಿಗೆ ಜಾಮೀನು ನೀಡಿದ ಕೋರ್ಟ್



**ಕಟಕ್:** ಕಳ್ಳತನದ ಆರೋಪ ಹೊತ್ತಿರುವ ವ್ಯಕ್ತಿಯೊಬ್ಬನಿಗೆ ಒರಿಸ್ಸಾ ಹೈಕೋರ್ಟ್ ಜಾಮೀನು ಮಂಜೂರು ಮಾಡಿ ದ್ದು, ಆತ ತನ್ನ ಗ್ರಾಮ ಮತ್ತು ಸುತ್ತಮುತ್ತ ಕನಿಷ್ಠ 200 ಸಸಿಗಳನ್ನು ನೆಟ್ಟು ಎರಡು ವರ್ಷಗಳ ಕಾಲ ಅವುಗಳನ್ನು ನಿರ್ವಹಿಸಬೇಕು ಎಂಬ ಷರತ್ತಿನ ಮೇಲೆ ಜಾಮೀನು ನೀಡಿದೆ. ವ್ಯಕ್ತಿಗೆ ಜಾಮೀನು ನೀಡಲು ಹಲವಾರು ಷರತ್ತುಗಳಲ್ಲಿ ಇದೂ ಒಂದಾಗಿತ್ತು. ಕಳೆದ ವರ್ಷ ಡಿಸೆಂಬರ್ 25 ರಂದು ವಿದ್ಯುತ್ ಸರಬರಾಜು ಕಂಪನಿಯ ಕನಿಷ್ಠ ಆರು ವಿದ್ಯುತ್ ಕಂಬಗಳನ್ನು ಕದ್ದ ಆರೋಪದಲ್ಲಿ ಕೋಲಬಿರಾ ಪೊಲೀಸರು ಬಂಧಿಸಿದ್ದ ಜಾರ್ಸುಗುಡಾ ಜಿಲ್ಲೆಯ ಮಾನಸ್ ಅತಿ ಅವರ ಜಾಮೀನು ಅರ್ಜಿಯನ್ನು ನ್ಯಾಯಮೂರ್ತಿ ಎಸ್ ಕೆ ಪಾಣಿಗ್ರಾಹಿ ಅಂಗೀಕರಿಸಿದ್ದಾರೆ.

ಪ್ರಕರಣದ ಮೆರಿಟ್‌ಗೆ ಹೋಗದೆ, ಪ್ರಕರಣದ ಸಹ ಆರೋಪಿಯ ಜಾಮೀನು ಈಗಾಗಲೇ ವಿಸ್ತರಿಸಿರುವ ಅಂಶವನ್ನು ಪರಿಗಣಿಸದೆ, ಕೆಲವು ಷರತ್ತುಗಳ ಮೇಲೆ ಜಾಮೀನು ನೀಡುವಂತೆ ಕೆಳ ನ್ಯಾಯಾಲಯಕ್ಕೆ ಹೈಕೋರ್ಟ್ ಸೂಚಿಸಿದೆ. ಪ್ರತಿ ಹದಿನೈದು ದಿನಗಳಿಗೊಮೆ ಪೊಲೀಸರ ಮುಂದೆ ಹಾಜರಾಗುವಂತೆ ಮತ್ತು ಯಾವುದೇ ಕ್ರಿಮಿನಲ್ ಚಟುವಟಿಕೆಯಲ್ಲಿ ಪಾಲ್ಗೊಳ್ಳದಂತೆ ಮತ್ತು ಸಾಕ್ಷ್ಯವನ್ನು ಹಾಳು ಮಾಡದಂತೆ ಹೈಕೋರ್ಟ್ ಆರೋಪಿಯನ್ನು ಕೇಳಿದೆ. ಅರ್ಜಿದಾರರು (ಮನಸ್ ಆಟಿ) ತಮ ಗ್ರಾಮದ ಸುತ್ತಮುತ್ತಲಿನ ಸರ್ಕಾರಿ ಭೂಮಿ ಅಥವಾ ಸಮುದಾಯದ ಜಮೀನು ಅಥವಾ ಯಾವುದೇ ಖಾಸಗಿ ಜಮೀನಿನಲ್ಲಿ ಮಾವು, ಬೇವು, ಹುಣಸೆ ಮುಂತಾದ ಸ್ಥಳೀಯ ತಳಿಗಳ 200 ಸಸಿಗಳನ್ನು ನೆಡಬೇಕು, ಎಂದು ಹೈಕೋರ್ಟ್ ಸ್ಥಳೀಯ ಪೊಲೀಸ್, ಅರಣ್ಯ, ಕಂದಾಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದೆ. ಆಟಿಗೆ ಸಸಿಗಳನ್ನು ಪೂರೈಸಲು ಜಿಲ್ಲಾ ನರ್ಸರಿಗೆ ಸೂಚಿಸಿದ ನ್ಯಾಯಾಲಯವು ತೋಟಕ್ಕೆ ಜಮೀನು ಗುರುತಿಸಲು ಸಹಾಯ ಮಾಡಲು ಕಂದಾಯ ಅಧಿಕಾರಿಗಳಿಗೆ ಸೂಚಿಸಿದೆ. ಈ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದರೆ ಜಾಮೀನು ರದ್ದುಗೊಳಿಸಲಾಗುವುದು ಎಂದು ಹೈಕೋರ್ಟ್ ಆದೇಶದಲ್ಲಿ ಎಚ್ಚರಿಸಿದೆ.


# ಅಕ್ರಮ ವಲಸಿಗರನ್ನು ಹೊರದಬ್ಬುತ್ತಿರುವ ಟ್ರಂಪ್ ಆಡಳಿತ

## ಭಾರತೀಯ ವಲಸಿಗರನ್ನು ಕರೆತರುತ್ತಿರುವ ಯುಎಸ್ C-17 ಮಿಲಿಟರಿ ವಿಮಾನ ಹೇಗಿದೆ 205 ಜನರಿಗೆ ಒಂದೇ ಟಾಯ್ಲೆಟ್

**ವಾಷಿಂಗ್ಟನ್:** ಅಕ್ರಮ ವಲಸಿಗರ ವಿರುದ್ಧ ಯುದ್ಧ ಸಾರಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಮೆಕ್ಸಿಕೋ, ಕೊಲಂಬಿಯಾ ಸೇರಿದಂತೆ ಹಲವು ದೇಶಗಳ ಅಕ್ರಮ ವಲಸಿಗರನ್ನು ಹೊರದಬ್ಬುತ್ತಿದ್ದಾರೆ. ಇದೀಗ 205 ಅಕ್ರಮ ಭಾರತೀಯ ವಲಸಿಗರನ್ನೂ ಡೊನಾಲ್ಡ್ ಟ್ರಂಪ್ ಆಡಳಿತ ಭಾರತಕ್ಕೆ ಕಳುಹಿಸಿಕೊಡುತ್ತಿದೆ.

ಅಮೆರಿಕದ ರಾಷ್ಟ್ರೀಯ ಹಿತಾಸಕ್ತಿಗೆ ಅನುಗುಣವಾಗಿ ಅಕ್ರಮ ವಲಸಿಗರನ್ನು ಮತ್ತು ಸೂಕ್ತ ದಾಖಲೆಗಳಿಲ್ಲದ ವಿದೇಶಿ ಪ್ರಜೆಗಳನ್ನು ದೇಶದಿಂದ ಹೊರ ಹಾಕುವುದು ನಮ್ಮ ಹಕ್ಕು. ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಆದರೆ ಈ ಅಕ್ರಮ ವಲಸಿ ಗರನ್ನು ನಾಗರಿಕ ವಿಮಾನಗಳ ಬದಲಾಗಿ ಅಮೆರಿಕದ ವಾಯುಪಡೆಯ C-17 ಯುದ್ಧ ವಿಮಾನದಲ್ಲಿ ಕಳುಹಿಸಿಕೊಡುತ್ತಿರುವುದು ಇದೀಗ ಜಾಗತಿಕ ಚರ್ಚೆಗೆ ಕಾರಣವಾಗಿದೆ.





**ದೇಶದಿಂದ ಹೊರ ಹಾಕುವುದು ನಮ್ಮ**

ಅಮೆರಿಕದಿಂದ ಹೊರಹಾಕಲಾದ 205 ಅಕ್ರಮ ಭಾರತೀಯ ವಲಸಿಗರನ್ನೂ ಇದೇ C-17 ಯುದ್ಧ ವಿಮಾನದಲ್ಲಿ ಕಳುಹಿಸಿಕೊಡಲಾಗುತ್ತಿದ್ದು, ಟೆಕ್ಸಾಸ್‌ನಿಂದ ಹೊರಟಿರುವ C-17 ಯುದ್ಧ ವಿಮಾನವು, ಬುಧವಾರ ಅಮೃತ್‌ಸರ್ ತಲುಪಲಿದೆ ಎಂದು ಮೂಲಗಳು ಖಚಿತಪಡಿಸಿವೆ. ಅಕ್ರಮ ವಲಸಿಗರನ್ನು ಹೊರಹಾಕಲು ಡೊನಾಲ್ಡ್ ಟ್ರಂಪ್ C-17 ಯುದ್ಧ ವಿಮಾನ ಬಳಸುತ್ತಿರುವುದು ಇದೀಗ ಚರ್ಚೆಯಾಗುತ್ತಿದ್ದು, C-17 ಯುದ್ಧ ವಿಮಾನದ ಬಗ್ಗೆಯೂ ಜನರು ಚರ್ಚಿಸುತ್ತಿದ್ದಾರೆ.

**C-17 ಯುದ್ಧ ವಿಮಾನ:** C-17 Globemaster III ಅಮೆರಿಕದ ವಾಯುಪಡೆಯು ಬಳಸುವ ಅತ್ಯಂತ ಬೃಹತ್ ಮಿಲಿಟರಿ ಸಾರಿಗೆ ವಿಮಾನವಾಗಿದೆ. ಇದನ್ನು ರಕ್ಷಣಾ ಪಡೆಗಳು, ಸರಕುಗಳು, ವೈದ್ಯಕೀಯ ನೆರವು ಏರ್ ಡ್ರಾಪ್‌ಗಳಿಗೆ ಬಳಸಲಾಗುತ್ತದೆ.

**ಇತಿಹಾಸ:** C-17 ಯುದ್ಧ ವಿಮಾನವನ್ನು 1980-90ರ ದಶಕದ ಅವಧಿಯಲ್ಲಿ ಮೆಕ್‌ಡೊನೆಲ್ ಡೌಗ್ಲಾಸ್ ಎಂಬ ಏವಿಯೇಶನ್ ತಜ್ಞ ಅಭಿವೃದ್ಧಿಪಡಿಸಿದರು. ಇದರ ಮೊದಲ ಉತ್ಪಾದನಾ ಮಾದರಿಯನ್ನು 1993ರಲ್ಲಿ ಚಾರ್ಲ್ಸ್‌ನರ್ ಏರ್ ಫೋರ್ಸ್ ಬೇಸ್‌ಗೆ ಹಸ್ತಾಂತರಿಸಲಾಗಿತ್ತು. ಅ-17 ಯುದ್ಧ ವಿಮಾನವನ್ನು ಆಪರೇಷನ್ ಎಂಡ್ಯೂರಿಂಗ್ ಫ್ರೀಡಮ್ ಮತ್ತು ಆಪರೇಷನ್ ಇರಾಕಿ ಫ್ರೀಡಮ್ ಸೇರಿದಂತೆ ಹಲವು ಕಾರ್ಯಾಚರಣೆಗಳಲ್ಲಿ ಅಮೆರಿಕ ವಾಯುಪಡೆಯು ಪರಿಣಾಮಕಾರಿಯಾಗಿ ಬಳಸಿಕೊಂಡಿದೆ. ಅಮೆರಿಕವು C-17 ಯುದ್ಧ ವಿಮಾನವನ್ನು ಅನ್ಯ ದೇಶಗಳಿಗೂ ಮಾರಾಟ ಮಾಡುತ್ತದೆ. ಭಾರತ ಕೂಡ ಅಮೆರಿಕದಿಂದ C-17 ಯುದ್ಧ ವಿಮಾನಗಳನ್ನು ಖರೀದಿಸಿದೆ.

**ಉಪಯೋಗಗಳು:** C-17 ಯುದ್ಧ ವಿಮಾನವನ್ನು ಪ್ರಪಂಚದಾದ್ಯಂತ ರಕ್ಷಣಾ ಪಡೆಗಳು, ಸರಕುಗಳನ್ನು ಸಾಗಿಸಲು ಬಳಸಲಾಗುತ್ತದೆ.

### ಅತ್ಯಂತ ಬಲಿಷ್ಠ ಸಾಧನ

**ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತವು ಅಕ್ರಮ ವಲಸಿಗರನ್ನು ದೇಶದಿಂದ ಹೊರಹಾಕಲು ನಾಗರಿಕ ವಿಮಾನಗಳ ಬದಲಿಗೆ, ಅಮೆರಿಕದ ವಾಯುಪಡೆಯ C-17 ಯುದ್ಧ ವಿಮಾನಗಳನ್ನು ಬಳಸುತ್ತಿರುವುದು ಜಾಗತಿಕವಾಗಿ ಚರ್ಚೆಗೆ ಕಾರಣವಾಗಿದೆ. 205 ಅಕ್ರಮ ಭಾರತೀಯ ವಲಸಿಗರನ್ನೂ C-17 ಯುದ್ಧ ವಿಮಾನದಲ್ಲೇ ಅಮೆರಿಕವು ಭಾರತಕ್ಕೆ ಕಳುಹಿಸಿಕೊಡುತ್ತಿದೆ. C-17 ಮಿಲಿಟರಿ ವಿಮಾನದ ಬಗ್ಗೆ ಇದೀಗ ಜಾಗತಿಕವಾಗಿ ಚರ್ಚೆಯಾಗುತ್ತಿದ್ದು, ಅಮೆರಿಕದ ವಾಯುಪಡೆಯ ಅತ್ಯಂತ ಬಲಿಷ್ಠ ಸಾಧನವಾಗಿರುವ C-17 ಯುದ್ಧ ವಿಮಾನ.**

- 205 ಅಕ್ರಮ ಭಾರತೀಯ ವಲಸಿಗರಿಗೆ ಗೇಟ್ ಪಾಸ್ ನೀಡಿದ ಅಮೆರಿಕ
- C-17 ಯುದ್ಧ ವಿಮಾನದಲ್ಲಿ ಸ್ವದೇಶಕ್ಕೆ ಮರಳುತ್ತಿರುವ ಭಾರತೀಯ ವಲಸಿಗರು
- ಯುಎಸ್ ವಾಯುಪಡೆಯ್ಚ-17 ಯುದ್ಧ ವಿಮಾನದ ಬಗ್ಗೆ ಮಾಹಿತಿ

# ಮಿನಿ ನ್ಯೂಸ್

### ಮಹಾಕುಂಭದಲ್ಲಿ ಇಂದು ಪವಿತ್ರ ಸ್ನಾನ ಮಾಡಲಿದ್ದಾರೆ ಮೋದಿ

**ಲಕ್ನೋ:** ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭ ಮೇಳಕ್ಕೆ ಪ್ರಧಾನಿ ನರೇಂದ್ರ ಮೋದಿ ನಾಳೆ ಭೇಟಿ ನೀಡಿ ಪವಿತ್ರ ಸ್ನಾನ ಮಾಡಲಿದ್ದಾರೆ. ಪ್ರಧಾನಿ ಇಂದು ಬೆಳಗ್ಗೆ 10 ಗಂಟೆಗೆ ಮಹಾಕುಂಭವನ್ನು ತಲುಪಲಿದ್ದಾರೆ. ಮಾಘ ಮಾಸದ ಅಷ್ಟಮಿಸಯಂದು ಅವರು ಪವಿತ್ರ ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡಲಿದ್ದಾರೆ. ಸ್ನಾನದ ನಂತರ ಸಂಗಮದಲ್ಲಿ ಗಂಗೆಯನ್ನು ಪೂಜಿಸಲಿದ್ದಾರೆ. ನಂತರ ಅವರು ಅರೈಲ್ ಘಾಟ್ ನಿಂದ ದೋಣಿ ಮೂಲಕ ಸಂಗಮ್‌ಗೆ ಹೋಗಲಿದ್ದಾರೆ. ಒಟ್ಟಾರೆಯಾಗಿ, ಪ್ರಧಾನಿ ಮೋದಿ ಸುಮಾರು ಒಂದು ಗಂಟೆ ಪ್ರಯಾಗ್‌ರಾಜ್‌ನಲ್ಲಿ ಇರಲಿದ್ದಾರೆ.

ಮಹಾ ಕುಂಭಮೇಳಕ್ಕೂ ಮುನ್ನ, 2024 ರ ಡಿಸೆಂಬರ್ 13 ರಂದು ಮೋದಿ ಸಂಗಮದ ದಡದಲ್ಲಿ ಗಂಗಾ ನದಿಗೆ ಆರತಿ ಮತ್ತು ಪೂಜೆ ಸಲ್ಲಿಸಿದ್ದರು ಮತ್ತು ಈ ಬಹತ್ ಕಾರ್ಯಕ್ರಮ ಯಶಸ್ವಿಯಾಗಿ ಪೂರ್ಣಗೊಳ್ಳಲಿ ಎಂದು ಪ್ರಾರ್ಥಿಸಿದ್ದರು. ಅವರು 2019 ರ ಕುಂಭ ಮೇಳದ ಆರಂಭದಲ್ಲಿ ಮತ್ತು ನಂತರವೂ ಬಂದಿದ್ದರು. ಮೂರು ಸೇನಾ ಹೆಲಿಕಾಪ್ಟರ್‌ಗಳು ಅರೈಲ್‌ನಲ್ಲಿರುವ ಡಿಪಿಎಸ್ ಮೈದಾನದ ಹೆಲಿಪ್ಯಾಡ್‌ನಲ್ಲಿ ಇಳಿಯಲಿದ್ದು, ಅಲ್ಲಿಂದ ಕಾರಿನಲ್ಲಿ ತೆರಳಲಿದ್ದಾರೆ. ಇಲ್ಲಿಂದ ಅವರು ಡಿಪಿಎಸ್ ಹೆಲಿಪ್ಯಾಡ್ ಮೂಲಕ ಪ್ರಯಾಗ್‌ರಾಜ್ ವಿಮಾನ ನಿಲ್ದಾಣವನ್ನು ತಲುಪಲಿದ್ದಾರೆ. ಪ್ರಧಾನಿ ಮೋದಿ ಅವರು ಮಧ್ಯಾಹ್ನ 12.30 ಕ್ಕೆ ವಾಯುಪಡೆಯ ವಿಮಾನದ ಮೂಲಕ ಪ್ರಯಾಗ್‌ರಾಜ್‌ನಿಂದ ಹಿಂತಿರುಗಲಿದ್ದಾರೆ.

### ಭೋಪಾಲ್‌ನಲ್ಲಿ ಭಿಕ್ಷಾಟನೆ ಸಂಪೂರ್ಣ ನಿಷೇಧ

**ಭೋಪಾಲ್:** ಮಧ್ಯಪ್ರದೇಶದ ರಾಜಧಾನಿ ಭೋಪಾಲ್‌ನಲ್ಲಿ ಅಧಿಕಾರಿಗಳು ಭಿಕ್ಷಾಟನೆಯನ್ನು ನಿಷೇಧಿಸಿದ್ದಾರೆ ಮತ್ತು ಅದರಲ್ಲಿ ಭಾಗಿಯಾಗಿರುವವರು ಮತ್ತು ಭಿಕ್ಷೆ ನೀಡುವವರ ವಿರುದ್ಧ ದಂಡದ ಕ್ರಮದ ಎಚ್ಚರಿಕೆ ನೀಡಿದ್ದಾರೆ. ರಾಜ್ಯದ ಇಂದೋರ್ ಜಿಲ್ಲೆಯಲ್ಲಿ ಈಗಾಗಲೇ ಭಿಕ್ಷಾಟನೆ ನಿಷೇಧಿಸಲಾಗಿದೆ. ಭೋಪಾಲ್ ಜಿಲ್ಲಾಧಿಕಾರಿ ಕೌಶಲೇಂದ್ರ ವಿಕ್ರಮ್ ಸಿಂಗ್ ಅವರು ಭಾರತೀಯ ನಾಗ್ರಿಕ್ ಸುರಕ್ಷಾ ಸಂಹಿತೆಯ ಸೆಕ್ಷನ್ 163 (2) ಅಡಿಯಲ್ಲಿ ಹೊರಡಿಸಿದ ಆದೇಶದಲ್ಲಿ ಭಿಕ್ಷಾಟನೆಯನ್ನು ನಿಷೇಧಿಸಿದ್ದಾರೆ. ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಭಿಕ್ಷೆ ಬೇಡುವ ಹಲವಾರು ಭಿಕ್ಷುಕರು ಅಪರಾಧ ಚಟುವಟಿಕೆಗಳಲ್ಲಿ ಮತ್ತು ಮಾದಕ ವ್ಯಸನದಲ್ಲಿ ತೊಡಗಿರುವುದು ಕಂಡುಬಂದಿದೆ.

ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಅವರ ಉಪಸ್ಥಿತಿಯು ಅಪಘಾತಗಳ ಭಯವನ್ನು ಸಷ್ಟಿಸುತ್ತದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಇಡೀ ಭೋಪಾಲ್ ಜಿಲ್ಲೆಯಲ್ಲಿ ಭಿಕ್ಷಾಟನೆ ಮತ್ತು ಭಿಕ್ಷೆ ನೀಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಅದು ಹೇಳಿದೆ. ಭಿಕ್ಷುಕರಿಗೆ ಭಿಕ್ಷೆಯ ರೂಪದಲ್ಲಿ ಏನನ್ನಾದರೂ ನೀಡುವ ಅಥವಾ ಅವರಿಂದ ಯಾವುದೇ ವಸ್ತುಗಳನ್ನು ಖರೀದಿಸುವ ವ್ಯಕ್ತಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಆದೇಶದಲ್ಲಿ ತಿಳಿಸಲಾಗಿದೆ. ಭಿಕ್ಷಾಟನೆಯ ವಿರುದ್ಧ ಆಡಳಿತದ ನಿಷೇಧ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಸಂಬಂಧಿತ ಕಾನೂನು ನಿಬಂಧನೆಗಳ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗುವುದು ಎಂದು ಅದು ಹೇಳಿದೆ. ಸಮುದಾಯ ಆರೋಗ್ಯ ಕೇಂದ್ರ ಕೋಲಾರದಲ್ಲಿರುವ (ಭೋಪಾಲ್‌ನಲ್ಲಿ) ಆಶ್ರಯ ಸೌಲಭ್ಯವನ್ನು ಅವರ ವಸತಿಗಾಗಿ ಭಿಕ್ಷುಕರ ಮನೆಯಾಗಿ ಕಾಯ್ದಿರಿಸಲಾಗಿದೆ ಎಂದು ಅದು ಸೇರಿಸಲಾಗಿದೆ.

### 237 ಪ್ರಯಾಣಿಕರಿದ್ದ ಅಂತಾರಾಷ್ಟ್ರೀಯ ವಿಮಾನಕ್ಕೆ ಬಾಂಬ್ ಬೆದರಿಕೆ

**ಚೆನ್ನೈ:** ಇಲ್ಲಗೆ ಬರುತ್ತಿದ್ದ ಅಂತರಾಷ್ಟ್ರೀಯ ವಿಮಾನಕ್ಕೆ ಬಾಂಬ್ ಬೆದರಿಕೆಯ ಹಿನ್ನಲೆಯಲ್ಲಿ ವಿಮಾನ ನಿಲ್ದಾಣದ ಅಧಿಕಾರಿಗಳು ಆತಂಕಗೊಂಡ ಘಟನೆ ನಡೆದಿದೆ. ಸುಮಾರು 237 ಪ್ರಯಾಣಿಕರಿದ್ದ ವಿಮಾನವನ್ನು ಸುರಕ್ಷಿತವಾಗಿ ಇಳಿದ ನಂತರ ಸಂಪೂರ್ಣವಾಗಿ ಪರಿಶೀಲಿಸಲಾಯಿತು ಆದರೆ ವಿಮಾನದಲ್ಲಿ ಯಾವುದೇ ಸ್ಫೋಟಕ ವಸ್ತುಗಳು ಕಂಡುಬಂದಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮಾಹಿತಿಯ ಆಧಾರದ ಮೇಲೆ ಪ್ರಯಾಣಿಕರ ಸಾಮಾನು ಸರಂಜಾಮುಗಳನ್ನು ಸಂಪೂರ್ಣವಾಗಿ ಸ್ಕ್ಯಾನ್ ಮಾಡಲಾಯಿತು ನಂತರ ಇದು ಹುಸಿಕರೆ ಎಂದು ತಿಳಿದುಬಂತು ಎಂದು ಅವರು ಹೇಳಿದರು. ಇದಲ್ಲದೆ ಮುಂಜಾನೆ ದಟ್ಟ ಮಂಜಿನಿಂದಾಗಿ ವಿಮಾನ ನಿಲ್ದಾಣದಲ್ಲಿ ವಿಮಾನಗಳ ಆಗಮನ ಮತ್ತು ನಿರ್ಗಮನಕ್ಕೆ ಅಡ್ಡಿಯುಂಟಾಗಿದ್ದು, ಕೆಲವು ಅಂತರಾಷ್ಟ್ರೀಯ ವಿಮಾನಗಳನ್ನು ಹತ್ತಿರದ ನಗರಗಳಿಗೆ ತಿರುಗಿಸಲು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬೆಳಿಗ್ಗೆ 6-7 ರ ನಡುವೆ ವಿಮಾನ ಸಂಚಾರಕ್ಕೆ ಅಡಚಣೆ ಉಂಟಾಗಿದೆ ಮಸ್ಕತ್ ಮತ್ತು ದುಬೈ ಸೇರಿದಂತೆ ವಿವಿಧ ಸ್ಥಾನಗಳಿಂದ ಒಳಬರುವ ಅಂತರರಾಷ್ಟ್ರೀಯ ವಿಮಾನಗಳನ್ನು ಹತ್ತಿರದ ತಿರುಪತಿ ಮತ್ತು ಹೈದರಾಬಾದ್ ವಿಮಾನ ನಿಲ್ದಾಣಗಳಿಗೆ ತಿರುಗಿಸಲಾಯಿತು ಎಂದು ಅವರು ಹೇಳಿದರು. ಕೆಲವು ದೇಶೀಯ ವಿಮಾನಗಳು ವಿಳಂಬವನ್ನು ಅನುಭವಿಸಿದವು ಎಂದು ಅವರು ತಿಳಿಸಿದರು.

### ಮಾಘ ಸಪ್ತಮಿ: ಚಂದ್ರಭಾಗ ಕಡಲ ತೀರದಲ್ಲಿ ಭಕ್ತರಿಂದ ಪವಿತ್ರ ಸ್ನಾನ

**ಒಡಿಶಾ:** ಮಾಘ ಸಪ್ತಮಿಯ ಪ್ರಯುಕ್ತ ಮಂಗಳವಾರ ಒಡಿಶಾದ ಪುರಿ ಜಿಲ್ಲೆಯ ಕೊನಾರ್ಕ್‌ನಲ್ಲಿರುವ ಚಂದ್ರಭಾಗ ಸಮುದ್ರ ತೀರದಲ್ಲಿ ಸಾವಿರಾರು ಜನರು ಪವಿತ್ರ ಸ್ನಾನ ಮಾಡಿದ್ದಾರೆ.

ಸ್ನಾನದ ಬಳಿಕ ಭಕ್ತರು ಮಹಾದೇವನಿಗೆ ಪೂಜೆ ಸಲ್ಲಿಸಿದ್ದು, ಕೊನಾರ್ಕ್ ಸೂರ್ಯ ದೇವಾಲಯದ ಆವರಣದಲ್ಲಿರುವ ನವಗ್ರಹಗಳಿಗೂ ಪ್ರಾರ್ಥನೆ ಸಲ್ಲಿಸಿದ್ದಾರೆ. ಮಂಗಳವಾರ ಬೆಳಿಗ್ಗೆ 4.37ರಿಂದಲೇ ಪವಿತ್ರ ಸ್ನಾನಕ್ಕೆ ಅವಕಾಶ ನೀಡಲಾಗಿತ್ತು. ಚಂದ್ರಭಾಗ ಸಮುದ್ರ ತೀರದಲ್ಲಿ ಪವಿತ್ರ ಸ್ನಾನ ಮಾಡಿದರೆ ಚರ್ಮ ರೋಗಗಳು ಗುಣವಾಗುತ್ತದೆ ಮತ್ತು ಪಾಪಗಳನ್ನು ತೊಳೆಯುತ್ತದೆ ಎಂದು ಭಕ್ತರು ನಂಬಿದ್ದಾರೆ.

ಚಂದ್ರಭಾಗ ಸಮುದ್ರ ತೀರದಲ್ಲಿ ಹಬ್ಬದ ಆಚರಣೆಗಾಗಿ ಪುರಿ ಜಿಲ್ಲಾಡಳಿತವು ಎಲ್ಲಾ ವ್ಯವಸ್ಥೆಗಳನ್ನು ಏರ್ಪಡಿಸಿತ್ತು. ಪುರಿ ಜಿಲ್ಲಾಧಿಕಾರಿ ಮತ್ತು ಪೊಲೀಸ್ ವರಿಷ್ಠಾಧಿಕಾರಿ ಸ್ಥಳದಲ್ಲೇಯೇ ಇದ್ದು ವ್ಯವಸ್ಥೆಗಳ ಮೇಲ್ವಿಚಾರಣೆ ನಡೆಸಿದರು ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ.

ಕಾರ್ಯಕ್ರಮವನ್ನು ಸುಗಮವಾಗಿ ನಡೆಸಲು ಪೊಲೀಸರನ್ನು ನಿಯೋಜಿಸಲಾಗಿತ್ತು. ಯಾವುದೇ ಅಹಿತಕರ ಘಟನೆ ನಡೆಯದಂತೆ ನೋಡಿಕೊಳ್ಳಲು ನದಿಯ ಬಳಿ 20 ಜೀವರಕ್ಷಕರನ್ನು ಸಹ ನಿಯೋಜಿಸಲಾಗಿತ್ತು. ಸೂಕ್ತ ಸಂಚಾರ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮಾಘ ಸಪ್ತಮಿಯನ್ನು ಸೂರ್ಯ ದೇವರ ಜನ್ಮದಿನವೆಂದು ಆಚರಿಸಲಾಗುತ್ತದೆ. ಹಿಂದೂ ಕ್ಯಾಲೆಂಡರ್‌ನ 'ಮಾಘ' ತಿಂಗಳ ಏಳನೇ ದಿನದಂದು ಈ ಹಬ್ಬವನ್ನು ಆಚರಿಸಲಾಗುತ್ತದೆ.

# ಕಣ್ಣಪ್ಪ ಕೊನೆಗೂ ಪ್ರಭಾಸ್ ಲುಕ್ ರಿವೀಲ್



ಡಾರ್ಲಿಂಗ್ ಪ್ರಭಾಸ್ ಅವರು 'ಕಲ್ಕಿ' ಆಗಿ ಸಕ್ಸಸ್ ಕಂಡ ಮೇಲೆ ರುದ್ರನಾಗಿ ಅಭಿಮಾನಿಗಳ ಮುಂದೆ ಬರುತ್ತಿದ್ದಾರೆ. 'ಕಣ್ಣಪ್ಪ' ಸಿನಿಮಾದಲ್ಲಿ ಕೊನೆಗೂ ಪ್ರಭಾಸ್ ಲುಕ್ ರಿವೀಲ್ ಆಗಿದೆ. ಚಿತ್ರದ ನಯಾ ಪೋಸ್ಟರ್ ರಿವೀಲ್ ಆಗಿದೆ. ಮಂಚು ವಿಷ್ಣು ಹೀರೋ ಆಗಿ ನಟಿಸುತ್ತಿರುವ ಚಿತ್ರದಲ್ಲಿ ಪ್ರಭಾಸ್ ಅತಿಥಿ ಪಾತ್ರದಲ್ಲಿ ನಟಿಸಿದ್ದಾರೆ. 100 ಕೋಟಿ ರೂ. ಬಜೆಟ್‌ನಲ್ಲಿ ನಿರ್ಮಾಣ ಆಗುತ್ತಿರುವ ಈ ಚಿತ್ರದಲ್ಲಿ ಪ್ರಭಾಸ್ ರುದ್ರನಾಗಿ ಕಾಣಿಸಿಕೊಂಡಿದ್ದಾರೆ. ಅವರ ಪಾತ್ರದ ಫಸ್ಟ್ ಲುಕ್ ಬಿಡುಗಡೆಯಾಗಿದೆ. ಹರಡಿದ ತಲೆಗೂದಲು, ಕೈಯಲ್ಲಿ ಅರ್ಧ ಚಂದ್ರಾಕೃತಿಯ ಕೋಲು ಹಿಡಿದು ಪ್ರಭಾಸ್ ಕಾಣಿಸಿಕೊಂಡಿದ್ದಾರೆ. ಕೊರಳಲ್ಲಿ ರುದ್ರಾಕ್ಷಿ ಮಾಲೆ ಇದೆ. ಹೆಗಲಿಗೆ ಕೇಸರಿ ವಸ್ತ್ರವನ್ನು ಹೊದ್ದಿದ್ದಾರೆ. ಹಣೆಯಲ್ಲಿ ವಿಭೂತಿ ಇಟ್ಟುಕೊಂಡು ನಗುತ್ತಾ ಪ್ರಭಾಸ್ ಅವರು ಕಾಣಿಸಿಕೊಂಡಿದ್ದು, ಈ ಲುಕ್ ಎಲ್ಲರ ಗಮನ ಸೆಳೆಯುತ್ತಿದೆ.

**ಹರಡಿದ ತಲೆಗೂದಲು, ಅರ್ಧ ಚಂದ್ರಾಕೃತಿಯ ಕೋಲು**

ಇನ್ನೂ 'ಕಣ್ಣಪ್ಪ' ಸಿನಿಮಾದಲ್ಲಿ ಶಿವನಾಗಿ ಅಕ್ಷಯ್ ಕುಮಾರ್ ನಟಿಸಿದ್ದಾರೆ. ಶಿವನ ಅನುಯಾಯಿ ಪ್ರಭಾಸ್ ಬಣ್ಣ ಹಚ್ಚಿದ್ದಾರೆ. ಸಿನಿಮಾದಲ್ಲಿ ವಿಷ್ಣು ಮಂಚು ಜೊತೆ ಮೋಹನ್ ಲಾಲ್, ಕಾಜಲ್, ಪ್ರೀತಿ ಮುಕುಂದನ್ ಸೇರಿದಂತೆ ಅನೇಕರು ನಟಿಸಿದ್ದಾರೆ. ಈ ಚಿತ್ರವನ್ನು ವಿಷ್ಣು ಮಂಚು ತಂದೆ ಮೋಹನ್ ಬಾಬು ನಿರ್ಮಾಣ ಮಾಡುತ್ತಿದ್ದಾರೆ. ಇದೇ ಏ.25ಕ್ಕೆ ಸಿನಿಮಾ ರಿಲೀಸ್ ಆಗಲಿದೆ.



# ಉದ್ಯಮಿ ಜೊತೆ ನಾಯರ್ ನಿಶ್ಚಿತಾರ್ಥ



ದಳಪತಿ ವಿಜಯ್ ನಟನೆಯ 'ಗೋಟ್' ಸಿನಿಮಾದಲ್ಲಿ ನಟಿಸಿದ್ದ ಪಾರ್ವತಿ ನಾಯರ್ ಫ್ಯಾನ್ಸ್‌ಗೆ ಸಿಹಿಸುದ್ದಿ ಕೊಟ್ಟಿದ್ದಾರೆ. ಪಾರ್ವತಿ ನಾಯರ್ ಅವರು ಚೆನ್ನೈ ಉದ್ಯಮಿ ಜೊತೆ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ. ಎಂಗೇಜ್‌ಮೆಂಟ್‌ನ ಸುಂದರ ಫೋಟೋಗಳನ್ನು ನಟಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಸದಾ ಒಂದಲ್ಲಾ ಒಂದು ಬೋಲ್ಡ್ ಫೋಟೋಶೂಟ್ ಹಾಗೂ ಸಿನಿಮಾಗಳಿಂದ ಸುದ್ದಿಯಾಗ್ತಿದ್ದ ನಟಿ ಈಗ ವೈಯಕ್ತಿಕ ವಿಚಾರವಾಗಿ ಸುದ್ದಿಯಾಗಿದ್ದಾರೆ. ಸದ್ಯ ಭಾವಿ ಪತಿ ಜೊತೆಗಿನ ರೊಮ್ಯಾಂಟಿಕ್ ಫೋಟೋ ಶೇರ್ ಮಾಡಿ ತಾವು ಎಂಗೇಜ್ ಆಗಿರೋದಾಗಿ ಪಾರ್ವತಿ ಅಧಿಕೃತವಾಗಿ ತಿಳಿಸಿದ್ದಾರೆ.

**ಫ್ಯಾನ್ಸ್‌ಗೆ ಗುಡ್ ನ್ಯೂಸ್ ಕೊಟ್ಟ ನಟಿ**


ಚೆನ್ನೈ ಮೂಲದ ಉದ್ಯಮಿ ಆಶ್ರಿತ್ ಅಶೋಕ್ ಜೊತೆ ಪಾರ್ವತಿ ಮದುವೆಗೆ ಸಜ್ಜಾಗಿದ್ದು, ಸದ್ಯದಲ್ಲೇ ಇಬ್ಬರೂ ಹೊಸ ಬದುಕಿಗೆ ಕಾಲಿಡಲಿದ್ದಾರೆ. ಮದುವೆ ಡೇಟ್ ಬಗ್ಗೆ ಸದ್ಯದಲ್ಲೇ ರಿವೀಲ್ ಮಾಡಲಿದ್ದಾರೆ.

ಇದೀಗ ನಟಿಗೆ ಸೌತ್ ಕಲಾವಿದರು ಮತ್ತು ಅಭಿಮಾನಿಗಳು ಶುಭಕೋರುತ್ತಿದ್ದಾರೆ. ಅಂದಹಾಗೆ, ಪಾರ್ವತಿ ನಾಯರ್ ಅವರು ಮಲಯಾಳಂ, ತೆಲುಗು, ತಮಿಳು ಸಿನಿಮಾಗಳಲ್ಲಿ ಹೆಚ್ಚು ಆಕ್ಟೀವ್ ಆಗಿದ್ದಾರೆ. ಕನ್ನಡದ ಸ್ಟೋರಿ ಕಥೆ, ಕಿಶೋರ್ ನಟನೆಯ 'ವಾಸ್ಕೋಡಿ ಗಾಮ' ಸಿನಿಮಾದಲ್ಲಿ ಪಾರ್ವತಿ ನಟಿಸಿದ್ದಾರೆ.

# ಕುಂಭಮೇಳದಲಿ ಸಾನ್ಯ ಭಾಗಿ

ಪ್ರಯಾಗ್‌ರಾಜ್ ಮಹಾ ಕುಂಭಮೇಳದಲ್ಲಿ ದಿನದಿಂದ ದಿನಕ್ಕೆ ಭಕ್ತಸಾಗರ ಹರಿದು ಬರುತ್ತಿದೆ. ಅಪಾರ ಸಂಖ್ಯೆಯಲ್ಲಿ ಕುಂಭ ಮೇಳದಲ್ಲಿ ಜನ ಭಾಗಿಯಾಗುತ್ತಿದ್ದಾರೆ. ಹೀಗಿರುವಾಗ 'ಬಿಗ್ ಬಾಸ್' ಖ್ಯಾತಿಯ ಸಾನ್ಯ ಅಯ್ಯರ್ ಕೂಡ ಮಹಾ ಕುಂಭಮೇಳದಲ್ಲಿ ಭಾಗಿಯಾಗಿದ್ದಾರೆ. ಈ ಕುರಿತು ನಟಿ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿದ್ದಾರೆ. ಸಾನ್ಯ ಪೋಸ್ಟ್‌ನಲ್ಲಿ, ಸಂಗಮದಲ್ಲಿ ಮೌನಿ ಅಮಾವಾಸ್ಯೆಯ ಶಾಹಿ ಸ್ನಾನವು ನನ್ನ ಅಂತರಂಗದಲ್ಲಿ ಹಲವು ವಿಷಯಗಳನ್ನು ಕಲಿಸಿದೆ. ನನಗೆ ಪುನರ್ಜನ್ಮವಲ್ಲದೆ ಬೇರೇನೂ ಅಲ್ಲ ಎಂದು ನಾನು ಭಾವಿಸುತ್ತೇನೆ. ನನ್ನ ಮುಂದಿನ ಹೊಸ ಪ್ರಯಾಣಕ್ಕಾಗಿ ನನ್ನ ಎಲ್ಲಾ ಪಿತೃಗಳು, ಪೂರ್ವಜರಿಂದ ಆಶೀರ್ವಾದವನ್ನು ಪಡೆದಿದ್ದೇನೆ. ನಾವೆಲ್ಲರೂ ಮಾನವ ಜೀವನವನ್ನು ಅನುಭವಿಸುತ್ತಿರುವ ಆಧ್ಯಾತ್ಮಿಕ ಜೀವಿಗಳು, ನೀವೆಲ್ಲರೂ ಉನ್ನತ ಕ್ಷೇತ್ರಗಳಿಗೆ ಏರಬಹುದು. ನೀವು ನಿಜವಾಗಿಯೂ ಯಾರೆಂದು ನೋಡಬಹುದು ಎಂದು ನಾನು ಭಾವಿಸುತ್ತೇನೆ. ಭೂಮಿಯ ಮೇಲಿನ ನಿಮ್ಮ ಉದ್ದೇಶವು ಈಡೇರಲಿ. ಲೋಕ ಸಮಸ್ತಃ ಸುಖಿನೋ ಭವತು ಎಂದು ಬರೆದುಕೊಂಡಿದ್ದಾರೆ. ಅಂದಹಾಗೆ, 'ಬಿಗ್ ಬಾಸ್ ಕನ್ನಡ 9'ರ ಸ್ಪರ್ಧಿಯಾಗಿ ಸಾನ್ಯ ಗುರುತಿಸಿಕೊಂಡಿದ್ದಾರೆ. 'ಗೌರಿ' ಎಂಬ ಸಿನಿಮಾದ ಮೂಲಕ ಸಮರ್ಜಿತ್ ಲಂಕೇಶ್‌ಗೆ ಅವರು ನಾಯಕಿಯಾಗಿ ನಟಿಸಿದ್ದರು.

# ಸಿನಿಮಾ ಆಫರ್‌ಗೆ ಡೋಂಟ್ ಕೇರ್



**ಹೆಚ್ಚಾಯ್ತು ಹನುಮಂತನಿಗೆ ಬೇಡಿಕೆ**

ಕನ್ನಡದ ಅತೀ ದೊಡ್ಡ ರಿಯಾಲಿಟಿ ಶೋ 'ಬಿಗ್ ಬಾಸ್ 11'ರ ವಿನ್ನರ್ ಆಗಿರೋ ಹನುಮಂತಗೆ ಸಿನಿಮಾ ಆಫರ್‌ಗಳು ಅರಸಿ ಬರುತ್ತಿವೆ. ಬಿಗ್ ಬಾಸ್ ಶೋ ಬಳಿಕ ಹನುಮಂತಗೆ ಬೇಡಿಕೆ ಹೆಚ್ಚಾಗಿದ್ದು, ಸಿನಿಮಾಗೆ ನೋ ಎಂದಿದ್ದಾರೆ.

ಬಿಗ್ ಬಾಸ್‌ನಲ್ಲಿ ಗೆದ್ದ ಬಳಿಕ ಹನುಮಂತಗೆ ಸಿನಿಮಾ ಆಫರ್‌ಗಳ ಸುರಿಮಳೆ ಹರಿದು ಬರುತ್ತಿದೆ. ಆದರೆ ಕಿರುತೆರೆ ಹೊರತು ಸಿನಿಮಾ ಸಹವಾಸವೇ ಬೇಡವೆಂಬ ತೀರ್ಮಾನಕ್ಕೆ ಬಂದಿದ್ದಾರೆ ಹನುಮಂತ. ಒಂದಾದ್ಮೇಲೊಂದು ರಿಯಾಲಿಟಿ ಶೋ ಮಾಡ್ತಿರುವ ಹನುಮಂತ ಟಿವಿ ಮೂಲಕ ಜನರ ಪ್ರೀತಿ ಗಳಿಸುವ ನಿಟ್ಟಿನಲ್ಲಿದ್ದಾರೆ. ದೊಡ್ಮನೆಯಿಂದ ಹೊರ ಬಂದಾದ್ಮೇಲೆ ಮದುವೆ ಹಾಗೂ ಮನೆ ಕಟ್ಟಬೇಕು ಎಂದು ಪ್ಲ್ಯಾನ್ ಮಾಡಿದ್ದಾರೆ. ಕುಟುಂಬಕ್ಕೆ ಹೆಚ್ಚು ಗಮನ ನೀಡುತ್ತಿದ್ದಾರೆ. ಹೀಗಾಗಿ ಸಿನಿಮಾ ಆಫರ್‌ಗಳು ಬಂದರೂ ಸಹ ಹನುಮಂತ ಡೋಂಟ್ ಕೇರ್ ಎಂದಿದ್ದಾರೆ.

# ತಂಡೇಲ್ ಸಿನಿಮಾಗೆ

## 5 ಕೋಟಿ ರೂಪಾಯಿ ಸಂಭಾವನೆ



ಸಾಯಿ ಪಲ್ಲವಿ ಮತ್ತು ನಾಗ ಚೈತನ್ಯ ಅವರು ಎರಡನೇ ಬಾರಿಗೆ ಜೋಡಿಯಾಗಿ ನಟಿಸಿರುವ 'ತಂಡೇಲ್' ಸಿನಿಮಾ ಬಿಡುಗಡೆಗೆ ಸಜ್ಜಾಗಿದೆ. ಫೆಬ್ರವರಿ 7ರಂದು ಈ ಸಿನಿಮಾ ತೆರೆಕಾಣಲಿದೆ. ಈಗಾಗಲೇ ಟ್ರೇಲರ್ ಮೂಲಕ ಸಿನಿಮಾ ಕೌತುಕ ಸೃಷ್ಟಿಸಿದೆ. ಮೀನುಗಾರನ ಪಾತ್ರದಲ್ಲಿ ನಾಗ ಚೈತನ್ಯ ಅವರು ನಟಿಸಿದ್ದಾರೆ.

ಹಳ್ಳಿ ಹುಡುಗಿಯಾಗಿ ಸಾಯಿ ಪಲ್ಲವಿ ಅವರು ಕಾಣಿಸಿಕೊಂಡಿದ್ದಾರೆ. ಈ ಸಿನಿಮಾಗಾಗಿ ನಾಗ ಚೈತನ್ಯ ಮತ್ತು ಸಾಯಿ ಪಲ್ಲವಿ ಅವರು ಎಷ್ಟು ಸಂಭಾವನೆ ಪಡೆದಿದ್ದಾರೆ ಎಂಬುದು ಈಗ ಬಹಿರಂಗ ಆಗಿದೆ. ಸಾಯಿ ಪಲ್ಲವಿ ಅವರಿಗಿಂತಲೂ 3 ಪಟ್ಟು ಹೆಚ್ಚು ಸಂಭಾವನೆಯನ್ನು ನಾಗ ಚೈತನ್ಯ ಅವರಿಗೆ ನೀಡಲಾಗಿದೆ. ಆ ಬಗ್ಗೆ ಇಲ್ಲಿದೆ ವಿವರ.

ನಾಗ ಚೈತನ್ಯ ಅವರು ವೃತ್ತಿಜೀವನದಲ್ಲಿ ಏಳು-ಬೀಳುಗಳು ಇವೆ. ಸಿನಿಮಾ ಮಾತ್ರವಲ್ಲದೇ ವೆಬ್ ಸಿರೀಸ್ ಮೂಲಕವೂ ಅವರು ಯಶಸ್ಸು ಕಂಡಿದ್ದಾರೆ. 'ತಂಡೇಲ್' ಸಿನಿಮಾಗಾಗಿ ಅವರು ಸಾಕಷ್ಟು ಕಷ್ಟಪಟ್ಟಿದ್ದಾರೆ. ವರದಿಗಳ ಪ್ರಕಾರ ಈ ಚಿತ್ರಕ್ಕಾಗಿ ಅವರು ಬರೋಬ್ಬರಿ 15 ಕೋಟಿ ರೂಪಾಯಿ ಸಂಭಾವನೆ ಪಡೆದಿದ್ದಾರೆ. ಈವರೆಗಿನ ವೃತ್ತಿಜೀವನದಲ್ಲಿ ಅವರು ಪಡೆದ ಅತಿ ದೊಡ್ಡ ಸಂಭಾವನೆ ಇದಾಗಿದೆ.

**ಟ್ರೇಲರ್‌ನಲ್ಲಿ ಸಾಯಿ ಪಾತ್ರ ಹೈಲೈಟ್**

ಇನ್ನು, ಸಾಯಿ ಪಲ್ಲವಿ ಕೂಡ ಬಹುಬೇಡಿಕೆಯ ನಟಿ. ಬಹುಭಾಷೆಯಲ್ಲಿ ಅವರು ಮಿಂಚುತ್ತಾರೆ. ಗ್ಲಾಮರ್ ಮೇಲೆ ಅವಲಂಬಿತವಾಗದೇ ನಟನೆಯ ಮೂಲಕವೇ ಅವರು ಎಲ್ಲಾರ ಹೃದಯ ಗೆದ್ದಿದ್ದಾರೆ. 'ತಂಡೇಲ್' ಸಿನಿಮಾದಲ್ಲಿ ನಟಿಸಿದ್ದಕ್ಕೆ ಅವರಿಗೆ 5 ಕೋಟಿ ರೂಪಾಯಿ ಸಂಭಾವನೆ ನೀಡಲಾಗಿದೆ. ಟ್ರೇಲರ್‌ನಲ್ಲಿ ಅವರ ಪಾತ್ರ ಹೈಲೈಟ್ ಆಗಿದೆ. ಈ ಸಿನಿಮಾ ನೋಡಲು ಅಭಿಮಾನಿಗಳು ಕಾದಿದ್ದಾರೆ.

ಬಿಡುಗಡೆಗೂ ಮುನ್ನವೇ 'ತಂಡೇಲ್' ಸಿನಿಮಾ ಬಗ್ಗೆ ಪಾಸಿಟಿವ್ ಟಾಕ್ ಶುರುವಾಗಿದೆ. ಸಿನಿಮಾ ರಿಲೀಸ್ ಆದ ಬಳಿಕ ಉತ್ತಮ ವಿಮರ್ಶೆ ಸಿಕ್ಕರೆ ಖಂಡಿತಾ ಸಿನಿಮಾ ಗೆಲ್ಲಲಿದೆ. ಈ ಗೆಲುವಿಗಾಗಿ ನಾಗ ಚೈತನ್ಯ ಅವರು ಕಾಯುತ್ತಿದ್ದಾರೆ. ದೇವಿ ಶ್ರೀ ಪ್ರಸಾದ್ ಅವರು ಈ ಚಿತ್ರಕ್ಕೆ ಸಂಗೀತ ನೀಡಿದ್ದಾರೆ. ಬನ್ನಿ ವಾಸು ಅವರು ಈ ಸಿನಿಮಾವನ್ನು ನಿರ್ಮಿಸಿದ್ದಾರೆ. ಚಂದು ಮೊಂಡೇಟಿ ಅವರ ನಿರ್ದೇಶನದಲ್ಲಿ 'ತಂಡೇಲ್' ಸಿನಿಮಾ ಮೂಡಿಬಂದಿದೆ.

# ದಿ ಹಂಡ್ರೆಡ್ ಲೀಗ್‌ನತ್ತ ಮುಖ ಮಾಡಿದ ಎಲ್‌ಎಸ್‌ಜಿ




ಇಂಡಿಯನ್ ಪ್ರೀಮಿಯರ್ ಲೀಗ್ ಫ್ರಾಂಚೈಸಿಗಳು ಇದೀಗ ಇಂಗ್ಲೆಂಡ್ ಕ್ರಿಕೆಟ್ ಲೀಗ್‌ನತ್ತ ಮುಖ ಮಾಡಿದೆ. ಈಗಾಗಲೇ ಐಪಿಎಲ್ ಮತ್ತು ಸೌತ್ ಆಫ್ರಿಕಾ ಟಿ20 ಲೀಗ್‌ಗಳಲ್ಲಿ ತಂಡಗಳನ್ನು ಹೊಂದಿರುವ ಮುಂಬೈ ಇಂಡಿಯನ್ಸ್ ಹಾಗೂ ಲಕ್ನೋ ಸೂಪರ್ ಜೈಂಟ್ಸ್ ಫ್ರಾಂಚೈಸಿಗಳು ಇದೀಗ ದಿ ಹಂಡ್ರೆಡ್ ಲೀಗ್‌ನಲ್ಲಿ ಕಣಕ್ಕಿಳಿಯಲು ಸಜ್ಜಾಗುತ್ತಿದೆ.

ಇಂಡಿಯನ್ ಪ್ರೀಮಿಯರ್ ಲೀಗ್‌ನ ಲಕ್ನೋ ಸೂಪರ್ ಜೈಂಟ್ಸ್ ಫ್ರಾಂಚೈಸಿ ಮಾಲೀಕರಾದ ಸಂಜೀವ್ ಗೋಯೆಂಕಾ ಅವರು ದಿ ಹಂಡ್ರೆಡ್ ಲೀಗ್‌ನಲ್ಲಿ ತಂಡ ಖರೀದಿಸಲು ಮುಂದಾಗಿದ್ದಾರೆ. ಈ ಲೀಗ್‌ನಲ್ಲಿ ಕಣಕ್ಕಿಳಿಯುತ್ತಿರುವ ಮ್ಯಾಂಚೆಸ್ಟರ್ ಒರಿಜಿನಲ್ಸ್ ಫ್ರಾಂಚೈಸಿಯ ಶೇ.49 ರಷ್ಟು ಪಾಲನ್ನು ಖರೀದಿಸಲು ಗೋಯೆಂಕಾ ಅವರ ಆರ್‌ಪಿಎಸ್‌ಜಿ ಗ್ರೂಪ್ ಅತ್ಯಧಿಕ ಬಿಡ್ ಸಲ್ಲಿಸಿದೆ. ಶುಕ್ರವಾರ ನಡೆದ ಬಿಡ್ಡಿಂಗ್‌ನಲ್ಲಿ ಆರ್‌ಪಿಎಸ್‌ಜಿ ಗ್ರೂಪ್ ಲಂಡನ್ ಸ್ಪಿರಿಟ್ ಫ್ರಾಂಚೈಸಿಯನ್ನು ಖರೀದಿಸುವ ಪ್ರಯತ್ನ ಮಾಡಿತ್ತು. ಆದರೆ ಈ ಪ್ರಯತ್ನದಲ್ಲಿ ವಿಫಲರಾದ ಬೆನ್ನಲ್ಲೇ ಇದೀಗ ಮ್ಯಾಂಚೆಸ್ಟರ್ ಒರಿಜಿನಲ್ಸ್ ಫ್ರಾಂಚೈಸಿಯ ಬಹುಪಾಲನ್ನು ಖರೀದಿಸಲು ಅತ್ಯಧಿಕ ಬಿಡ್ ಸಲ್ಲಿಸಿದೆ.ಸದ್ಯ ಮ್ಯಾಂಚೆಸ್ಟರ್ ಒರಿಜಿನಲ್ಸ್ ಫ್ರಾಂಚೈಸಿಯು ಲಂಕಾಷೈರ್ ಕೌಂಟಿ ಕ್ಲಬ್ ಒಡೆತನದಲ್ಲಿದ್ದು, ಇದೀಗ ಸಂಜೀವ್ ಗೋಯೆಂಕಾ ಈ ಫ್ರಾಂಚೈಸಿಯ ಶೇ. 49 ರಷ್ಟು ಪಾಲನ್ನು ಖರೀದಿಸಲು ಮುಂದಾಗಿದ್ದಾರೆ. ಅತ್ತ ಸಾಲದ ಸುಳಿಯಲ್ಲಿರುವ ಲಂಕಾಷೈರ್ ಈ ಹಿಂದೆ ಮ್ಯಾಂಚೆಸ್ಟರ್ ಒರಿಜಿನಲ್ಸ್ ಫ್ರಾಂಚೈಸಿಯ ಶೇ.51 ರಷ್ಟು ಷೇರು ಮಾರಾಟ ಮಾಡುವುದಾಗಿ ತಿಳಿಸಿದ್ದರು. ಇದೀಗ ಲಕ್ನೋ ಸೂಪರ್ ಜೈಂಟ್ಸ್ ಮಾಲೀಕರು ದಿ ಹಂಡ್ರೆಡ್ ಲೀಗ್‌ನತ್ತ ಮುಖ ಮಾಡಿರುವುದರಿಂದ ಮ್ಯಾಂಚೆಸ್ಟರ್ ಒರಿಜಿನಲ್ಸ್ ಫ್ರಾಂಚೈಸಿಯು ಸಂಜೀವ್ ಗೋಯೆಂಕಾ ಪಾಲಾಗುವ ಸಾಧ್ಯತೆ ಹೆಚ್ಚಿದೆ. ಒಂದು ವೇಳೆ ಮ್ಯಾಂಚೆಸ್ಟರ್ ಒರಿಜಿನಲ್ಸ್ ಫ್ರಾಂಚೈಸಿಯು ಸಂಜೀವ್ ಗೋಯೆಂಕಾ ಪಾಲಾದರೆ, ಇದು ಆರ್‌ಪಿಎಸ್‌ಜಿ ಗ್ರೂಪ್‌ನ ಮೂರನೇ ತಂಡವಾಗಲಿದೆ.

**ಮಾಲೀಕರಾದ ಸಂಜೀವ್ ಗೋಯೆಂಕಾ**

ಇದಕ್ಕೂ ಮುನ್ನ ಆರ್‌ಪಿಎಸ್‌ಜಿ ಗ್ರೂಪ್ ಐಪಿಎಲ್‌ನಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಹಾಗೂ ಸೌತ್ ಆಫ್ರಿಕಾ ಟಿ20 ಲೀಗ್‌ನಲ್ಲಿ ಡರ್ಬನ್ ಸೂಪರ್ ಜೈಂಟ್ಸ್ ತಂಡಗಳನ್ನು ಖರೀದಿಸಿದೆ. ಇದೀಗ ಮೂರನೇ ತಂಡದ ಖರೀದಿಗಾಗಿ ಸಂಜೀವ್ ಗೋಯೆಂಕಾ ಮುಂದಾಗಿದ್ದು, ಅದರ ಮೊದಲ ಹೆಜ್ಜೆಯಾಗಿ ಮ್ಯಾಂಚೆಸ್ಟರ್ ಒರಿಜಿನಲ್ಸ್ ಫ್ರಾಂಚೈಸಿಯ ಪಾಲು ಖರೀದಿಗಾಗಿ ಅತ್ಯಧಿಕ ಮೊತ್ತವನ್ನು ಬಿಡ್ ಮಾಡಿದೆ.

**ಓವಲ್-ಮುಂಬೈ ಇಂಡಿಯನ್ಸ್:** ಮುಂಬೈ ಇಂಡಿಯನ್ಸ್ (ಇಂಡಿಯಾವಿನ್ ಸ್ಪೋರ್ಟ್ಸ್ ಪ್ರೈ. ಲಿಮಿಟೆಡ್) ಈಗಾಗಲೇ ದಿ ಹಂಡ್ರೆಡ್ ಲೀಗ್‌ಗೆ ಕಾಲಿಟ್ಟಿದೆ.

ಈ ಬಾರಿ ನಡೆದ ತಂಡಗಳ ಬಿಡ್ಡಿಂಗ್‌ನಲ್ಲಿ ಓವಲ್ ಇನ್ವಿನ್ಸಿಬಲ್ ತಂಡದ ಶೇ. 49 ರಷ್ಟು ಪಾಲನ್ನು ಖರೀದಿಸುವಲ್ಲಿ ಮುಂಬೈ ಇಂಡಿಯನ್ಸ್ ಫ್ರಾಂಚೈಸಿ ಯಶಸ್ವಿಯಾಗಿದೆ.

ಈ ಮೂಲಕ ಇಂಗ್ಲೆಂಡ್‌ನ ಕ್ರಿಕೆಟ್ ಟೂರ್ನಿಗೆ ಕಾಲಿಟ್ಟಿರುವ ಮುಂಬೈ ಇಂಡಿಯನ್ಸ್, ಮುಂಬರುವ ದಿ ಹಂಡ್ರೆಡ್ ಲೀಗ್‌ನಲ್ಲಿ ಓವಲ್ ಇನ್ವಿನ್ಸಿಬಲ್ ತಂಡವನ್ನು ಓವಲ್ ಹೆಸರಿನಲ್ಲಿ ಕಣಕ್ಕಿಳಿಸುವ ಸಾಧ್ಯತೆಯಿದೆ. ಇದರ ಬೆನ್ನಲ್ಲೇ ಲಕ್ನೋ ಸೂಪರ್ ಜೈಂಟ್ಸ್ ಫ್ರಾಂಚೈಸಿ ಕೂಡ ದಿ ಹಂಡ್ರೆಡ್ ಲೀಗ್‌ನತ್ತ ಮುಖ ಮಾಡಿದ್ದು, ಮ್ಯಾಂಚೆಸ್ಟರ್ ಒರಿಜಿನಲ್ಸ್ ತಂಡದ ಪಾಲನ್ನು ಖರೀದಿಸುವ ಪ್ರಯತ್ನದಲ್ಲಿದೆ. ಹೀಗಾಗಿ ಮುಂಬರುವ ದಿ ಹಂಡ್ರೆಡ್ ಲೀಗ್‌ನಲ್ಲಿ ಓವಲ್, ಮ್ಯಾಂಚೆಸ್ಟರ್ ಸೂಪರ್ ಜೈಂಟ್ಸ್ ಹೆಸರಿನ ತಂಡಗಳು ಕಾಣಿಸಿಕೊಂಡರೆ ಅಚ್ಚರಿಪಡಬೇಕಿಲ್ಲ.

# ಕೊಹ್ಲಿ ಮತ್ತೆ ಕ್ಯಾಪ್ಟನ್ ಆಗ್ತಾರಾ

2025ನೇ ಸಾಲಿನ ಇಂಡಿಯನ್ ಪ್ರೀಮಿಯರ್ ಲೀಗ್ ಟೂರ್ನಿಗೆ ದಿನಗಣನೆ ಶುರುವಾಗಿದೆ. ಮುಂಬರುವ ಮಾರ್ಚ್ 21ರಿಂದ 18ನೇ ಆವೃತ್ತಿಯ ಐಪಿಎಲ್ ಟೂರ್ನಿಗೆ ಅಧಿಕೃತ ಚಾಲನೆ ಸಿಗಲಿದೆ. ಮಿಲಿಯನ್ ಡಾಲರ್ ಟೂರ್ನಿಗೆ ಎಲ್ಲಾ ತಂಡಗಳು ಈಗಿನಿಂದಲೇ ಭರದ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿವೆ. ಕಳೆದ 17 ಆವೃತ್ತಿಯ ಐಪಿಎಲ್ ಟೂರ್ನಿಯಲ್ಲಿ ಪಾಲ್ಗೊಂಡಿದ್ದರೂ ಕಪ್ ಗೆಲ್ಲಲು ಪದೇ ಪದೇ ವಿಫಲವಾಗುತ್ತಾ ಬಂದಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಮೇಲೆ ಇದೀಗ ಎಲ್ಲರ ಚಿತ್ತ ನೆಟ್ಟಿದೆ.

ಹೌದು, ಕಳೆದ ಬಾರಿ ಫಾಫ್ ಡು ಪ್ಲೆಸಿಸ್ ಆರ್‌ಸಿಬಿ ತಂಡದ ನಾಯಕರಾಗಿದ್ದರು. ಇದೀಗ 18ನೇ ಆವೃತ್ತಿಯ ಐಪಿಎಲ್ ಟೂರ್ನಿಯಲ್ಲಿ ಆರ್‌ಸಿಬಿ ತಂಡವು ಹೊಸ ನಾಯಕನೊಂದಿಗೆ ಕಣಕ್ಕಿಳಿಯಲಿದೆ. ಎಲ್ಲರಲ್ಲೂ ಇದೀಗ ಆರ್‌ಸಿಬಿ ತಂಡದ ನೂತನ ನಾಯಕ ಯಾರಾಗಬಹುದು ಎನ್ನುವ ಕುತೂಹಲ ಜೋರಾಗಿದೆ. ಇದೀಗ ಆರ್‌ಸಿಬಿ ನಾಯಕತ್ವದ ಕುರಿತಂತೆ ಫ್ರಾಂಚೈಸಿಯು ಮಹತ್ವದ ಅಪ್‌ಡೇಟ್ ನೀಡಿದೆ. 2025ರ ಐಪಿಎಲ್ ಆಟಗಾರರ ಹರಾಜಿನಲ್ಲಿ ಆರ್‌ಸಿಬಿ ಫ್ರಾಂಚೈಸಿಯು ಯಾವುದೇ ನಾಯಕರಾಗಿರುವ ಅನುಭವ ಇರುವ ಆಟಗಾರರನ್ನು ಖರೀದಿಸಲು ಮನಸು ಮಾಡದೇ ಇರುವುದು ಸಾಕಷ್ಟು ಅಚ್ಚರಿಗೆ ಕಾರಣವಾಯಿತು. ಕೆ ಎಲ್ ರಾಹುಲ್, ಜೋಸ್ ಬಟ್ಲರ್, ರಿಷಭ್ ಪಂತ್, ಶ್ರೇಯಸ್ ಅಯ್ಯರ್ ಅವರಂತಹ ನಾಯಕತ್ವದ ಅನುಭವ ಇರುವ ಆಟಗಾರರು ಹರಾಜಿನಲ್ಲಿ ಇದ್ದರೂ ಸಹಾ ಆರ್‌ಸಿಬಿ ತನ್ನ ತೆಕ್ಕೆಗೆ ಸೆಳೆದುಕೊಳ್ಳಲು ಮನಸ್ಸು ಮಾಡಿರಲಿಲ್ಲ. ಇದರ ಬೆನ್ನಲ್ಲೇ ವಿರಾಟ್ ಕೊಹ್ಲಿಯೇ ಮತ್ತೊಮ್ಮೆ ಆರ್‌ಸಿಬಿ ತಂಡದ ನಾಯಕರಾಗಬಹುದು ಎನ್ನುವ ಆಸೆ ಆರ್‌ಸಿಬಿ ಅಭಿಮಾನಿಗಳ ಮನದಲ್ಲಿ ಮನೆ ಮಾಡಿದೆ.





# ನಿವೃತ್ತಿ ಘೋಷಿಸಿದ ದಿಮುತ್ ಕರುಣರತ್ನೆ



ಶ್ರೀಲಂಕಾ ಮತ್ತು ಆಸ್ಟ್ರೇಲಿಯಾ ನಡುವಣ 2ನೇ ಟೆಸ್ಟ್ ಪಂದ್ಯವು ಫೆಬ್ರವರಿ 10 ರಿಂದ ಶುರುವಾಗಲಿದೆ. ಗಾಲೆ ಇಂಟರ್‌ನ್ಯಾಷನಲ್ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯದ ಮೂಲಕ ಲಂಕಾ ತಂಡದ ಆರಂಭಿಕ ಬ್ಯಾಟರ್ ದಿಮುತ್ ಕರುಣರತ್ನೆ ಅಂತಾರಾಷ್ಟ್ರೀಯ ಕ್ರಿಕೆಟ್ ಕೆರಿಯರ್‌ಗೆ ವಿದಾಯ ಹೇಳಲಿದ್ದಾರೆ. ಶ್ರೀಲಂಕಾ ತಂಡದ ಸ್ಟಾರ್ ಆಟಗಾರ ದಿಮುತ್ ಕರುಣರತ್ನೆ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ್ದಾರೆ. ಅದು ಕೂಡ ತಮ್ಮ 100ನೇ ಟೆಸ್ಟ್ ಪಂದ್ಯದ ಮೂಲಕ ಎಂಬುದು ವಿಶೇಷ. ಆಸ್ಟ್ರೇಲಿಯಾ ವಿರುದ್ಧದ 2ನೇ ಟೆಸ್ಟ್ ಪಂದ್ಯದಲ್ಲಿ ಕಣಕ್ಕಿಳಿಯುವ ಮೂಲಕ ದಿಮುತ್ 100 ಟೆಸ್ಟ್ ಪಂದ್ಯಗಳ ಸಾಧನೆ ಮಾಡಲಿದ್ದಾರೆ. ಈ ಪಂದ್ಯದೊಂದಿಗೆ ಅಂತಾರಾಷ್ಟ್ರೀಯ ಕ್ರಿಕೆಟ್ ಕೆರಿಯರ್ ಕೊನೆಗೊಳಿಸಲು ದಿಮುತ್ ಕರುಣರತ್ನೆ ನಿರ್ಧರಿಸಿದ್ದಾರೆ. ಅದರಂತೆ ಫೆಬ್ರವರಿ 10 ರಿಂದ ಶುರುವಾಗಲಿರುವ ಆಸ್ಟ್ರೇಲಿಯಾ ವಿರುದ್ಧದ ದ್ವಿತೀಯ ಟೆಸ್ಟ್ ಪಂದ್ಯದ ಮೂಲಕ ದಿಮುತ್ ಅಂತಾರಾಷ್ಟ್ರೀಯ ವೃತ್ತಿಜೀವನಕ್ಕೆ ಗುಡ್ ಬೈ ಹೇಳಲಿದ್ದಾರೆ.

36 ವರ್ಷದ ದಿಮುತ್ ಕರುಣರತ್ನೆ ಶ್ರೀಲಂಕಾ ಪರ ಈವರೆಗೆ 99 ಟೆಸ್ಟ್ ಪಂದ್ಯಗಳನ್ನಾಡಿದ್ದಾರೆ. ಈ ವೇಳೆ 189 ಇನಿಂಗ್ಸ್ ಆಡಿರುವ ಅವರು 1 ದ್ವಿಶತಕ, 16 ಶತಕಗಳೊಂದಿಗೆ ಒಟ್ಟು 7172 ರನ್ ಕಲೆಹಾಕಿದ್ದಾರೆ. ಹಾಗೆಯೇ 39 ಅರ್ಧ ಶತಕಗಳನ್ನು ಸಹ ಬಾರಿಸಿದ್ದಾರೆ. ಇನ್ನು ಶ್ರೀಲಂಕಾ ಪರ 50 ಏಕದಿನ ಪಂದ್ಯಗಳಲ್ಲಿ ಕಣಕ್ಕಿಳಿದಿರುವ ದಿಮುತ್ ಕರುಣರತ್ನೆ 46 ಇನಿಂಗ್ಸ್‌ಗಳಿಂದ ಒಟ್ಟು 1316 ರನ್ ಕಲೆಹಾಕಿದ್ದಾರೆ. ಈ ವೇಳೆ ಒಂದು ಶತಕ ಹಾಗೂ 11 ಅರ್ಧಶತಕಗಳನ್ನು ಬಾರಿಸಿದ್ದಾರೆ. 2011 ರಲ್ಲಿ ಶುರುವಾದ ಅಂತಾರಾಷ್ಟ್ರೀಯ ಕೆರಿಯರ್ ಅನ್ನು ದಿಮುತ್ ಕರುಣರತ್ನೆ ಅಂತ್ಯಗೊಳಿಸಲು ನಿರ್ಧರಿಸಿದ್ದು, ಅದರಂತೆ ಗಾಲೆ ಇಂಟರ್‌ನ್ಯಾಷನಲ್ ಸ್ಟೇಡಿಯಂನಲ್ಲಿ ನಡೆಯಲಿರುವ 2ನೇ ಟೆಸ್ಟ್ ಪಂದ್ಯದ ಮೂಲಕ ಅಂತಾರಾಷ್ಟ್ರೀಯ ವೃತ್ತಿಜೀವನಕ್ಕೆ ವಿದಾಯ ಹೇಳಲಿದ್ದಾರೆ.



## 6 ಆಟಗಾರರು ಚಾಂಪಿಯನ್ಸ್ ಟ್ರೋಫಿಯಲ್ಲಿ

# ಪಾಕ್ ಪಡೆಗೆ ಸೋಲು ಖಚಿತ..!

ಐಸಿಸಿ ಚಾಂಪಿಯನ್ಸ್ ಟ್ರೋಫಿ ಟೂರ್ನಿಯು ಫೆಬ್ರವರಿ 19 ರಿಂದ ಶುರುವಾಗಲಿದೆ. ಏಕದಿನ ಮಾದರಿಯಲ್ಲಿ ನಡೆಯಲಿರುವ ಈ ಬಾರಿಯ ಟೂರ್ನಿಯಲ್ಲಿ ಒಟ್ಟು 8 ತಂಡಗಳು ಕಣಕ್ಕಿಳಿಯಲಿವೆ.

ಆ ತಂಡಗಳೆಂದರೆ ಭಾರತ, ಪಾಕಿಸ್ತಾನ್, ಆಸ್ಟ್ರೇಲಿಯಾ, ಬಾಂಗ್ಲಾದೇಶ್, ಇಂಗ್ಲೆಂಡ್, ನ್ಯೂಝಿಲೆಂಡ್, ಅಫ್ಘಾನಿಸ್ತಾನ್ ಮತ್ತು ಸೌತ್ ಆಫ್ರಿಕಾ. ಬಹು ನಿರೀಕ್ಷಿತ ಚಾಂಪಿಯನ್ಸ್ ಟ್ರೋಫಿ ಆರಂಭಕ್ಕೆ ದಿನಗಣನೆ ಶುರುವಾಗಿದೆ. ಈ ಟೂರ್ನಿಗಾಗಿ ಆತಿಥೇಯ ಪಾಕಿಸ್ತಾನ್ ತಂಡವನ್ನು ಪ್ರಕಟಿಸಲಾಗಿದೆ. 15 ಸದಸ್ಯರ ಈ ತಂಡದ ಆಯ್ಕೆಯ ಬೆನ್ನಲ್ಲೇ ಅಪಸ್ವರಗಳು ಕೇಳಿ ಬಂದಿದೆ. ಅದರಲ್ಲೂ ಪಾಕಿಸ್ತಾನ್ ತಂಡದ ಮಾಜಿ ನಾಯಕ ವಾಸಿಂ ಅಕ್ರಂ, ಅಬ್ದುರ್ ರೌಫ್ ಖಾನ್ ತಂಡದ ಬಲಿಷ್ಠತೆಯ ಬಗ್ಗೆ ಪ್ರಶ್ನೆಗಳೆನ್ನೆತ್ತಿದ್ದಾರೆ. ಚಾಂಪಿಯನ್ಸ್ ಟ್ರೋಫಿ ತಂಡದ ಬಗ್ಗೆ ಪ್ರಶ್ನೆಗಳನ್ನು ಎತ್ತಿರುವ ಪಾಕಿಸ್ತಾನದ ಲೆಜೆಂಡ್ ಕ್ರಿಕೆಟರ್ ಅಬ್ದುರ್ ರೌಫ್ ಖಾನ್, ಈ ತಂಡದಿಂದ ಟೂರ್ನಿ ಗೆಲ್ಲುವುದು ಅಸಾಧ್ಯ ಎಂದಿದ್ದಾರೆ. ಪಾಕ್ ಟಿವಿ ಚಾನೆಲ್ ಚರ್ಚೆಯಲ್ಲಿ ಕಾಣಿಸಿಕೊಂಡ ರೌಫ್ ಖಾನ್, ತಂಡದಲ್ಲಿನ ಪ್ರಮುಖ ನ್ಯೂನ್ಯತೆಗಳನ್ನು ಎತ್ತಿ ತೋರಿಸಿದ್ದಾರೆ. ಪಾಕಿಸ್ತಾನ್ ತಂಡದಲ್ಲಿ 6 ಆಟಗಾರರನ್ನು ಯಾವ ಆಧಾರದ ಮೇಲೆ ಆಯ್ಕೆ ಮಾಡಿದ್ದಾರೆ ಎಂಬುದೇ ತಿಳಿಯುತ್ತಿಲ್ಲ ಎಂದು ಅಬ್ದುರ್ ರೌಫ್ ಖಾನ್ ಹೇಳಿದ್ದಾರೆ. ಏಕೆಂದರೆ ಈ ಆಟಗಾರರು ಏಕದಿನ ಟೂರ್ನಿ ಆಡಿ ವರ್ಷಗಳೇ ಕಳೆದಿವೆ. ಇನ್ನು ಕೆಲವರಿಗೆ ಅನುಭವದ ಕೊರತೆಯಿದೆ. ಆ ಆಟಗಾರರೆಂದರೆ ಫಖರ್ ಝಮಾನ್- 2023ರ ವಿಶ್ವಕಪ್‌ನಲ್ಲಿ ಪಾಕಿಸ್ತಾನ ಪರ ತಮ್ಮ ಕೊನೆಯ ಏಕದಿನ ಪಂದ್ಯವನ್ನು ಆಡಿದ್ದರು. ಉಸ್ಮಾನ್ ಖಾನ್ ಚಾಂಪಿಯನ್ಸ್ ಟ್ರೋಫಿಯ ಮೂಲಕ ಪಾಕಿಸ್ತಾನ್ ಪರ ಏಕದಿನ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡುವುದನ್ನು ಎದುರು ನೋಡುತ್ತಿದ್ದಾರೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**